ಬೆಂಗಳೂರು ಸಂಪುಟ: 16 ಸಂಚಿಕೆ: 16 ಪುಟ: 06 ಗುರುವಾರ 05-12-2024 Mail: mussanje2010@gmail.com ₹ 3

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

Honourary Editor: Venkatesh



## ಆಕ್ಟಿಂಗ್ ಬರಲ್ಲ ಅಂತ ರಿಜೆಕ್ಟ್ ಮಾಡಿಬಿಟ್ರು

## ಎಮರ್ಜೆನ್ಸಿಗೆ ಕೊನೆಗೂ ಬಿಡುಗಡೆಯ ಭಾಗ್ಯ

## ಅಪ್ಪಾಜಿಯನ್ನು ನಾನು ಎಂದಿಗೂ ಅನುಕರಿಸಲ್ಲ...

ಪುಟ 6

### ನಮ್ಮ ಆಚಾರ ವಿಚಾರ ಜನರಿಗೆ ತಲುಪಿಸಿದರೆ ಬಿಜೆಪಿ-ಜೆಡಿಎಸ್‌ಗ್ಯಾಕೆ ಹೊಟ್ಟೆಯುರಿ

# ಬಲ ಪ್ರದರ್ಶನ ಅಗತ್ಯವಿಲ್ಲ

### ಕಾಂಗ್ರೆಸ್ ಜನಕಲ್ಯಾಣ ಸಮಾವೇಶಕ್ಕೆ ಹರಿದು ಬಂದ ಜನಸ್ತೋಮ

ಬೆಂಗಳೂರು: "ನಮಗೆ ಬಲ ಪ್ರದರ್ಶನದ ಅಗತ್ಯವಿಲ್ಲ. ನಮ್ಮ ಪಕ್ಷದ ಆಚಾರ ವಿಚಾರಗಳನ್ನು ಜನರಿಗೆ ತಿಳಿಸಲು ಕಾರ್ಯಕ್ರಮ ಮಾಡಿದರೆ ಬಿಜೆಪಿ ಮತ್ತು ಜೆಡಿಎಸ್ ನವರಿಗೆ ಹೊಟ್ಟೆಯುರಿ ಏಕೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದರು.



ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು.

"ನಮ್ಮ ಪಕ್ಷ ಹಾಗೂ ಅನೇಕ ಸ್ವಾಭಿಮಾನಿ ಸಂಘಟನೆಗಳು ಸೇರಿ ಮಾಡುತ್ತಿರುವ ಕಾರ್ಯಕ್ರಮ. ಮುಂದೆ ಬೇರೆ ಜಿಲ್ಲೆಗಳಲ್ಲಿ ನಡೆಯುವ ಕಾರ್ಯಕ್ರಮಕ್ಕೆ ನಾವು ಸಹಕಾರ ನೀಡುತ್ತೇವೆ ಎಂದು ಅನೇಕ ಸಂಘಟನೆಗಳು ಮುಂದೆ ಬಂದಿವೆ.

ಹಾಸನದಲ್ಲಿ ನಮ್ಮ ತಾಯಂದಿರು ಕಣ್ಣೀರು ಹಾಕಿದಾಗ ಅವರ ಕಣ್ಣೀರನ್ನು ಯಾರೂ ಒರೆಸುವ ಪ್ರಯತ್ನ ಮಾಡಲಿಲ್ಲ. ಚನ್ನಪಟ್ಟಣಕ್ಕೆ ಬಂದು ಕಣ್ಣೀರು ಹಾಕಿದರು. ಬಿಜೆಪಿ ಹಾಗೂ ಜೆಡಿಎಸ್ ತಮ್ಮ ನೆಲೆ ಕಳೆದುಕೊಳ್ಳುತ್ತಿದ್ದು, ಸಂಕಟದಿಂದ ನಮ್ಮ ಕಾರ್ಯಕ್ರಮವನ್ನು ಟೀಕಿಸುತ್ತಿವೆ" ಎಂದು ತಿಳಿಸಿದರು. ಪುಟ 2

## ಶಕ್ತಿ ಪ್ರದರ್ಶನ

ಹಾಸನ:ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡರ ತವರಿನಲ್ಲಿ ಕಾಂಗ್ರೆಸ್ ಜನಕಲ್ಯಾಣ ಸಮಾವೇಶ ನಡೆಸುವ ಮೂಲಕ ಪ್ರಚಂಡ ಶಕ್ತಿ ಪ್ರದರ್ಶನ ನಡೆಸಿದೆ. ಇತ್ತೀಚೆಗೆ ನಡೆದ ಉಪಚುನಾವಣೆಯಲ್ಲಿ ಜಯಭೇರಿ ಬಾರಿಸಿರುವ ರಣೋತ್ಸಾಹದಲ್ಲಿರುವ ಕಾಂಗ್ರೆಸ್, ಬೃಹತ್ ಸಮಾವೇಶ ನಡೆಸುವ ಮೂಲಕ ಪ್ರತಿಪಕ್ಷ ಬಿಜೆಪಿ-ಜೆಡಿಎಸ್‌ಗೆ ಸಡ್ಡು ಹೊಡೆದಿದೆ.

ಕಾಂಗ್ರೆಸ್ ಪಕ್ಷದ ವತಿಯಿಂದ ಈ ಸಮಾವೇಶಕ್ಕೆ ನಡೆಸಲಾಗುತ್ತಿದ್ದರೂ ಈ ಕಾರ್ಯಕ್ರಮದಲ್ಲಿ ಸಿದ್ದರಾಮಯ್ಯರವರ ಬಲಪ್ರದರ್ಶನ ವೇದಿಕೆಗೆ ಸಾಕ್ಷಿಯಾಯಿತು.

ಸ್ವಾಭಿಮಾನ ಸಮಾವೇಶದ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ನಡುವಣ ಮುಸುಕಿನ ಗುದ್ದಾಟದ ನಡುವೆ ಸಮಾವೇಶ ನಡೆಯುತ್ತಿದೆ.

ಇದಕ್ಕಾಗಿ ಅರಸಿಕೆರೆ ರಸ್ತೆಯ ಎಸ್‌ಎಂ ಕೃಷ್ಣ ನಗರದಲ್ಲಿರುವ ಕೆಎಸ್‌ಸಿಎ ಕ್ರಿಕೆಟ್ ಮೈದಾನದಲ್ಲಿ ನಿರ್ಮಿಸಲಾಗಿರುವ ಬೃಹತ್ ವೇದಿಕೆಯಲ್ಲಿ ಕಾಂಗ್ರೆಸ್ ನಾಯಕರ ಸಮ್ಮುಖದಲ್ಲಿ ಜನಕಲ್ಯಾಣ ಸಮಾವೇಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೆವಾಲಾ ಸಮ್ಮುಖದಲ್ಲಿ ವಿಧ್ಯುಕ್ತ ಚಾಲನೆ ನೀಡಿದರು. ಪುಟ 2






ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೆ.ಆರ್.ಪೇಟೆ ಕೋಡಿಮಾರನಹಳ್ಳಿಯಲ್ಲಿ ಲಕ್ಷ್ಮೀದೇವಿ ಸಮುದಾಯ ಭವನವನ್ನು ಉದ್ಘಾಟಿಸಿದರು.

## 16 ಸ್ಥಳಗಳಲ್ಲಿ ಎನ್‌ಐಎ ದಾಳಿ, ತೀವ್ರ ಶೋಧ

**ಮಂಗಳೂರು:** ಬಿಜೆಪಿ ಯುವ ಮೋರ್ಚಾ ಮುಖಂಡ ಪ್ರವೀಣ್ ನೆಟ್ಟಾರು ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ ಇಂದು ಬೆಳಗ್ಗೆ ರಾಜ್ಯದ 16 ಸ್ಥಳಗಳಲ್ಲಿ ದಾಳಿ ನಡೆಸಿದೆ. ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ತಾಲೂಕಿನ ಬೆಳ್ಳಾರೆಯಲ್ಲಿ ಸುಮಾರು ಎರಡೂವರೆ ವರ್ಷಗಳ ಹಿಂದೆ ನಡೆದ ಬಿಜೆಪಿ ಯುವ ಮೋರ್ಚಾ ಮುಖಂಡ ಪ್ರವೀಣ್ ನೆಟ್ಟಾರು ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಎನ್‌ಐಎ ಅಧಿಕಾರಿಗಳು ಕೊಡಗು ಜಿಲ್ಲೆಯ ಪುಟ 2




## ಒಪ್ಪಂದ ಆಗಿದ್ದರೆ ಅವರಿಬ್ಬರೇ ರಾಜಕಾರಣ ನಡೆಸಲಿ, ನಾವೆಲ್ಲ ಯಾಕೆ ಬೇಕು?

ಬೆಂಗಳೂರು: ರಾಜ್ಯದಲ್ಲಿ ಅಧಿಕಾರ ಹಂಚಿಕೆ ಬಗ್ಗೆ ಒಪ್ಪಂದ ಆಗಿರುವ ವಿಚಾರ ನನಗೆ ಗೊತ್ತಿಲ್ಲ. ಒಪ್ಪಂದ ಆಗಿದೆ ಎನ್ನುವುದಾದರೆ ನಾವೆಲ್ಲ ಯಾಕಿರಬೇಕು?. ಅವರಿಬ್ಬರೇ ರಾಜಕಾರಣ ನಡೆಸಲಿ. ಬೇರೆಯವರು ಇರುವುದೇ ಬೇಡವೇ?. ಆ ರೀತಿ ಒಪ್ಪಂದ ಆಗಿರಲು ಸಾಧ್ಯವಿಲ್ಲ ಎಂದು ಗೃಹ ಸಚಿವ ಸಚಿವ ಜಿ.ಪರಮೇಶ್ವರ್ ಸೂಚ್ಯವಾಗಿ ಪ್ರತಿಕ್ರಿಯಿಸಿದ್ದಾರೆ.



ಸದಾಶಿವನಗರದ ತಮ್ಮ ನಿವಾಸದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿಎಂ ಹುದ್ದೆ ಒಪ್ಪಂದ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಒಪ್ಪಂದ ಆಗಿದೆ ಅಂತಾದ್ರೆ ನಾವೆಲ್ಲ ಯಾಕೆ ಇರಬೇಕು? ಅವರಿಬ್ಬರೇ ರಾಜಕಾರಣ ಮಾಡಿ, ಅವರಿಬ್ಬರೇ ನಡೆಸಿ ಬಿಡಲಿ, ಬೇರೆ ಅವರು ಇರೋದೇ ಬೇಡವಾ? ಅದೆಲ್ಲ ಆ ರೀತಿ ಆಗೋಕೆ ಸಾಧ್ಯವಿಲ್ಲ. ಹೈಕಮಾಂಡ್ ಬಿಟ್ಟು ನಾವು ಹೋಗೋರಲ್ಲ. ಹೈಕಮಾಂಡ್ ತೀರ್ಮಾನವನ್ನು ಒಪ್ಪಿಕೊಳ್ಳುತ್ತೇವೆ. ಒಪ್ಪಂದ ಎಲ್ಲ ನಮಗೆ ಗೊತ್ತಿಲ್ಲ ಎಂದು ಹೇಳಿದರು.

ಈ ಬಗ್ಗೆ ದೆಹಲಿ ಮತ್ತು ರಾಜ್ಯದಲ್ಲಿ ಇಬ್ಬರು, ಮೂವರನ್ನು ಕೇಳಿದ್ದೇನೆ. ಒಪ್ಪಂದ ಆಗಿದೆ ಅಂತ ಯಾರು ಹೇಳಿಲ್ಲ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಯಾವ ಅರ್ಥದಲ್ಲಿ ಹೇಳಿದ್ದಾರೋ ನನಗೆ ಗೊತ್ತಿಲ್ಲ. ಅಂತಹ ಒಪ್ಪಂದ ಆಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈಗಾಗಲೇ ಸ್ಪಷ್ಟವಾಗಿ ಹೇಳಿದ್ದಾರೆ ಎಂದರು. ಕೆಪಿಸಿಸಿ ಮತ್ತು ಸ್ವಾಭಿಮಾನಿಗಳ ಒಕ್ಕೂಟ ಒಟ್ಟಾಗಿ ಸಮಾವೇಶ ಮಾಡುತ್ತಿದ್ದು, ಪುಟ 2

## 'ಮೋದಿ ಅದಾನಿ ಒಬ್ಬರೇ': ಪ್ರತಿಭಟನೆ

**ನವದೆಹಲಿ:** ತೀವ್ರ ಪ್ರತಿಭಟನೆಯಲ್ಲಿ, ಹಲವಾರು ಇಂಡಿಯಾ ಬ್ಲಾಕ್ ಮೈತ್ರಿಕೂಟದ ನಾಯಕರು ಇಂದು ಗುರುವಾರ "ಮೋದಿ ಅದಾನಿ ಏಕ್ ಹೈ" ಮತ್ತು "ಅದಾನಿ ಸೇಫ್ ಹೈ" ಎಂಬ ಬರಹಗಳನ್ನು ಹೊಂದಿದ ಕಪ್ಪು ಜಾಕೆಟ್ ಗಳನ್ನು ಧರಿಸಿ ಅದಾನಿ ವಿರುದ್ಧ ಜಂಟಿ ಸಂಸದೀಯ ತನಿಖೆಗೆ ಒತ್ತಾಯಿಸಿ ಸಂಸತ್ತಿನ ಆವರಣದಲ್ಲಿ ಘೋಷಣೆಗಳನ್ನು ಕೂಗುತ್ತಾ ಪ್ರತಿಭಟನೆ ನಡೆಸಿದರು.ತಮ್ಮ ಟ್ರೇಡ್ ಮಾರ್ಕ್ ಬಿಳಿ ಟೀ ಶರ್ಟ್ ಮೇಲೆ ಸ್ಟಿಕ್ಕರ್ ಅಂಟಿಸಿದ ಜಾಕೆಟ್ ಧರಿಸಿ ಬಂದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಪ್ರಧಾನಿ ನರೇಂದ್ರ ಮೋದಿ ಅವರು ಅದಾನಿ ಗ್ರೂಪ್ ಅಧ್ಯಕ್ಷ ಗೌತಮ್ ಅದಾನಿ ವಿರುದ್ಧ ತನಿಖೆ ನಡೆಸಲು ಪುಟ 2

## ಸಚಿವ ಮುನಿಯಪ್ಪ ಕಾರು ಅಪಘಾತ

**ಹಾಸನ:** ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ ಅವರು ಪ್ರಯಾಣಿಸುತ್ತಿದ್ದ ಕಾರು ಅಪಘಾತಕ್ಕೀಡಾಗಿದೆ. ಶಾಂತಿಗ್ರಾಮ ರಸ್ತೆಯ ಮೂಲಕ ಹಾಸನಕ್ಕೆ ಆಗಮಿಸುತ್ತಿದ್ದ ವೇಳೆ ಶುಲ್ಕ ವಸೂಲಿ ಕೇಂದ್ರದ ಹತ್ತಿರ ಹಿಂಬದಿಯಿಂದ ಬಂದ ಕಾರು ಡಿಕ್ಕಿಯಾಗಿದೆ.

ಹಾಸನದಲ್ಲಿ ನಡೆಯುತ್ತಿರುವ ಜನಕಲ್ಯಾಣ ಸಮಾವೇಶಕ್ಕೆ ಆಗಮಿಸುತ್ತಿದ್ದ ವೇಳೆ ಆಹಾರ ಮತ್ತು ನಾಗರೀಕ ಸರಬರಾಜು ಪುಟ 2

## ಇಡಿ ಪತ್ರ: ಸಿಎಂ ಗಾಬರಿ



ಶಿವಮೊಗ್ಗ: ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ (ಇ.ಡಿ) ಲೋಕಾಯುಕ್ತಕ್ಕೆ ಪತ್ರ ಬರೆದಿರುವ ಕ್ರಮವನ್ನು ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಸಮರ್ಥಿಸಿಕೊಂಡಿದ್ದಾರೆ. ಇ.ಡಿ ಕ್ರಮದ ಬಗ್ಗೆ ಆಕ್ಷೇಪ ವ್ಯಕ್ತಪಡಿಸುತ್ತಿರುವ ಸಿಎಂ ಸಿದ್ದರಾಮಯ್ಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಇ.ಡಿ ಬಗ್ಗೆ ಏನೂ ಬೇಕಾದರೂ ಹೇಳಬಹುದು. ಆದರೆ ಇ.ಡಿ ಗೆ ಅಧಿಕಾರವಿದೆ. ಅವರ ತೀರ್ಮಾನವೇ ಅಂತಿಮವಾದುದು' ಎಂದು ತಿಳಿಸಿದ್ದಾರೆ.

'ತಮ್ಮ ವಿರುದ್ಧ ಸಾಕ್ಷ್ಯ ಸಿಕ್ಕಿ ಇ.ಡಿ ಹೇಳಿಕೆ ನೀಡುತ್ತಿರುವುದರಿಂದ ಸಿಎಂ ಗಾಬರಿ ಯಾಗಿದ್ದಾರೆ. ಈ ಕಾರಣದಿಂದ ಇ.ಡಿ ವಿರುದ್ಧ ಹೇಳಿಕೆ ನೀಡುತ್ತಿದ್ದಾರೆ. ಓರ್ವ ಸಿಎಂ ಆಗಿ ಇ.ಡಿ ಬಗ್ಗೆ ಗೌರವಯುತವಾಗಿ ನಡೆದು ಕೊಳ್ಳಬೇಕು ಎಂದು ತಾಕೀತು ಮಾಡಿದ ಅವರು, ವಾಸ್ತವ ತಿಳಿಸುವ ಕಾರ್ಯ ನಡೆಸಬೇಕು. ಆದರೆ ಇ.ಡಿ ವಿರುದ್ಧ ಹೇಳಿಕೆ ನೀಡುತ್ತಿರುವುದು ಸಿಎಂಗೆ ಶೋಭೆ ತರುವಂತದ್ದಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಾಜ್ಯಪಾಲರ ಅಧಿಕಾರ ಮೊಟಕುಗೊಳಿಸುವ ಕುರಿತಂತೆ ಸರ್ಕಾರ ಚಿಂತನೆ ನಡೆಸುತ್ತಿರುವ ಕುರಿತಂತೆ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿ, 'ಹತಾಶೆಯಿಂದ ತೀರ್ಮಾನ ಕೈಗೊಳ್ಳುತ್ತಿದ್ದಾರೆ. ಪುಟ 2

## ಪಿರಿಯಾಪಟ್ಟಣ ಮಸಣಿಕಮ್ಮ ದೇವಾಲಯಕ್ಕೆ ಖ್ಯಾತ ಗಾಯಕಿ ಎಸ್.ಜಾನಕಿ ಭೇಟಿ

**ಮೈಸೂರು:** ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ಮಸಣಿಕಮ್ಮ ದೇವಾಲಯಕ್ಕೆ ಖ್ಯಾತ ಗಾಯಕಿ ಎಸ್. ಜಾನಕಿ ಅವರು ಭೇಟಿ ನೀಡಿ ವಿಶೇಷ ಪೂಜೆ ನೆರವೇರಿಸಿದರು.



ಹಿರಿಯ ಗಾಯಕಿ ಜಾನಕಿ ಅವರು ಮಸಣಿಕಮ್ಮ ದೇವರಿಗೆ ಸೀರೆ ಉಡುಗೊರೆಯಾಗಿ ನೀಡಿ ಭಕ್ತಿ ಪುಟ 2

## ವಿಚಾರಣೆ ಜ.೨೫ಕ್ಕೆ ಮುಂದೂಡಿಕೆ



**ಬೆಂಗಳೂರು:** ಮುಡಾ ಪ್ರಕರಣದಲ್ಲಿ ತಮ್ಮ ವಿರುದ್ಧದ ತನಿಖೆಗೆ ರಾಜ್ಯಪಾಲರು ಅನುಮೋದನೆ ನೀಡಿರುವ ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೈಕೋರ್ಟ್ ನಲ್ಲಿ ಮೇಲ್ಮನವಿ ಸಲ್ಲಿಸಿದ್ದು, ಈ ಕುರಿತು ಕರ್ನಾಟಕ ಹೈಕೋರ್ಟ್ ಗುರುವಾರ ರಾಜ್ಯ ಸರ್ಕಾರ ಮತ್ತು ಇತರ ಪ್ರತಿವಾದಿಗಳಿಗೆ ನೋಟಿಸ್ ಜಾರಿ ಮಾಡಿದೆ.

ಮುಡಾ ಹಗರಣ ಸಂಬಂಧ ಸಿಎಂ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಅನುಮತಿ ನೀಡಿದ್ದ ಹೈಕೋರ್ಟ್ ಏಕಸದಸ್ಯ ಪೀಠದ ಆದೇಶ ಪ್ರಶ್ನಿಸಿ ಮುಖ್ಯಮಂತ್ರಿಗಳು ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯ ವಿಚಾರಣೆ ಗುರುವಾರ ನಡೆಯಿತು. ಮುಖ್ಯ ನ್ಯಾಯಮೂರ್ತಿ ಎನ್ ವಿ ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆ ವಿ ಅರವಿಂದ್ ಅವರ ವಿಭಾಗೀಯ ಪೀಠವು ವಾದ-ಪ್ರತಿವಾದ ಆಲಿಸಿ ಮುಂದಿನ ವಿಚಾರಣೆಯನ್ನು ಜನವರಿ 25, 2025 ರಂದು ಮುಂದೂಡಿತು.

ಏಕಸದಸ್ಯ ಪೀಠದ ತೀರ್ಪನ್ನು ಪ್ರಶ್ನಿಸಿ ಅಕ್ಟೋಬರ್ 24ರಂದು ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಸಿಎಂ ಸಿದ್ದರಾಮಯ್ಯ ಮೇಲ್ಮನವಿ ಸಲ್ಲಿಸಿದ್ದರು. ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಪೀಠವು ಸೆಪ್ಟೆಂಬರ್ 24 ರಂದು ಪ್ರಕರಣದಲ್ಲಿ ತಮ್ಮ ವಿರುದ್ಧ ತನಿಖೆಗೆ ರಾಜ್ಯಪಾಲ ಪುಟ 2

## ಮೇಕೆದಾಟು ಯೋಜನೆ ಅನುಷ್ಠಾನದಿಂದ ಬೆಂಗಳೂರು ನೀರಿನ ಬವಣೆಗೆ ಮುಕ್ತಿ

ನವದೆಹಲಿ: ಬೆಂಗಳೂರಿನಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದು, ಟ್ಯಾಂಕರ್ ಮಾಫಿಯಾ ಜನರನ್ನು ಸುಲಿಗೆ ಮಾಡುತ್ತಿದೆ ಎಂದು ಮಾಜಿ ಪ್ರಧಾನಿಗಳಾದ ಹೆಚ್.ಡಿ.ದೇವೇಗೌಡರು ಕಳವಳ ವ್ಯಕ್ತಪಡಿಸಿದರು.

ರಾಜ್ಯಸಭೆಯಲ್ಲಿ ಈ ಬಗ್ಗೆ ಮಾತನಾಡಿದ ಅವರು; ದೇಶದ ಪ್ರಮುಖ ನಗರಗಳಲ್ಲಿ ಒಂದಾಗಿರುವ, ಭಾರತದ ಮಾಹಿತಿ ತಂತ್ರಜ್ಞಾನ ರಾಜಧಾನಿ ಆಗಿರುವ ಬೆಂಗಳೂರು ಎದುರಿಸುತ್ತಿರುವ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಕೇಂದ್ರ ಸರ್ಕಾರದ ಗಮನ ಸೆಳೆದರು.

ಬೆಂಗಳೂರಿನ ನೀರಿನ ಬವಣೆ ನೀಗಿಸಬೇಕಾದರೆ



ಮೇಕೆದಾಟು ಯೋಜನೆಗೆ ಅನುಮತಿ ಸಿಗಬೇಕಿದೆ. ಎಲ್ಲಾ ರಾಜಕೀಯ ಬದಿಗಿಟ್ಟು ಈ ಯೋಜನೆಗೆ ಬೆಂಬಲ ಕೊಡಬೇಕಿದೆ ಎಂದು ಮನವಿ ಮಾಡಿದರು.

ರಾಜ್ಯದಲ್ಲಿ ಆಡಳಿತ ನಡೆಸಿದ ಎಲ್ಲಾ ಸರ್ಕಾರಗಳು ಮೇಕೆದಾಟು ಯೋಜನೆಗಾಗಿ ಕೆಲಸ ಮಾಡಿವೆ. ಆದರೆ ಇಲ್ಲಿಯವರೆಗೂ ಯಶಸ್ಸು ಸಿಕ್ಕಿಲ್ಲ. ಯೋಜನೆಗೆ ಅನುಮತಿ ನೀಡುವಂತೆ ಕೇಂದ್ರಕ್ಕೆ ಕರ್ನಾಟಕ ಸರ್ಕಾರ ಪ್ರಸ್ತಾವನೆ ಸಲ್ಲಿಸಿದೆ. ಕೇಂದ್ರ ಸರ್ಕಾರ ಆದಷ್ಟು ಬೇಗ ಒಪ್ಪಿಗೆ ನೀಡಬೇಕು ಎಂದು ಅವರು ಕೋರಿದರು.

**ಟ್ಯಾಂಕರ್ ಮಾಫಿಯಾ ಬಗ್ಗೆ ಕಳವಳ:**ಬೆಂಗಳೂರು ನಗರ ಅಗಾಧವಾಗಿ ಬೆಳೆಯುತ್ತಿದೆ. ಉದ್ಯೋಗ ಅರಸಿ ದೇಶದ ಎಲ್ಲಾ ಮೂಲೆಗಳಿಂದ ಜನರು ಅಲ್ಲಿಗೆ ಪುಟ 2

# ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾಗಿ ಎ.ನಾರಾಯಣಸ್ವಾಮಿ, ರಾಜ್ಯಪರಿಷತ್ ಸದಸ್ಯರಾಗಿ ಅಮರ್.ವಿ ಹಾಗೂ ಖಜಾಂಚಿಯಾಗಿ ಅರುಣ್ ಕುಮಾರ್ ಆಯ್ಕೆ

ವರದಿ: ಮುಬಶೀರ್ ಅಹಮದ್

ಚಿಕ್ಕಬಳ್ಳಾಪುರ: ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾಗಿ ಎ.ನಾರಾಯಣಸ್ವಾಮಿ ಆಯ್ಕೆ ಆಗಿದ್ದಾರೆ. ಅಲ್ಲದೆ ಜಿಲ್ಲಾ ಖಜಾಂಚಿ ಮತ್ತು ರಾಜ್ಯ ಪರಿಷತ್ ಸ್ಥಾನಗಳಲ್ಲಿಯೂ ನಾರಾಯಣ ಸ್ವಾಮಿ ಬಣದವರೇ ಅಧಿಕಾರ ಹಿಡಿದಿದ್ದಾರೆ. ಈ ಮೂಲಕನಾರಾಯಣ ಸ್ವಾಮಿ ಅವರು ಸಂಘದ ಮೇಲೆ ಈ ಬಾರಿ ಹಿಡಿತ ಸಾಧಿಸಿದ್ದಾರೆ.

ಗುರುವಾರ ಜಿಲ್ಲಾ ಸರ್ಕಾರಿ ನೌಕರರಸಂಘದ ಅಧ್ಯಕ್ಷ, ಜಿಲ್ಲಾ ಖಜಾಂಚಿ ಮತ್ತು ರಾಜ್ಯ ಪರಿಷತ್ ಸ್ಥಾನಕ್ಕೆ ಚುನಾವಣೆ ನಡೆಯಿತು.

ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದಎ.ನಾರಾಯಣಸ್ವಾಮಿ 38 ಮತ ಪಡೆದರೆ ಪ್ರತಿಸ್ಪರ್ಧಿ ಶಂಕರರೆಡ್ಡಿ 30 ಮತ ಪಡೆದರು. ಜಿಲ್ಲಾ ಖಜಾಂಚಿ ಸ್ಥಾನಕ್ಕೆ ಸ್ಪರ್ಧಿಸಿದ್ದ ಆರೋಗ್ಯ ಇಲಾಖೆಯ ಅರುಣ್ ಕುಮಾರ್ 39 ಮತ ಪಡೆದರೆ ಪ್ರತಿಸ್ಪರ್ಧಿಅಶ್ವತ್ಥನಾರಾಯಣ 29 ಮತ ಪಡೆದರು.ರಾಜ್ಯ ಪರಿಷತ್ ಸದಸ್ಯ ಸ್ಥಾನಕ್ಕೆ ನಡೆದ ಹಣಾಹಣಿಯಲ್ಲಿ ಅಮರನಾರಾಯಣ ಅವರು 35 ಮತ ಪಡೆದರೆ,ಪ್ರತಿಸ್ಪರ್ಧಿ ಮಂಜನ್ ಕುಮಾರ್ 33ಮತ ಪಡೆದರು.ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರಸಂಘದ ಎ.ನಾರಾಯಣಸ್ವಾಮಿ ಮತ್ತು ಖಜಾನೆ ಇಲಾಖೆಯ ಕೆ.ವಿ. ಶಂಕರರೆಡ್ಡಿ ಅವರ ನಡುವೆ ಅಧ್ಯಕ್ಷ ಸ್ಥಾನಕ್ಕೆತೀವ್ರ ಪೈಪೋಟಿ ಮೂಡಿತ್ತು.

ಶಂಕರ ರೆಡ್ಡಿ ಅವರು ಸಂಘದ ಮಾಜಿ ಅಧ್ಯಕ್ಷ ಹರೀಶ್ ಬಣದಿಂದ ಕಣಕ್ಕೆ ಇಳಿದಿದ್ದರು.ಸಂಘದ ಚುಕ್ಕಾಣಿ ಹಿಡಿಯಲು ಎ.ನಾರಾಯಣಸ್ವಾಮಿ ಮತ್ತು ಹರೀಶ್ ಬಣದ ನಡುವೆಪೈಪೋಟಿ ಹೆಚ್ಚಿತ್ತು.ಈ ಹಿಂದಿನ ಚುನಾವಣೆಯಲ್ಲಿಸೋಲು ಅನುಭವಿಸಿದ್ದನಾರಾಯಣಸ್ವಾಮಿ ಮತ್ತೆ ಅಧ್ಯಕ್ಷ ಸ್ಥಾನದ ಸ್ಪರ್ಧೆಯಲ್ಲಿದ್ದು ಗೆಲ್ಲಬೇಕು ಎಂದು ಛಲ ಹೊಂದಿದ್ದರು.

ಜಿಲ್ಲೆಯಲ್ಲಿ ಭಾರಿ ಕುತೂಹಲ ಮೂಡಿಸಿದ್ದ ಸರ್ಕಾರಿ ನೌಕರರ ಸಂಘಕ್ಕೆ ನೂತನ ಜಿಲ್ಲಾಧ್ಯಕ್ಷರಾಗಿ






ಎ.ನಾರಾಯಣಸ್ವಾಮಿ, ಖಜಾಂಚಿಯಾಗಿ ಆರೋಗ್ಯ ಇಲಾಖೆ ಅರುಣ್ ಕುಮಾರ್, ರಾಜ್ಯಪರಿಷತ್ ಸದಸ್ಯರಾಗಿ ಶಿಕ್ಷಕ ವರ್ಗದ ಅಮರ್. ವಿ ಆಯ್ಕೆಯಾಗಿದ್ದು, ಗೆದ್ದು ಬೀಗಿದ ಎ.ನಾರಾಯಣಸ್ವಾಮಿ ತಂಡದ ಪರವಾಗಿ ಜಯಘೋಷಣೆ ಕೂಗಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು. ಈ ಗೆಲುವು ಎಲ್ಲಾ ಸರ್ಕಾರಿ ನೌಕರರ ಗೆಲುವು ಎಂದು ನೂತನ ಅಧ್ಯಕ್ಷ ಎ.ನಾರಾಯಣಸ್ವಾಮಿಅಭಿನಂದನೆ ತಿಳಿಸಿದ್ದಾರೆ.

ಈ ವೇಳೆ ಮಾತನಾಡಿದ ನೂತನ ಜಿಲ್ಲಾಧ್ಯಕ್ಷ ಎ.ನಾರಾಯಣಸ್ವಾಮಿ ನಮ್ಮ ಗೆಲುವಿಗೆ ಸಹಕಾರ ನೀಡಿದ ಎಲ್ಲರಿಗೂ ಅಭಾರಿಯಾಗಿರುತ್ತೇನೆ ನಮ್ಮ ಐದು ವರ್ಷಗಳ ಅವಧಿಯಲ್ಲಿ ಸಮಸ್ತ ಸರ್ಕಾರಿ ನೌಕರರ ಪರವಾಗಿರುವಂತಹ ಕಾರ್ಯಕ್ರಮಗಳನ್ನು ರೂಪಿಸಿ ಅವರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಥಮ ಆದ್ಯತೆ ನೀಡಿ ಉತ್ತಮ ಆಡಳಿತ ನೀಡಲು ಶ್ರಮಿಸಲಾಗುವುದು. ಸರ್ಕಾರಿ ನೌಕರರ ಕ್ಷೇಮಾಭಿವೃದ್ಧಿ ಅವರ ಯೋಗಕ್ಷೇಮ,ತೊಂದರೆಗಳ ನಿವಾರಣೆ, ಸೌಲಭ್ಯಗಳನ್ನು ಒದಗಿಸುವುದು ನಮ್ಮ ಜವಾಬ್ದಾರಿ ಎಂದು ಭಾವಿಸಿ ಕೆಲಸ ಮಾಡಲಾಗುವುದಲ್ಲದೆ ಸಾರ್ವಜನಿಕರೊಂದಿಗೊ ಸಮನ್ವಯ ಸಾಧಿಸಿ ಸೂಕ್ತವಾಗಿ ಸ್ಪಂದಿಸಲಾಗುವುದು ಎಂದು ಹೇಳಿದರು.

ಬೇರೆ ಬೇರೆ ಕೆಲಸಗಳ ನಿಮಿತ್ತ ಇತರೆ ಕಡೆಗಳಿಂದ ಬರುವ ಸರ್ಕಾರಿ ನೌಕರರಿಗೆ ಸೂಕ್ತ ರೀತಿಯ ವಸತಿ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದಲ್ಲದೆ ಜಿಲ್ಲೆಯಲ್ಲಿ ಸರ್ಕಾರಿ ನೌಕರರ ಕೋಆಪರೇಟಿವ್ ಬ್ಯಾಂಕ್ ಸ್ಥಾಪನೆ,ಗೃಹ ನಿರ್ಮಾಣ ಸಹಕಾರ ಸಂಘ ಸ್ಥಾಪಿಸಿ ಕಡಿಮೆ ದರದಲ್ಲಿ ನಿವೇಶನ ನೀಡುವ ಆಶಯ ಕೂಡ ನಮ್ಮದಾಗಿದ್ದು, ನಮ್ಮ ಅವಧಿಯಲ್ಲಿ ಸರ್ಕಾರಿ ನೌಕರರ ಪರವಾಗಿ ದುಡಿದು ಎಲ್ಲಾ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಹಗಲಿರುಳು ದುಡಿದು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದ ಅವರು ನಮ್ಮ ತಂಡದ ಗೆಲವು ಎಲ್ಲ ಸರ್ಕಾರಿ ನೌಕರರ ಗೆಲವು ಅವರ ಒಳಿತಿಗಾಗಿ ಕಾಯ ವಾಚ ಮನಸ್ಸಿನಿಂದ ಪ್ರಾಮಾಣಿಕವಾಗಿ ಕೆಲಸ ಮಾಡಲಾಗುವುದು ಎಂದರು.

ನೂತನ ರಾಜ್ಯ ಪರಿಷತ್ ಸದಸ್ಯ ಅಮರ್.ವಿ ಮಾತನಾಡಿ ನನ್ನ ಮೊದಲ ಆದ್ಯತೆ ನೌಕರರ ಕ್ಷೇಮಾಭಿವೃದ್ಧಿ ಹಾಗೂ ಎಲ್ಲಾ ರೀತಿಯ ಸೌಕರ್ಯಗಳನ್ನು ಒದಗಿಸುವುದು ಇದರ ಜೊತೆಗೆ ಮುಖ್ಯವಾಗಿ ಎನ್.ಪಿ.ಎಸ್ ರದ್ದು ಗೊಳಿಸಿ ಒಪಿಎಸ್ ಜಾರಿಗೊಳಿಸಲು ಶ್ರಮ ವಹಿಸಲಾಗುವುದು.ಇನ್ನು ಪ್ರಸ್ತುತ ಎನ್.ಪಿ.ಎಸ್ ತಾಲ್ಲೂಕು ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸುತ್ತಿದ್ದೇನೆ ಸರ್ಕಾರಿ ನೌಕರರ ಕೂಗನ್ನ ಕೇವಲ ಜಿಲ್ಲಾ ಮಟ್ಟದಲ್ಲಿಮಾತನಾಡಬಹುದಾಗಿತ್ತು

ಆದರೆ ಈಗ ರಾಜ್ಯ ಪರಿಷತ್ ಸದಸ್ಯನಾಗಿ ಆಯ್ಕೆಯಾಗಿದ್ದೇನೆ, ರಾಜ್ಯ ಮಟ್ಟದ ಸಭೆಗಳಲ್ಲಿ ಹಾಜರಾಗುವ ಅವಕಾಶ ಮೂಡಿಬಂದಿದೆ. ಹಾಗಾಗಿ ನನ್ನ ಮೊದಲ ಏಕೈಕ ಉದ್ದೇಶ ಎನ್.ಪಿ. ಎಸ್ ರದ್ದು ಗೊಳಿಸಿ ಒಪಿಎಸ್ ಜಾರಿಗೆ ತರುವಲ್ಲಿ ಮುಂದಾಗಿ ಸರ್ಕಾರಿ ನೌಕರರ ಭದ್ರತೆಯ ಜೀವನ ಒದಗಿಸಬೇಕಾಗಿದೆ.

ಇನ್ನು ನೌಕರರಿಗೆ ಸಂಘದ ಕಟ್ಟಡ ನಿರ್ಮಾಣಕ್ಕೆ ಯೋಜನೆ ಸಮೇತ ಹಲವಾರು ಯೋಜನೆಗಳನ್ನು ಮುಂದಿಟ್ಟುಕೊಂಡು ನಮ್ಮ ಸಮಾನ ಮನಸ್ಕರ ತಂಡ ಮುಂದೆ ಬಂದಿದ್ದೇವೆ.ಹಂತ ಹಂತವಾಗಿ ಎಲ್ಲ ಕೆಲಸಗಳನ್ನು ಮಾಡುವ ಮೂಲಕ ಸರ್ಕಾರಿ ನೌಕರರ ನಂಬಿಕೆಯನ್ನು ಉಳಿಸಿಕೊಂಡು ಪಾರದರ್ಶಕ ಆಡಳಿತ ನೀಡಲಾಗುವುದು ಎಂದರು. ಇದೆ ಸಂಧರ್ಭದಲ್ಲಿ ಅಮರ್ ಅವರು ಸರ್ಕಾರಿ ನೌಕರರ ಪ್ರಾಥಮಿಕ ಶಾಲೆಗಳ ವಿಭಾಗದ ನಿರ್ದೇಶಕರಾದ ಸುನೀಲ್ ರವರಿಗೆ ಧನ್ಯವಾದಗಳು ತಿಳಿಸಿ ಅವರು ನಮ್ಮ ತಂಡದ ಚಾಣಕ್ಯ ಎಂದರು.

ಎ.ನಾರಾಯಣಸ್ವಾಮಿ ತಂಡದ ವಿರುದ್ದ ಸ್ಪರ್ದಿಸಿದ್ದ ಮಾಜಿ ಅಧ್ಯಕ್ಷ ಹರೀಶ್ ತಂಡ ಸಾರಾಸಗಟಾಗಿ ಸೋಲೊಪ್ಪಿಕೊಂಡಿದೆ,ಜಿಲ್ಲಾ ಸರ್ಕಾರಿ ನೌಕರರ ಭವನದಲ್ಲಿ ನಡೆದ ಚುನಾವಣೆಯಲ್ಲಿ 68 ನಿರ್ದೇಶಕರು ಮತಚಲಾಯಿಸಿದ್ದರು ಇದಕ್ಕೂ ಮುನ್ನ ನಡೆದ ಸದಸ್ಯರ ಆಯ್ಕೆ ಚುನಾಚಣೆಯಲ್ಲಿ ಜಿಲ್ಲೆಯಾದ್ಯಂತ ಬಹುತೇಕ

ಎ.ನಾರಾಯಣಸ್ವಾಮಿ ತಂಡವೆ ಗೆಲುವು ಸಾದಿಸಿತ್ತು. ಇಂದು ಬೆಳಿಗ್ಗೆ ಒಂಬತ್ತು ಗಂಟೆಯಿಂದ ಸಂಜೆ ನಾಲಕ್ಕು ಗಂಟೆವರೆಗೂ 68 ಜನರಿಗೆ ಮತಧಾನಕ್ಕೆ ಅವಕಾಶ ಕಲ್ಪಿಸಲಾಗಿತ್ತು.

ಚುನಾವಣಾಧಿಕಾರಿ ಶ್ರೀನಿವಾಸ್ ರೆಡ್ಡಿ ಸಹಾಯಕ ಚುನಾವಣಾಧಿಕಾರಿ ತಿರುಮಳಪ್ಪ ಅಯ್ಕೆಯಾದ ಮೂವರಿಗೆ ಪ್ರಮಾಣ ಪತ್ರ ನೀಡಿದರು. ಈ ಸಂಧರ್ಭದಲ್ಲಿ ನಾಗರಾಜಪ್ಪ,ಮರಿಯಪ್ಪ, ರಾಜೇಂದ್ರ ಪ್ರಸಾದ್,ಕಫಿಲ ಬಾಬಾಜಾನ್,ಎಂ.ಎನ್.ವೆಂಕಟೇಶ್, ನಜೀರ್, ರಾಘವೇಂದ್ರ ಪ್ರಸಾದ್, ರೆಡ್ಡಪ್ಪ,ವಿಜಯ ಕುಮಾರ್, ಕೀರ್ತಿ, ಶಿಡ್ಲಘಟ್ಟ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸುಬ್ಬಾರೆಡ್ಡಿ ಮತ್ತು ಇತರರು ಇದ್ದರು.ಈ ಚುಣಾವಣೆ ಯಲ್ಲಿ ಸುನಿಲ್.ಪಿ.ಆರ್ ರವರು ಇಡೀ ತಂಡದ ನಾಯಕತ್ವ ವಹಿಸಿದ್ದರು.

## ಜಾನುವಾರು ಮೇಲೆ ಹುಲಿ ದಾಳಿ: ಅರಣ್ಯಾಧಿಕಾರಿಗಳ ವಿರುದ್ಧ ರೊಚ್ಚಿಗೆದ್ದ ಗ್ರಾಮಸ್ಥರು

ಮೈಸೂರು: ಜಾನುವಾರು ಮೇಲೆ ಹುಲಿ ದಾಳಿ ಮಾಡಿರುವ ಘಟನೆ ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನ ನಾಗಣಾಪುರದಲ್ಲಿ ನಡೆದಿದೆ.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಹೆಡಿಯಾಲ ವಲಯ ವ್ಯಾಪ್ತಿಯಲ್ಲಿ ಹುಲಿ ಹಸುವಿನ ಮೇಲೆ ದಾಳಿ ನಡೆಸಿದ್ದು, ಹುಲಿ ಸೆರೆ ಹಿಡಿಯದ ಅರಣ್ಯಾಧಿಕಾರಿಗಳ ವಿರುದ್ದ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ರಾಮದಲ್ಲಿ ಪದೇ ಪದೇ ಹುಲಿ ಕಾಣಿಸಿಕೊಳ್ಳುತ್ತಿದ್ದು, ಕಳೆದ ವರ್ಷ ಇದೇ ಸ್ಥಳದಲ್ಲಿ ಹುಲಿ ಮಹಿಳೆಯನ್ನು ಕೊಂದಿತ್ತು.ಇದೀಗ ಮತ್ತೆ ಹುಲಿ ಕಾಣಿಸಿಕೊಂಡು ಆತಂಕ ಸೃಷ್ಟಿ ಮಾಡಿದ್ದು, ಹುಲಿ ಸೆರೆ ಹಿಡಿಯುವಂತೆ ಸ್ಥಳೀಯರು ಒತ್ತಾಯ ಮಾಡಿದ್ದಾರೆ.

ಈ ವೇಳೆ ಅರಣ್ಯಧಿಕಾರಿಯನ್ನ ಯುವಕರು ತರಾಟೆ ತೆಗೆದುಕೊಂಡಿದ್ದು, ನಿಮ್ಮಿಂದ ಹುಲಿಯನ್ನ ಕಾಡಿಗಟ್ಟಲು ಸಾಧ್ಯವಿಲ್ಲ ಅಂದ್ರೆ ನಾವೇ ಓಡಿಸುತ್ತೇವೆ ಎಂದು ಅಧಿಕಾರಿಗೆ ಹಿಗ್ಗಾಮುಗ್ಗಾ ಕ್ಲಾಸ್ ತೆಗೆದುಕೊಂಡಿದ್ದಾರೆ. ಹುಲಿ ದಾಳಿಯಿಂದ ಯಾರದರೂ ಸತ್ತ ಮೇಲೆ ಬಂದು ನೀವು ಮೌನಾಚರಣೆ ಮಾಡೋದು ಬೇಡ. ನಾಳೆ ನೀವು ಬಂದು ಪರಿಹಾರ ಕೊಡುವುದು ಬೇಡ. ನೀವು ಹುಲಿ ಬಗ್ಗೆ ಓದಿಕೊಂಡಿದ್ದೀರಾ ನಾವು ಅನುಭವಿಸುತ್ತಿದ್ದೇವೆ. ನಿಮ್ಮ ಕೈಯಲ್ಲಿ ಶಾಶ್ವತ ಪರಿಹಾರ ಕೊಡಲು ಸಾಧ್ಯವಿಲ್ಲ. ಕಳೆದ ವರ್ಷ ಹುಲಿ ದಾಳಿಯಾಗಿ ಮಹಿಳೆ ಸಾವನಪ್ಪಿದ್ದರು. ಈಗ ಮತ್ತೆ ಜಾನುವಾರು ಮೇಲೆ ದಾಳಿಯಾಗಿದೆ ಎಂದು ಗ್ರಾಮಸ್ಥರು ಕಿಡಿಕಾರಿದ್ದಾರೆ.



ಕರ್ನಾಟಕ ರಕ್ಷಣಾ ವೇದಿಕೆಯ ಸ್ವಾಭಿಮಾನಿ ಸೇನೆಯ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೂತನವಾಗಿ ಜಿಲ್ಲಾಅಧ್ಯಕ್ಷರಾಗಿ ಎಸ್. ಕೇಶವಮೂರ್ತಿ ಮತ್ತು ತಾಲ್ಲೂಕ್ ಅಧ್ಯಕ್ಷರಾಗಿ, ಎಮ್ ಚಂದ್ರಶೇಖರ್ ಅವರನ್ನು ಆಯ್ಕೆ ಮಾಡಲಾಯಿತು. ಹಾಗೂ ಕಲ್ಲೇಶ್ವರಿ. ವೈ.ಆರ್, ಅವರನ್ನು ಮಹಿಳಾ ಘಟಕದ ಅಧ್ಯಕ್ಷರಾಗಿ ಯಲಹಂಕ ವಿಧಾನಸಭಾ ಕ್ಷೇತ್ರದಿಂದ ಆಯ್ಕೆ ಮಾಡಿ ಶುಭಾಷಯ ಕೋರಲಾಯಿತು. ನೂತನ ಪದಾಧಿಕಾರಿಗಳಿಗೆ ರಾಜ್ಯಾಧ್ಯಕ್ಷರಾದ ಲಿಂಗರಾಜೇಗೌಡರವರು ಅವರ ಬೆಂಗಳೂರು ಕಚೇರಿಯಲ್ಲಿ ಸನ್ಮಾನಿಸಿ ಮಾರ್ಗದರ್ಶನ ನೀಡಿದರು. ಈ ವೇಳೆ ಕೇಶವಮೂರ್ತಿ, ಚಂದ್ರಶೇಖರ್ ರವರು ಮಾತನಾಡಿ, ನಮಗೆ ಕೊಟ್ಟಿರುವ ಜವಬ್ದಾರಿಯನ್ನು ಕಟ್ಟು ನಿಟ್ಟಾಗಿ ನಿಭಾಯಿಸುತ್ತೇವೆ.ನಮ್ಮ ನಾಡು-ನುಡಿ ಕನ್ನಡ ಮಣ್ಣಿಗಾಗಿ ಹೋರಾಡುತ್ತೇವೆ, ನಮ್ಮ ಸಂಘದ ಕಾರ್ಯಕರ್ತರು ಹಾಗೂ ಜನಸಾಮಾನ್ಯರಿಗಾಗಿ ನಾವು ಸ್ಪಂದಿಸುತ್ತೇವೆ ಹಾಗೂ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಏಳಿಗೆಗಾಗಿ ಶ್ರಮಿಸುತ್ತೇವೆ ಎಂದರು. ಇನ್ನು ಈ ವೇಳೆ ಬ್ಯಾಟ್ ಮಂಜುನಾಥ್, ಹನುಮೇಗೌಡ, ಗೋವಿಂದರಾಜು, ಚಂದ್ರಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ತಿರುಪತಿ ತಿಮ್ಮಪ್ಪನ ದರ್ಶನ ಈಗ ಮತ್ತಷ್ಟು ಸುಲಭ!

**ಆಂಧ್ರಪ್ರದೇಶ:** ತಿರುಪತಿ ತಿಮ್ಮಪ್ಪನ ದರ್ಶನ ಪಡೆಯಲು ಹಲವು ರಾಜ್ಯ, ದೇಶ-ವಿದೇಶಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಭಕ್ತಾದಿಗಳು ಆಗಮಿಸುತ್ತಾರೆ. ಇತ್ತೀಚೆಗಷ್ಟೇ ಉಂಟಾದ ಲಡ್ಡು ಪ್ರಸಾದ ವಿವಾದದ ನಡುವೆಯೂ ದೇವಾಲಯಕ್ಕೆ ಭಕ್ತರ ಸಂಖ್ಯೆಯ ಹರಿವು ಹೆಚ್ಚಾಯಿತೇ ವಿನಃ ಕಡಿಮೆ ಕಾಣಿಸಲಿಲ್ಲ.

ಇದು ದೇವಾಲಯದ ಟ್ರಸ್ಟ್ ಮೇಲಿದ್ದ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ. ಈ ನಿಟ್ಟಿನಲ್ಲಿ ದೇವಾಲಯದ ಹಿಂದಿನ ನಿಯಮಗಳನ್ನು ಪರಿಶೀಲಿಸಿದ ಟಿಟಿಡಿ, ಇಂದು ಸಭೆ ನಡೆಸಿ, ಹೊಸ ಬದಲಾವಣೆಗಳನ್ನು ಕಾರ್ಯರೂಪಕ್ಕೆ ತರಲು ನಿರ್ಧರಿಸಿದೆ.

**2ರಿಂದ 3 ಗಂಟೆಯೊಳಗೆ ದರ್ಶನ**

ಟಿಟಿಡಿ ಆಡಳಿತ ಮಂಡಳಿ ಹಲವು ನಿರ್ಧಾರಗಳನ್ನು ತೆಗೆದುಕೊಂಡಿದ್ದು, ಶ್ರೀವಾಣಿ ಟ್ರಸ್ಟ್ ಅನ್ನು ವಜಾಗೊಳಿಸಿದೆ. ಕೇವಲ 2ರಿಂದ 3 ಗಂಟೆಯೊಳಗೆ ಸಾಮಾನ್ಯ ಭಕ್ತರು ದೇವರ ದರ್ಶನ ಪಡೆಯುವಂತೆ ಬದಲಾವಣೆ ತರಲು ಎಐ ಮತ್ತು ಆಧುನಿಕ ತಂತ್ರಜ್ಞಾನ ಬಳಸಲು ಕ್ರಮಕೈಗೊಳ್ಳಲಾಗಿದೆ. ಕಂಪಾರ್ಟ್‌ಮೆಂಟ್‌ಗಳಲ್ಲಿ



ಭಕ್ತರಿಗೆ ತೊಂದರೆ, ಕಿರಿಕಿರಿ ಉಂಟಾಗದಂತೆ ದರ್ಶನ ಲಭ್ಯವಾಗಲು ಯೋಜನೆ ರೂಪಿಸಲಾಗಿದೆ. ಟಿಟಿಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅನ್ಯಧರ್ಮೀಯ ನೌಕರರನ್ನು ವಿಆರ್‌ಎಸ್ ಅಥವಾ ಸರ್ಕಾರಿ ಇಲಾಖೆಗಳಿಗೆ ವರ್ಗಾಯಿಸಲು ನಿರ್ಧರಿಸಲಾಗಿದೆ. ಈ ಕುರಿತು ಟಿಟಿಡಿ ಅಧ್ಯಕ್ಷ ಬಿಆರ್ ನಾಯ್ಡು ಸ್ಪಷ್ಟಪಡಿಸಿದ್ದಾರೆ.

**ಮಂಜೂರಾದ 20 ಎಕರೆ ಭೂಮಿ ಟಿಟಿಡಿಗೆ ಹಸ್ತಾಂತರ**

ತಿರುಮಲದ ಬಳಿಯಿರುವ ಕಸದ ತೊಟ್ಟಿಯನ್ನು ಮೂರು ತಿಂಗಳೊಳಗೆ ತೆರವುಗೊಳಿಸಲು ಟಿಟಿಡಿ ನಿರ್ಧರಿಸಿದೆ. ಶ್ರೀನಿವಾಸಸೇತು ಫ್ಲೈಓವರ್ ಅನ್ನು ಗರುಡ ವಾರದಿ ಎಂದು ಮರುನಾಮಕರಣ ಮಾಡಲಾಗಿದೆ. ಅಲಿಪಿರಿಯಲ್ಲಿ ದೇವಲೋಕಕ್ಕೆ ಮಂಜೂರಾದ 20 ಎಕರೆ ಭೂಮಿಯನ್ನು ಟಿಟಿಡಿಗೆ ಹಸ್ತಾಂತರಿಸಲು ಸರಕಾರಕ್ಕೆ ಪತ್ರ ಬರೆಯುವಂತೆ ಬಿ.ಆರ್. ನಾಯ್ಡು ತಿಳಿಸಿದ್ದಾರೆ. ಇದಲ್ಲದೆ, ತಿರುಮಲ ಸುತ್ತಮುತ್ತಲಿನ ಪ್ರದೇಶಗಳಲ್ಲಿ ರಾಜಕೀಯದ ಬಗ್ಗೆ ಮಾತನಾಡದಂತೆ ನಿರ್ಬಂಧ ಹೇರಲಾಗಿತ್ತು. ಈ ನಿಯಮಗಳನ್ನು ಉಲ್ಲಂಘಿಸಿದರೆ ಪ್ರಕರಣ ದಾಖಲಿಸಲಾಗುವುದು ಎಂಬ ಎಚ್ಚರಿಕೆ ರವಾನಿಸಲಾಗಿದೆ.

**ಟಿಟಿಡಿ ಖಾತೆಗೆ ಜಮಾ:**

ಪ್ರತಿ ತಿಂಗಳ ಮೊದಲ ಮಂಗಳವಾರದಂದು ಸ್ಥಳೀಯರಿಗೆ ದೇವರ ದರ್ಶನ ನೀಡಲು ಟಿಟಿಡಿ ನಿರ್ಧರಿಸಿದೆ. ಶ್ರೀವಾಣಿ ಟ್ರಸ್ಟ್ ರದ್ದುಪಡಿಸಿ, ಟಿಕೆಟ್ ಮಾರಾಟದಿಂದ ಬಂದ ಹಣವನ್ನು ಟಿಟಿಡಿ ಖಾತೆಗೆ ಜಮಾ ಮಾಡಲು ಯೋಜಿಸಲಾಗಿದೆ. ಖಾಸಗಿ ಬ್ಯಾಂಕ್ ಠೇವಣಿಗಳಿಂದ ಸ್ವಾಮಿಗೆ ಸೇರಿದ ಹಣವನ್ನು ಸರ್ಕಾರಿ ಬ್ಯಾಂಕ್‌ಗಳಿಗೆ ಜಮಾ ಮಾಡಲು ಟಿಟಿಡಿ ಆಡಳಿತ ಮಂಡಳಿ ಮಹತ್ವದ ನಿರ್ಣಯ ಕೈಗೊಂಡಿದೆ.

ಹೊಸ ಬಗೆಯ ಖಾದ್ಯ

ಪಸ್ತುತ ಹಂಚಿಕೆಯಾಗುತ್ತಿರುವ ತಿರುಪತಿ ಲಡ್ಡು ಪ್ರಸಾದದಲ್ಲಿ ತುಪ್ಪದ ಗುಣಮಟ್ಟವನ್ನು ಮತ್ತಷ್ಟು ಪರಿಶೀಲನೆ ನಡೆಸಲಿದ್ದು, ಭಕ್ತರಿಗೆ ಅನ್ನದಾನದಲ್ಲಿ ಮತ್ತೊಂದು ಹೊಸ ಬಗೆಯ ಖಾದ್ಯವನ್ನು ನೀಡಲು ಮಂಡಳಿ ನಿರ್ಧರಿಸಿದೆ. ನೌಕರರಿಗೆ ಬ್ರಹ್ಮೋತ್ಸವ ಉಡುಗೊರೆಯನ್ನು 14 ಸಾವಿರದಿಂದ 15,400 ರೂ.ಗೆ ಹೆಚ್ಚಿಸಿ ಎಂದು ಟಿಟಿಡಿ ಆದೇಶ ಹೊರಡಿಸಿದೆ. ಪ್ರವಾಸೋದ್ಯಮ ಇಲಾಖೆಗೆ ನೀಡಲಾಗಿದ್ದ 4 ಸಾವಿರ ಎಸ್‌ಇಡಿ ಟಿಕೆಟ್‌ಗಳನ್ನು ರದ್ದುಗೊಳಿಸುವ ಮೂಲಕ ಟಿಟಿಡಿ ಅಧ್ಯಕ್ಷ ಬಿ.ಆರ್.ನಾಯ್ಡು ಅವರು ಹಲವು ಮಹತ್ವದ ಬದಲಾವಣೆಗಳನ್ನು ಈ ಸಭೆಯಲ್ಲಿ ಕೈಗೊಂಡಿದ್ದಾರೆ,

## ಮೊದಲ ಪುಟದಿಂದ

### 'ಮೋದಿ ಅದಾನಿ ಒಬ್ಬರೇ'

ಸಾಧ್ಯವಿಲ್ಲ ಏಕೆಂದರೆ ಅದು ಅವರ ವಿರುದ್ಧವೇ ತನಿಖೆ ನಡೆಸುವಂತೆ ಮಾಡುತ್ತದೆ ಎಂದರು.ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿದಂತೆ ಕಾಂಗ್ರೆಸ್ ಸಂಸದರು, ಆರ್‌ಜೆಡಿ ಮತ್ತು ಎಡಪಕ್ಷಗಳ ಹಲವಾರು ವಿರೋಧ ಪಕ್ಷಗಳ ಸಂಸದರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಲಂಚ ಮತ್ತು ವಂಚನೆ ಆರೋಪದ ಮೇಲೆ ಅಮೆರಿಕ ನ್ಯಾಯಾಲಯದಲ್ಲಿ ಅದಾನಿ ವಿರುದ್ಧದ ದೋಷಾರೋಪಣೆಯ ಕುರಿತು ಸಂಸತ್ತಿನಲ್ಲಿ ಚರ್ಚೆ ನಡೆಯಬೇಕು. ಪ್ರಧಾನಿ ನರೇಂದ್ರ ಮೋದಿ ಅವರು ಈ ವಿಷಯದ ಬಗ್ಗೆ ಸದನದಲ್ಲಿ ಮಾತನಾಡಬೇಕು ಎಂದು ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಇಬ್ಬರೂ ಒತ್ತಾಯಿಸಿದರು.

### ಕಾರು ಅಪಘಾತ

ಸಚಿವ ಕೆ.ಹೆಚ್. ಮುನಿಯಪ್ಪ ಕಾರು ಅಪಘಾತಕ್ಕೀಡಾಗಿದ್ದು, ಯಾವುದೇ ಪ್ರಾಣಾಪಾಯದಿಂದ ಸಂಭವಿಸಿಲ್ಲ.

### ಬಲ ಪ್ರದರ್ಶನ ಅಗತ್ಯವಿಲ್ಲ

ಮುಖ್ಯಮಂತ್ರಿ ಮಾತಿಗೆ ನನ್ನ ಸಹಮತ: ಅಧಿಕಾರ ಹಂಚಿಕೆ ವಿಚಾರಕ್ಕೆ ಸಂಬಂಧಿಸಿದಂತೆ ಪರಮೇಶ್ವರ ಅವರ ಅಸಮಾಧಾನದ ಹೇಳಿಕೆ ಬಗ್ಗೆ ಕೇಳಿದಾಗ, "ನಾನು ನಿಮ್ಮ ಮುಂದೆ ಏನೂ ಮಾತನಾಡಿಲ್ಲ. ಪರಮೇಶ್ವರ ಹಾಗೂ ಇತರರ ಜತೆ ಮಾತನಾಡಿಲ್ಲ. ನಾನು ವಾಹಿನಿಯಂದರಲ್ಲಿ ನನ್ನದೇ ಆದ ವಿಚಾರ ಪ್ರಸ್ತಾಪ ಮಾಡಿದ್ದೆ. ನಾವು ಏನು ಮಾತನಾಡಿಕೊಂಡಿದ್ದೇವೆ ಎಂದು ನಿಮ್ಮ ಮುಂದೆ ಹೇಳಲು ಸಾಧ್ಯವೇ? ಈ ವಿಚಾರವಾಗಿ ಮುಖ್ಯಮಂತ್ರಿಗಳು ನಿನ್ನೆ ಯಾವುದೇ ಚರ್ಚೆ ಇಲ್ಲ ಎಂದು ಹೇಳಿದ್ದು, ನಾನು ಚರ್ಚೆ ಮಾಡುವುದಿಲ್ಲ ಎಂದು ಒಪ್ಪಿಕೊಂಡಿದ್ದೇನೆ. ಮುಖ್ಯಮಂತ್ರಿಗಳ ಮಾತನ್ನು ನಾನು ಒಪ್ಪುತ್ತೇನೆ. ಸದ್ಯಕ್ಕೆ ಅಧಿಕಾರ ಹಸ್ತಾಂತರದ ಪ್ರಸ್ತಾಪವಿಲ್ಲ. ಯಾವುದೇ ಸಮಸ್ಯೆ ಇಲ್ಲದೆ ನಮ್ಮ ಸರಕಾರದ ಅಧಿಕಾರ ಅವಧಿ ಪೂರ್ಣಗೊಳಿಸುತ್ತೇವೆ" ಎಂದರು.

ನಿಮ್ಮ ಹಾಗೂ ಪರಮೇಶ್ವರ ಅವರ ನಡುವೆ ಭಿನ್ನಾಭಿಪ್ರಾಯಗಳಿವೆಯೇ ಎಂದು ಕೇಳಿದಾಗ, "ನನಗೆ ಯಾರ ಜತೆಯೂ ಭಿನ್ನಾಭಿಪ್ರಾಯವಿಲ್ಲ. ರಾಜಕೀಯದಲ್ಲಿ ನನಗೆ ಯಾರೂ ವೈರಿಗಳಲ್ಲ. ಎಲ್ಲರೂ ನನ್ನ ಸ್ನೇಹಿತರೇ. ಪಕ್ಷದಲ್ಲಿ ನಾವು ಜತೆಗೂಡಿ ಕೆಲಸ ಮಾಡಿದ್ದು, ಮುಂದೆಯೂ ಜತೆಯಲ್ಲೇ ಸಾಗುತ್ತೇವೆ. ಜತೆಗೂಡಿ ಯಶಸ್ಸು ಕಾಣುತ್ತೇವೆ" ಎಂದು ಹೇಳಿದರು.

### ಶಕ್ತಿ ಪ್ರದರ್ಶನ

ಮುಡಾ, ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಸಮರ ಸಾರಿರುವ ಪ್ರತಿಪಕ್ಷಗಳ ತಂತ್ರಕ್ಕೆ ಸ್ವಾಭಿಮಾನಿ ಒಕ್ಕೂಟಗಳ ಜಂಟಿ ಆಶ್ರಯದಲ್ಲಿ ನಡೆಸುತ್ತಿರುವ ಈ ಸಮಾವೇಶದ ಮೂಲಕ ಪ್ರತಿಪಕ್ಷಗಳಿಗೆ ತಿರುಗೇಟು ನೀಡಿದ್ದಾರೆ.ಕಳದ ಒಂದೂವರೆ ವರ್ಷದಲ್ಲಿ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ ಎಂಬ ಸಂದೇಶವನ್ನು ನಾಡಿಗೆ ಜನತೆಗೆ ತಿಳಿಸಲು ಮುಂದಾಗಿದೆ.

ಐದು ಗ್ಯಾರಂಟಿ ಯೋಜನೆಗಳ ಬಗ್ಗೆ ಸಾಕಷ್ಟು ಚರ್ಚೆಗಳು ನಡೆಯುತ್ತಿವೆ. ಪ್ರತಿಪಕ್ಷಗಳು ಗ್ಯಾರಂಟಿ ಯೋಜನೆಗಳನ್ನು ಸರ್ಕಾರ ನಿಲ್ಲಿಸಲಿದೆ ಎಂಬ ಟೀಕೆಗಳಿಗೂ ಸಮಾವೇಶದ ಮೂಲಕ ಕಾಂಗ್ರೆಸ್ ನಾಯಕರು ತಿರುಗೇಟು ನೀಡಲಿದ್ದಾರೆ. ಇನ್ನೊಂದೆಡೆ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಲೋಕಾಯುಕ್ತರಿಗೆ ಪತ್ರ ಬರೆದು ಮುಖ್ಯಮಂತ್ರಿಗಳ ಪತ್ನಿಗೆ ನೀಡಿರುವ 14 ಹಾಗೂ ಮುಡಾದಲ್ಲಿ ವಿತರಿಸಲಾಗಿರುವ ಸಾವಿರಾರು ನಿವೇಶನಗಳಲ್ಲಿ 700 ಕೋಟಿ ರೂ. ಅಕ್ರಮ ನಡೆದಿದೆ ಎಂದು ಉಲ್ಲೇಖಿಸಿರುವ ಬಗ್ಗೆಯೂ ನಾಯಕರು ಪ್ರಸ್ತಾಪಿಸಲಿದ್ದು, ಕೇಂದ್ರೀಯ ತನಿಖಾ ಸಂಸ್ಥೆಗಳನ್ನು ಕೇಂದ್ರ ಸರ್ಕಾರ ದುರುಪಯೋಗ ಮಾಡಿಕೊಳ್ಳುತ್ತಿದೆ. ರಾಜಕೀಯ ದುರುದ್ದೇಶದಿಂದ ಇಡಿ ಲೋಕಾಯುಕ್ತರಿಗೆ ಪತ್ರ ಬರೆದಿರುವ ಕ್ರಮಕ್ಕೆ ನಾಯಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

**ಹರಿದು ಬಂದ ಜನಸ್ತೋಮ:** ಹಾಸನದಲ್ಲಿ ಆಯೋಜಿಸಿರುವ ಕಾಂಗ್ರೆಸ್ ಜನಕಲ್ಯಾಣ ಸಮಾವೇಶಕ್ಕೆ ರಾಜ್ಯದ ಮೂಲೆಮೂಲೆಗಳಿಂದ 3 ಲಕ್ಷ ಜನರು ಭಾಗಿಯಾಗಿದ್ದಾರೆ. ತಮ್ಮ ನೆಚ್ಚಿನ ನಾಯಕನ ಪರ ಘೋಷಣೆ ಕೂಗುತ್ತ ಸಮಾವೇಶದತ್ತ ಧಾವಿಸುತ್ತಿದ್ದಾರೆ.

ಕಾರ್ಯಕರ್ತರು ಕಾಂಗ್ರೆಸ್ ಧ್ವಜವನ್ನು ಕೈಯಲ್ಲಿ ಹಿಡಿದು ಜಯಕಾರ ಹಾಕುತ್ತ ಸಮಾವೇಶದಲ್ಲಿ ಭಾಗಿಯಾಗಿದ್ದಾರೆ.ಸಮಾವೇಶಕ್ಕೂ ಮುನ್ನ ಈ ಕಾರ್ಯಕ್ರಮಕ್ಕೆ ನಿರ್ಮಿಸಲಾಗಿರುವ ಬೃಹತ್ ವೇದಿಯಲ್ಲಿ ಚಂಡಮದ್ದಲೆ ಭಾರಿಸಿ ನೆರೆದಿದ್ದ ಜನರನ್ನು ಆಕರ್ಷಿಸಿತು.

### ಎನ್ಐಎ ದಾಳಿ, ತೀವ್ರ ಶೋಧ

ಸೋಮವಾರಪೇಟೆ ಹಾಗೂ ಸುಂಟಿಕೊಪ್ಪ ಸೇರಿದಂತೆ ಒಟ್ಟು 16 ಪ್ರದೇಶಗಳಲ್ಲಿ ದಾಳಿ ನಡೆಸಿ ತೀವ್ರ ಶೋಧ ನಡೆಸಿದ್ದಾರೆ. ಗುರುವಾರ ನಸುಕಿನಲ್ಲಿ ಸೋಮವಾರಪೇಟೆ ತಾಲ್ಲೂಕಿನಲ್ಲಿ ಇಬ್ಬರ ಮನೆ ಹಾಗೂ ಸುಂಟಿಕೊಪ್ಪದಲ್ಲಿ ಒಬ್ಬರ ಮನೆ ಮೇಲೆ ದಾಳಿ ನಡೆಸಿದ ಎನ್ಐಎ ಅಧಿಕಾರಿಗಳ ತಂಡ ದಾಖಲಾತಿಗಳನ್ನು ಪರಿಶೀಲನೆ ನಡೆಸಿ, ಮನೆಯವರ ವಿಚಾರಣೆ ನಡೆಸಿ ತೆರಳಿದೆ ಎನ್ನಲಾಗಿದೆ. ಮೂಲಗಳ ಪ್ರಕಾರ ಪ್ರವೀಣ್ ನೆಟ್ಟಾರು ಕೆಣಟಜಜಜಿಟಜಜಲೆ ಪ್ರಕರಣದಲ್ಲಿ ತಲೆಮರೆಸಿಕೊಂಡಿರುವ ಇಬ್ಬರು ಆರೋಪಿಗಳಿಗೆ ಕೊಡಗಿನ ಸಂಪರ್ಕವಿದ್ದು, ಹಾಗಾಗಿ ಇಂತಹ ದಾಳಿಗಳು ನಡೆಯುತ್ತಿವೆ ಎಂದು ಹೇಳಲಾಗಿದೆ.

### ನಾವೆಲ್ಲ ಯಾಕೆ ಬೇಕು?

ಯಾವುದೇ ಗೊಂದಲಗಳು ಇಲ್ಲ. ಕಾಂಗ್ರೆಸ್ ಪಕ್ಷ ಮತ್ತು ಸರ್ಕಾರದ ಮೇಲೆ ಸ್ವಾಭಿಮಾನಿ ಒಕ್ಕೂಟಕ್ಕೆ ಸಹಾನುಭೂತಿ ಇದೆ. ಹೀಗಾಗಿ, ಒಟ್ಟಿಗೆ ಸಮಾವೇಶ ಮಾಡುತ್ತಿದ್ದು, ಇದರಲ್ಲಿ ಯಾವುದೇ ಗೊಂದಲವಿಲ್ಲ. ಗೊಂದಲ ಇದೆ ಎಂಬಂತೆ ಅವರಿರವರು ಸೃಷ್ಟಿ ಮಾಡುತ್ತಿದ್ದಾರೆ ಎಂದು ಹೇಳಿದರು.

ನಾವು ರಾಜ್ಯದ ಜನತೆಗೆ ಚುನಾವಣೆಯ ಸಂದರ್ಭದಲ್ಲಿ ರಾಜಕೀಯವಾಗಿ ಏನೆಲ್ಲ ಮಾತನಾಡಿದ್ದೇವೆ, ಅದೆಲ್ಲವನ್ನು ನಾವು ಜನಗಳಿಗೆ ಹೇಳಬೇಕು. ಸರ್ಕಾರದ ಕಾರ್ಯಕ್ರಮಗಳಲ್ಲಿ ಅನೇಕ ರಾಜಕೀಯ ವಿಚಾರಗಳನ್ನು ಪ್ರಸ್ತಾಪ ಮಾಡಲು ಆಗುವುದಿಲ್ಲ. ಅದಕ್ಕಾಗಿ ಈ ಸಮಾವೇಶದಲ್ಲಿ ರಾಜಕೀಯ ವಿಚಾರಗಳನ್ನು ಪ್ರಸ್ತಾಪ ಮಾಡುತ್ತೇವೆ. ಜನಗಳಿಗೆ ಸತ್ಯಾಂಶ ಗೊತ್ತಾಗಬೇಕು. ಅನೇಕ ವಿಚಾರದಲ್ಲಿ ಪ್ರತಿಪಕ್ಷದವರು ಮಾಡುವ ಆಪಾದನೆಗಳಿಗೆ ರಾಜಕೀಯವಾಗಿ ಉತ್ತರ ಕೊಡುತ್ತೇವೆ ಎಂದು ಪ್ರತಿಕ್ರಿಯಿಸಿದರು.

### ಜ.25ಕ್ಕೆ ಮುಂದೂಡಿಕೆ

ತಾವರ್‌ಚಂದ್ ಗೆಹ್ಲೋಟ್ ಅವರ ಅನುಮೋದನೆಯನ್ನು ಪ್ರಶ್ನಿಸಿ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿತ್ತು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ (ಮುಡಾ) ಸಿದ್ದರಾಮಯ್ಯ ಪತ್ನಿ ಪಾರ್ವತಿ ಬಿಎಂ ಅವರಿಗೆ 14 ನಿವೇಶನ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪವಿದೆ. ಸಾಮಾಜಿಕ ಕಾರ್ಯಕರ್ತರಾದ ಟಿಜೆ ಅಬ್ರಹಾಂ, ಪ್ರದೀಪ್ ಕುಮಾರ್ ಮತ್ತು ಸ್ನೇಹಮಯಿ ಕೃಷ್ಣ ಅವರು ಸಲ್ಲಿಸಿದ ಮೂರು ಅರ್ಜಿಗಳ ಆಧಾರದ ಮೇಲೆ ಪ್ರಧಾನ ಪ್ರದೇಶದಲ್ಲಿ ಮುಡಾದಿಂದ 14 ಸೈಟ್‌ಗಳ ಹಂಚಿಕೆಯಲ್ಲಿನ ಅಕ್ರಮಗಳ ಆರೋಪದಲ್ಲಿ ತಮ್ಮ ವಿರುದ್ಧದ ತನಿಖೆಗೆ ಗೆಹ್ಲೋಟ್ ಅವರ ಅನುಮೋದನೆಯ ಕಾನೂನುಬದ್ಧತೆಯನ್ನು ಸಿದ್ದರಾಮಯ್ಯ ಪ್ರಶ್ನಿಸಿದ್ದರು. ಹೈಕೋರ್ಟ್ ಏಕ ಪೀಠದ ಆದೇಶದ ನಂತರ, ಮರುದಿನವೇ ಇಲ್ಲಿನ ವಿಶೇಷ ನ್ಯಾಯಾಲಯವು ಸಿದ್ದರಾಮಯ್ಯ ವಿರುದ್ಧ ಲೋಕಾಯುಕ್ತ ಪೊಲೀಸ್ ತನಿಖೆಗೆ ಆದೇಶಿಸಿ, ಡಿಸೆಂಬರ್ 24 ರೊಳಗೆ ತನಿಖಾ ವರದಿಯನ್ನು ಸಲ್ಲಿಸುವಂತೆ ಸೂಚಿಸಿತು.

ಮೈಸೂರಿನ ಲೋಕಾಯುಕ್ತ ಪೊಲೀಸರು ಸೆ.27ರಂದು ದಾಖಲಿಸಿರುವ ಎಫ್‌ಐಆರ್‌ನಲ್ಲಿ ಸಿದ್ದರಾಮಯ್ಯ, ಅವರ ಪತ್ನಿ, ಸೋದರ ಮಾವ ಮಲ್ಲಿಕಾರ್ಜುನ ಸ್ವಾಮಿ ಮತ್ತು ದೇವರಾಜು ಅವರ ಹೆಸರುಗಳನ್ನು ಉಲ್ಲೇಖಿಸಲಾಗಿದೆ.

### ನೀರಿನ ಬವಣೆಗೆ ಮುಕ್ತಿ

ಹೋಗುತ್ತಿದ್ದಾರೆ. ಎಲ್ಲರಿಗೂ ಆಶ್ರಯ ನೀಡುವ ಬೆಂಗಳೂರು ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಹಳ ಗಂಭೀರವಾಗಿದೆ ಎಂದು ಮಾಜಿ ಪ್ರಧಾನಿಗಳು ಹೇಳಿದರು.

1.45 ಕೋಟಿ ಜನಸಂಖ್ಯೆ ಇರುವ ಬೆಂಗಳೂರಿಗೆ 16 ಟಿಎಂಸಿ ಅಡಿಯಷ್ಟು ಕಾವೇರಿ ನೀರನ್ನು ಪೂರೈಕೆ ಮಾಡಲಾಗುತ್ತಿದೆ. ಆದರೆ, ನಗರದ ಬೇಡಿಕೆಗೆ ಹೋಲಿಸಿದರೆ ಈ ನೀರು ಬಹಳ ಕಡಿಮೆ. ಇದನ್ನೇ ಅಸ್ತ್ರ ಮಾಡಿಕೊಂಡಿರುವ ಟ್ಯಾಂಕರ್ ಮಾಫಿಯಾ ಜನರನ್ನು ಸುಲಿಗೆ ಮಾಡುತ್ತಿದೆ. ಒಂದು ಟ್ಯಾಂಕರ್ ನೀರಿಗೆ ₹3000 ತೆರಬೇಕಿದೆ. ಇದು ಎಷ್ಟು ಅನ್ಯಾಯ ಎಂದರೆ ಕೇವಲ ನಾಲ್ಕು ಜನರಿರುವ ಒಂದು ಕುಟುಂಬ ಪ್ರತೀ ತಿಂಗಳು ನೀರಿಗಾಗಿ ₹20,000 ಖರ್ಚು ಮಾಡಬೇಕಿದೆ. ಇದು ಕಳವಳಕಾರಿ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ ಎಲ್ಲರೂ ರಾಜಕೀಯ ಬದಿಗಿಟ್ಟು ಮೇಕೆದಾಟು ಯೋಜನೆ ಬಗ್ಗೆ ಬೆಂಬಲ ನೀಡಬೇಕಿದೆ. ಈ ಯೋಜನೆ ಕಾರ್ಯಗಾಯವಾದರೆ ಈ ಸಮಸ್ಯೆಗೆ ಮುಕ್ತಿ ದೊರೆಯಲಿದೆ ಎಂದು ಅವರು ಹೇಳಿದರು.

### ಇಡಿ ಪತ್ರ: ಸಿಎಂ ಗಾಬರಿ

ಇದು ಶೋಭೆ ತರುವಂತದ್ದಲ್ಲ' ಎಂದು ಪ್ರತಿಕ್ರಿಯಿಸಿದರು. ಹಾಸನದಲ್ಲಿ ನಡೆಯುತ್ತಿರುವ ಕಾಂಗ್ರೆಸ್ ಸಮಾವೇಶದ ಬಗ್ಗೆ ಪ್ರತಿಕ್ರಿಯಿಸಿ, 'ಅವರ ಪಕ್ಷದ ಕಾರ್ಯಕ್ರಮ. ನಾನೇಕೆ ಟೀಕೆ ಮಾಡಲಿ' ಎಂದು ಯಡಿಯೂರಪ್ಪ ಉತ್ತರಿಸಿದ್ದಾರೆ.

### ದೇವಾಲಯಕ್ಕೆ ಎಸ್.ಜಾನಕಿ ಭೇಟಿ

ಪುಟ 2 ಸಮರ್ಪಿಸಿದದರು. ವಿಶೇಷ ಪೂಜೆ ನಂತರ ಅರ್ಚಕರು ಎಸ್.ಜಾನಕಿ ಅವರ ಕಾಲಿಗೆ ಬಿದ್ದು ಆಶೀರ್ವಾದ ಪಡೆದರು. ಸಹ ಭಕ್ತರು ಸಹ ಜಾನಕಿ ಅವರ ಕಾಲಿಗೆ ಬಿದ್ದು ಆಶೀರ್ವಾದ ಪಡೆದುಕೊಂಡರು.ನಂತರ ಎಸ್. ಜಾನಕಿ ಅವರು ಪಿರಿಯಾಪಟ್ಟಣ ಪುರಸಭಾ ಸದಸ್ಯ ಪಿ.ಎನ್. ವಿನೋದ್ ರವರ ಮನೆಗೆ ಭೇಟಿ ನೀಡಿದ್ದು ಕುಟುಂಬಸ್ಥರಿಂದ ಸನ್ಮಾನ ಸ್ವೀಕಾರ ಮಾಡಿದರು.

# ಸಂವಿಧಾನ ವಿರೋಧಿಗಳು ಮನುಷ್ಯ ವಿರೋಧಿಗಳು: ಸಿಎಂ

**ಬೆಂಗಳೂರು:** ಸಂವಿಧಾನ ವಿರೋಧಿಗಳು ಮನುಷ್ಯ ವಿರೋಧಿಗಳು. ಸಂವಿಧಾನ-ಪ್ರಜಾಪ್ರಭುತ್ವ-ಜಾತ್ಯತೀತತೆ ಬಗ್ಗೆ ಪ್ರತಿಯೊಬ್ಬರೂ ಸ್ಪಷ್ಟತೆ ಬೆಳೆಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ರವೀಂದ್ರ ಕಲಾ ಕ್ಷೇತ್ರದಲ್ಲಿ ಆಯೋಜಿಸಿದ್ದ ಸಂತ ಶ್ರೇಷ್ಠ ಕನಕದಾಸ ಜಯಂತಿ ಉದ್ಘಾಟಿಸಿ, ಕನಕ ಶ್ರೀ ಪ್ರಶಸ್ತಿ ಪ್ರದಾನ ಮಾಡಿ ಸಮಗ್ರ ತತ್ವಪದ ಯೋಜನೆಯ 18 ಸಂಪುಟಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು. ಕನಕದಾಸರ 500ನೇ ಜಯಂತೋತ್ಸವವನ್ನು ಆಚರಿಸುವ ಅವಕಾಶ ನನಗೆ ಸಿಕ್ಕಿತ್ತು. ಆ ಸಂದರ್ಭದಲ್ಲಿ ಕನಕದಾಸರ ಕೀರ್ತನೆಗಳನ್ನು ಸುಲಭವಾಗಿ ಜನರ ಕೈಗೆ ತಲುಪಿಸುವ ಕಾರ್ಯವನ್ನು ಮಾಡಲಾಗಿತ್ತು ಎಂದು ಸ್ಮರಿಸಿದರು.

ಕನಕಶ್ರೀ ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿದ ಮುಖ್ಯಮಂತ್ರಿಗಳು, ಕನಕಶ್ರೀ ಪ್ರಶಸ್ತಿಗೆ ಜಾತಿ-ಧರ್ಮ ಮುಖ್ಯ ಅಲ್ಲ. ಕನಕದಾಸರ ಸಾಮಾಜಿಕ ಸಂದೇಶದ ಮೇಲೆ ಕೆಲಸ ಮಾಡುವುದಷ್ಟೇ ಮುಖ್ಯ. ಬಸವಾದಿ ಶರಣರು, ಕನಕದಾಸರು ಇಬ್ಬರೂ ಮನುಷ್ಯರನ್ನು ವಿಭಜಿಸುವ ಜಾತಿ-ಧರ್ಮದ ತಾರತಮ್ಯವನ್ನು ವಿರೋಧಿಸಿದ್ದರು. ವಚನ ಚಳವಳಿಗೂ ಮೊದಲು ಜನರಿಗೆ ಅರ್ಥ ಆಗದ ಭಾಷೆಯಲ್ಲಿ ಧರ್ಮ ಪ್ರಚಾರ ನಡೆಯುತ್ತಿತ್ತು. ಜನರಿಗೆ ಅರ್ಥವಾಗದ ಸಂಸ್ಕೃತ ಶ್ಲೋಕಗಳನ್ನು ಮುಟ್ಟದ




ಬಸವಾದಿ ಶರಣರು ಜನರಿಗೆ ಅರ್ಥವಾಗುವ ಜನರ ಭಾಷೆಯಲ್ಲೇ ಅತ್ಯಂತ ಸರಳವಾಗಿ ಮಾನವೀಯ ಧರ್ಮವನ್ನು ಹೇಳಿದರು. ಮನುಷ್ಯ ನಿರ್ಮಿತ ಜಾತಿ ತಾರತಮ್ಯವನ್ನು, ಧಾರ್ಮಿಕ ತಾರತಮ್ಯವನ್ನು ಅಳಿಸಲು ಮಾನವೀಯ ಮೌಲ್ಯಗಳನ್ನು ಎತ್ತಿ ಹಿಡಿದರು. ಬಸವಾದಿ ಶರಣರು 12 ನೇ ಶತಮಾನದಲ್ಲಿ ಮುನ್ನಡೆಸಿದ ಮಾನವೀಯ ಧರ್ಮವನ್ನು 15 ನೇ ಶತಮಾನದಲ್ಲಿ ಕನಕದಾಸರು ಮುಂದುವರೆಸಿದರು ಎಂದರು.

ಬುದ್ಧ, ಬಸವ, ಕನಕದಾಸರು, ಅಂಬೇಡ್ಕರ್ ಅವರ ಆಶಯಗಳೆಲ್ಲಾ ಒಂದೇ ಆಗಿದ್ದವು. ಜಾತಿ, ಧರ್ಮದ ಹೆಸರಿನಲ್ಲಿ ನಡೆಯುವ ಮನುಷ್ಯ ತಾರತಮ್ಯಗಳನ್ನು ನಿವಾರಿಸಲು ಶ್ರಮಿಸಿದರು. ವಿದ್ಯಾವಂತರಾದಷ್ಟೂ ಜಾತಿವಾದಿಗಳಾದರೆ ಆ ವಿದ್ಯೆಗೆ ಗೌರವ ಬರುತ್ತದಾ? ಸಂವಿಧಾನವನ್ನು ವಿರೋಧಿಸುವವರೂ ಈಗ ತಲೆ ಎತ್ತಿದ್ದಾರೆ. ಸಂವಿಧಾನ ವಿರೋಧಿಗಳು ನಿಜವಾದ ಮನುಷ್ಯ ವಿರೋಧಿಗಳು ಎಂದು ತಿಳಿಸಿದರು.

ಮನುಷ್ಯ ಮನುಷ್ಯರನ್ನು ಜಾತಿ, ಧರ್ಮದ ಹೆಸರಲ್ಲಿ ಮೇಲು-ಕೀಳು ಎನ್ನುವ ತಾರತಮ್ಯವನ್ನು ತ್ಯಜಿಸಿ ಮನುಷ್ಯರನ್ನು ಪ್ರೀತಿಸುವುದೇ ಕನಕದಾಸರಿಗೆ ನಾವು ಸಲ್ಲಿಸುವ ನಿಜವಾದ ಗೌರವ ಎಂದರು.

ಇಲಾಖೆ ಪ್ರಕಟಣೆಗಳಿಗೆ ಶೇ.50 ರಿಯಾಯ್ತಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಡಿಯಲ್ಲಿ ಬರುವ ಎಲ್ಲಾ ಅಕಾಡೆಮಿಗಳು ಮತ್ತು ಪ್ರಾಧಿಕಾರಿಗಳು ಪ್ರಕಟಿಸುವ ಪುಸ್ತಕಗಳನ್ನು ವಿಶೇಷ ಸಂದರ್ಭಗಳಲ್ಲಿ ಶೇ.50 ರಷ್ಟು ರಿಯಾಯ್ತಿ ದರದಲ್ಲಿ ಮಾರಾಟ ಮಾಡುವಂತೆ ಇದೇ ಸಂದರ್ಭದಲ್ಲಿ ಘೋಷಿಸಿದರು.

## ನ.25, 26ರಂದು ಬಸವನಗುಡಿ ಕಡಲೆಕಾಯಿ ಪರಿಷೆ

ಬೆಂಗಳೂರು: ಇದೇ ಮೊದಲ ಬಾರಿಗೆ ಬಸವನಗುಡಿ ಕಡಲೆಕಾಯಿ ಪರಿಷೆಯ ಮಳಿಗೆಗಳಲ್ಲಿ ವ್ಯಾಪಾರ ಮಾಡುವವರಿಂದ ಯಾವುದೇ ರೀತಿಯ ಸುಂಕ ಪಡೆಯದೇ ಇರಲು ಮುಜರಾಯಿ ಇಲಾಖೆ ತೀರ್ಮಾನಿಸಿದೆ. ನವೆಂಬರ್ 25 ಮತ್ತು 26ರಂದು ದೊಡ್ಡ ಗಣಪತಿ ದೇವಸ್ಥಾನದ ಆವರಣದಲ್ಲಿ ನಡೆಯಲಿರುವ ಪರಿಷೆಯ ಪೂರ್ವಭಾವಿ ಸಭೆಯಲ್ಲಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ನಿರ್ದೇಶನದಂತೆ ಸುಂಕ ಪಡೆಯದಿರಲು ನಿರ್ಧರಿಸಲಾಗಿದೆ.

ಪ್ರತೀ ವರ್ಷ ಟೆಂಡರ್ ಕರೆಯಲಾಗುತ್ತಿತ್ತು. ಟೆಂಡರ್‌ದಾರರು ಅಂಗಡಿಗಳಿಂದ ಬಲವಂತವಾಗಿ ಹೆಚ್ಚು ಸುಂಕ ವಸೂಲಿ ಮಾಡುತ್ತಿದ್ದರು ಎನ್ನುವ ಆರೋಪ ಕೇಳಿಬರುತ್ತಿತ್ತು. ಆದ್ದರಿಂದ ಈ ಬಾರಿ ಸುಂಕ ವಸೂಲಾತಿ ಟೆಂಡರ್ ಕೈಬಿಡಲು ಹಾಗೂ ವ್ಯಾಪಾರಸ್ಥರಿಂದ ಸುಂಕ ವಸೂಲಿ ಮಾಡದಂತೆ ಸೂಚಿಸಲಾಗಿದೆ. ಒಂದು ವೇಳೆ ಯಾರಾದರೂ ಅನಧಿಕೃತವಾಗಿ ಸುಂಕ ವಸೂಲಿ ಮಾಡಿದರೆ ಅವರ ವಿರುದ್ಧ ಪ್ರಕರಣ ದಾಖಲಿಸಲಾಗುತ್ತದೆ ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.ಪರಿಷೆಯಲ್ಲಿ ಎನ್‌ಜಿಒ ಸಹಯೋಗದೊಂದಿಗೆ ಪ್ಲಾಸ್ಟಿಕ್ ವಿರುದ್ಧ ಜನ ಜಾಗೃತಿ ಕಾರ್ಯ ಮಾಡಲಾಗುತ್ತಿದೆ. ಅದಕ್ಕಾಗಿ 'ಪರಿಷೆಗೆ ಬನ್ನಿ, ಕೈ ಚೀಲ ತನ್ನಿ' ಎಂದು ಘೋಷವಾಕ್ಯದೊಂದಿಗೆ ಪ್ಲಾಸ್ಟಿಕ್ ಚೀಲ ನಿಷೇಧಿಸಲು ಕ್ರಮ ಕೈಗೊಳ್ಳಲಾಗಿದೆ ಎಂದಿದ್ದಾರೆ.ಬಿಬಿಎಂಪಿ ವತಿಯಿಂದ ಮಾರ್ಷಲ್‌ಗಳನ್ನು ನಿಯೋಜಿಸಲು ಮತ್ತು ಪರಿಷೆಗೆ ಪಾಲ್ಗೊಳ್ಳುವ ಜನರ ಆರೋಗ್ಯ ದೃಷ್ಟಿಯಿಂದ ತುರ್ತು ಚಿಕಿತ್ಸೆ ವಾಹನ ಹಾಗೂ ಅಗ್ನಿಶಾಮಕ ವಾಹನ ವ್ಯವಸ್ಥೆ ಮಾಡಲು ಸೂಚಿಸಲಾಗಿದೆ. ದೊಡ್ಡ ಗಣಪತಿ ದೇವಸ್ಥಾನದ ರಸ್ತೆಯಿಂದ ರಾಮಕೃಷ್ಣ ಆಶ್ರಮದ ರಸ್ತೆಯವರೆಗೆ ಮತ್ತು ಗೋಕುಲೆ ಇನ್‌ಸ್ಟಿಟ್ಯೂಟ್ ರಸ್ತೆಯ ಮಧ್ಯದಲ್ಲಿ ಬ್ಯಾರಿಕೇಡ್, ಸುತ್ತ ಮುತ್ತ ಹೆಚ್ಚಿನ ಸಿಸಿಟಿವಿ, ಬೀದಿ ದೀಪಗಳ ಅಳವಡಿಕೆ ಹಾಗೂ ದುರಸ್ತಿಯಲ್ಲಿರುವ ವಿದ್ಯುತ್ ದೀಪಗಳನ್ನು ಸರಿಪಡಿಸಬೇಕು ಎಂದು ಬಿಬಿಎಂಪಿ ಹಾಗೂ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.ದೇವಾಲಯದ ಒಳ ಹಾಗೂ ಹೊರ ಭಾಗದಲ್ಲಿ ದೀಪಾಲಂಕಾರ, ಕುಡಿಯುವ ನೀರು, ನಿರಂತರ ವಿದ್ಯುತ್ ಮತ್ತು ಸಾರ್ವಜನಿಕ ಶೌಚಾಲಯ ವ್ಯವಸ್ಥೆ ಮಾಡಬೇಕು. ಕಡಲೆ ಕಾಯಿ ಪರಿಷೆಯ ಪ್ರಯುಕ್ತ ಲಕ್ಷಾಂತರ ಜನರು ಆಗಮಿಸುವುದರಿಂದ ಕಾನೂನು ಸುವ್ಯವಸ್ಥೆ ಮತ್ತು ಸಂಚಾರ ವ್ಯವಸ್ಥೆಗಾಗಿ ಪೊಲೀಸ್ ಇಲಾಖೆ ಹೆಚ್ಚಿನ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಬೇಕಾಗುತ್ತದೆ ಹಾಗೂ ದೇವಾಲಯದ ಸುತ್ತ ಮುತ್ತ ಮತ್ತು ಜನ ಸಂಚಾರ ಇರುವ ಕಡೆ ದ್ವಿಚಕ್ರ ಮತ್ತು ಭಾರಿ ವಾಹನಗಳ ನಿಲುಗಡೆ ನಿಷೇಧಿಸಬೇಕಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ.

ದೊಡ್ಡ ಬಸವಣ್ಣ ದೇವಾಲಯದ ಹೊರ ಆವರಣ ಮತ್ತು ಪಕ್ಕದಲ್ಲಿ ತಾತ್ಕಾಲಿಕ ಔಟ್‌ಪೋಸ್ಟ್ ಅಳವಡಿಸಬೇಕಾಗಿದೆ. ರಾಮಕೃಷ್ಣ ಆಶ್ರಮ ವೃತ್ತದಿಂದ ಹನುಮಂತನಗರ, ಕತ್ರಿಗುಪ್ಪೆ, ಬ್ಯಾಂಕ್ ಕಾಲೋನಿ, ಗಿರಿನಗರ, ಆವಲಹಳ್ಳಿ, ವಿದ್ಯಾಪೀಠ ವೃತ್ತ ಮುಂತಾಂದ ಸ್ಥಳಗಳಿಗೆ ಹೋಗುವ ಸಾರಿಗೆ ಬಸ್ಸುಗಳ ಮಾರ್ಗ ಬದಲಾವಣೆ ಮಾಡಲು ಸಂಬಂಧಪಟ್ಟವರಿಗೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ.ಪೊಲೀಸ್ ಇಲಾಖೆಯವರು ಮೂರು ಪಾಳಿಯಲ್ಲಿ ಸಿಬ್ಬಂದಿಯನ್ನು ನಿಯೋಜಿಸಲಿದ್ದಾರೆ. ಬೆಳಗ್ಗೆ 9 ರಿಂದ ರಾತ್ರಿ 11.30ರವರೆಗೆ ಪೊಲೀಸರು ಕರ್ತವ್ಯ ನಿರ್ವಹಿಸಲಿದ್ದಾರೆ. ಸಾರ್ವಜನಿಕರ ಸುರಕ್ಷಿತ ದೃಷ್ಟಿಯಿಂದ ನಿಗಾವಹಿಸಲು ಪ್ರಮುಖ ಸ್ಥಳಗಳಲ್ಲಿ 12 ಕಾವಲು ಗೋಪುರಗಳನ್ನು ನಿರ್ಮಾಣ ಮಾಡಲಾಗುತ್ತದೆ ಮತ್ತು ವಾಹನಗಳ ಪಾರ್ಕಿಂಗ್‌ಗಾಗಿ ಪ್ರತ್ಯೇಕ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ರಾಮಲಿಂಗಾ ರೆಡ್ಡಿ ತಿಳಿಸಿದ್ದಾರೆ

## 'ವೈದ್ಯಕೀಯ ವಿದ್ಯಾರ್ಥಿ'ಗಳಿಗೆ ಶಾಕ್

**ಬೆಂಗಳೂರು:** ರಾಜ್ಯದಲ್ಲಿ ವೈದ್ಯಕೀಯ ವ್ಯಾಸಂಗದ ನಿರೀಕ್ಷೆಯಲ್ಲಿದ್ದಂತವರಿಗೆ ಸರ್ಕಾರ ಬಿಗ್ ಶಾಕ್ ನೀಡಿದೆ. 2024-25ನೇ ಸಾಲಿಗೆ ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿನ ಸ್ನಾತಕೋತ್ತರ ಎಂ.ಡಿ, ಎಂಎಸ್ ಕೋರ್ಸಿನ ಸೀಟುಗಳ ಶುಲ್ಕವನ್ನು ಹೆಚ್ಚಿಸಿ ಆದೇಶಿಸಿದೆ.

ಈ ಕುರಿತಂತೆ ವೈದ್ಯಕೀಯ ಶಿಕ್ಷಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ನಡವಳಿಯನ್ನು ಹೊರಡಿಸಿದ್ದು, 2024-25ನೇ ಸಾಲಿನ ಸ್ನಾತಕೋತ್ತರ ವೈದ್ಯಕೀಯ ಕೋರ್ಸ್ (ಎಂಡಿ/ಎಂಎಸ್)ಗಳ ಸೀಟು ಹಂಚಿಕೆ & ಶುಲ್ಕ ನಿಗಧಿಗೆ ಸಂಬಂಧಿಸಿದಂತೆ ಸರ್ಕಾರವು ರಾಜ್ಯದ ಖಾಸಗಿ ಕಾಲೇಜುಗಳ ಸಂಘಗಳಾದ ಕರ್ನಾಟಕ ವೃತ್ತಿಪರ ಕಾಲೇಜುಗಳ ಪ್ರತಿಷ್ಠಾನ (ಏಕಅಈ), ಕರ್ನಾಟಕ ಅಲ್ಪಸಂಖ್ಯಾತರ ವೃತ್ತಿಪರ ಕಾಲೇಜುಗಳ ಸಂಘ (ಂಒಕಅಏ) ಹಾಗೂ ಕರ್ನಾಟಕ ಧಾರ್ಮಿಕ ಮತ್ತು ಭಾಷಾ ಅಲ್ಪಸಂಖ್ಯಾತ ಕಾಲೇಜುಗಳ ಸಂಘ (ಏಖಐಒಕಅಂ) ಗಳೊಂದಿಗೆ ಪರಸ್ಪರ ಒಪ್ಪಂದದ ಒಡಂಬಡಿಕೆಯನ್ನು ಮಾಡಿಕೊಳ್ಳಬೇಕಾಗಿದೆ.

2024-25ನೇ ಸಾಲಿನ ಸ್ನಾತಕ ಮತ್ತು ಸ್ನಾತಕೋತ್ತರ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಖಾಸಗಿ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕಾಲೇಜುಗಳ ಸಂಘಗಳೊಂದಿಗೆ ಪರಸ್ಪರ ಒಡಂಬಡಿಕೆ ಮಾಡಿಕೊಳ್ಳುವ ಕುರಿತು ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:12-06-2024ರಂದು ನಡೆದ ಸಭೆಯಲ್ಲಿ, ಖಾಸಗಿ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕಾಲೇಜುಗಳ ಸಂಘಗಳು ಶುಲ್ಕ ಹೆಚ್ಚಳ ಹಾಗೂ ಇನ್ನಿತರೆ ಕೆಲವು ಬೇಡಿಕೆಗಳನ್ನು ಸಲ್ಲಿಸಿರುತ್ತಾರೆ ಎಂದಿದ್ದಾರೆ.

ಅದರಂತೆ, ರಾಜ್ಯದ ಖಾಸಗಿ ಕಾಲೇಜುಗಳ ಸಂಘಗಳಾದ ಏಕಅಈ, ಏಖಐಒಕಅಂ & ಂಒಕಅಏ ರವರು ಸಲ್ಲಿಸಿರುವ ಬೇಡಿಕೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು 2024-25ನೇ ಸಾಲಿನ ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿಪರ ಕಾಲೇಜುಗಳ ಪ್ರತಿಷ್ಠಾನ (ಏಕಅಈ), ಕರ್ನಾಟಕ ಅಲ್ಪ ಸಂಖ್ಯಾತರ ವೃತ್ತಿಪರ ಕಾಲೇಜುಗಳ ಸಂಘ (ಂಒಕಅಏ) ಹಾಗೂ ಕರ್ನಾಟಕ ಧಾರ್ಮಿಕ ಮತ್ತು ಭಾಷಾ ಅಲ್ಪಸಂಖ್ಯಾತ ಕಾಲೇಜುಗಳ ಸಂಘ(ಏಖಐಒಕಅಂ) ರವರು ಸಹಿ ಮಾಡಿ ಸರ್ಕಾರಕ್ಕೆ ಸಲ್ಲಿಸಿರುವ ಪರಸ್ಪರ ಒಡಂಬಡಿಕೆಯಂತೆ ಸರ್ಕಾರಿ/ಖಾಸಗಿ ಕೋಟಾದ ಸೀಟುಗಳಿಗೆ ಅನ್ವಯಿಸುವಂತೆ ಶೇ.10ರಷ್ಟು ಪ್ರವೇಶ ಶುಲ್ಕವನ್ನು ಹೆಚ್ಚಿಸಿ ಸ್ನಾತಕೋತ್ತರ ವೈದ್ಯಕೀಯ ಕೋರ್ಸ್ ಸೀಟುಗಳಿಗೆ ಈ ಕೆಳಕಂಡ ಕೋಷ್ಟಕದಲ್ಲಿ ನಮೂದಿಸಿರುವಂತೆ ಶುಲ್ಕವನ್ನು ನಿಗಧಿಪಡಿಸಲು ಕೋರಿರುತ್ತಾರೆ ಎಂದು ತಿಳಿಸಿದ್ದಾರೆ.

2024-25ನೇ ಸಾಲಿನ ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳಿಗೆ ಸಂಬಂಧಿಸಿದಂತೆ, ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳು, ಕರ್ನಾಟಕ ವೃತ್ತಿಪರ ಕಾಲೇಜುಗಳ ಪ್ರತಿಷ್ಠಾನ (ಏಕಅಈ), ಕರ್ನಾಟಕ ಅಲ್ಪಸಂಖ್ಯಾತರ ವೃತ್ತಿಪರ ಕಾಲೇಜುಗಳ ಸಂಘ (ಂಒಕಅಏ) ಹಾಗೂ ಕರ್ನಾಟಕ ಧಾರ್ಮಿಕ ಮತ್ತು ಭಾಷಾ ಅಲ್ಪಸಂಖ್ಯಾತ ಕಾಲೇಜುಗಳ ಸಂಘದ (ಏಖಐಒಕಅಂ) ಅಡಿಯಲ್ಲಿ ಬರುವ ಎಲ್ಲಾ ಕಾಲೇಜುಗಳು ಹಾಗೂ ರಾಜ್ಯದ ಡೀಮ್ಡ್ ವಿಶ್ವವಿದ್ಯಾಲಯ ಮತ್ತು ಖಾಸಗಿ ವಿಶ್ವವಿದ್ಯಾಲಯದಡಿ ಬರುವ ವೈದ್ಯಕೀಯ ಕಾಲೇಜುಗಳಲ್ಲಿ 2024-25ನೇ ಸಾಲಿಗೆ ಪವೇಶ ಶುಲ್ಕವನ್ನು ಶೇ.10ರಷ್ಟು ಹೆಚ್ಚಳ ಮಾಡಿ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಲಾಗಿದೆ ಎಂದಿದ್ದಾರೆ.

## ನಾಳೆ ರಾಜ್ಯಾದ್ಯಂತ 'ಮದ್ಯ' ಮಾರಾಟ ಬಂದ್!

ಬೆಂಗಳೂರು : ಅಬಕಾರಿ ಇಲಾಖೆಯಲ್ಲಿನ ಭ್ರಷ್ಟಾಚಾರ ನಿಯಂತ್ರಿಸಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಸ್ವಚ್ಛ ಅಬಕಾರಿ ಅಭಿಯಾನದಡಿ ನ. 20ರಂದು ರಾಜ್ಯಾದ್ಯಂತ ಮದ್ಯ ಮಾರಾಟ ಬಂದ್‌ಗೆ ಫೆಡರೇಶನ್ ಆಫ್ ವೈನ್ ಮರ್ಚಂಟ್ಸ್ ಅಸೋಸಿಯೇಶನ್ ಕರ್ನಾಟಕ ಕರೆ ನೀಡಿದೆ.

ಸುದ್ದಿಗೋಷ್ಠಿ ಯಲ್ಲಿ ಈ ವಿಷಯ ತಿಳಿಸಿದ ಅಸೋಶಿ ಯೇಶನ್ ಪ್ರಧಾನ ಕಾರ್ಯದರ್ಶಿ ಬಿ. ಗೋವಿಂದರಾಜ್ ಹೆಗ್ಡೆ, ಅಬಕಾರಿ ಇಲಾಖೆ ಯನ್ನು ಆರ್ಥಿಕ ಸಚಿವರೇನಿರ್ವಹಿಸಬೇಕು. ಈ



ಬಗ್ಗೆ ಮುಖ್ಯಮಂತ್ರಿ ನೇತೃತ್ವದಲ್ಲಿ ಸಭೆ ನಡೆಸಬೇಕು. ವ್ಯಾಪಾರಿಗಳು ಪರವಾನಗಿ ಪಡೆಯುವಾಗ ಹಾಗೂ ಮರು ನೋಂದಣಿ ಮಾಡಿಕೊಳ್ಳುವಾಗ ಅಧಿಕಾರಿಗಳು ಲಂಚ ಕೇಳುತ್ತಿರುವ ಬಗ್ಗೆ ಸೂಕ್ತ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಅಬಕಾರಿ ಕಾಯ್ದೆಯ ಕಲಂ 29 ಪುನರ್ ವಿಮರ್ಶಿಸಿ, ತಿದ್ದುಪಡಿ ಮಾಡಬೇಕು. ಚಿಲ್ಲರೆ ಲದೆ ಮಾರಾಟದ ಮೇಲೆ ಮದ್ಯ ಕನಿಷ್ಠ ಶೇ 20 ರಷ್ಟು ಲಾಭಾಂಶ ನೀಡಬೇಕು. ನಕಲಿ ಮದ್ಯ ತಯಾರಕರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಮದ್ಯದ ಪಾರ್ಸಲ್‌ಗೆ ಸಂಬಂಧಿಸಿದಂತೆ ಕಾನೂನು ತಿದ್ದುಪಡಿ ಮಾಡಿ, ಅವಕಾಶ ಒದಗಿಸಬೇಕು ಎಂದು ಒತ್ತಾಯಿಸಿದರು.

## ಸಂಧ್ಯಾ ಸೊರಬಗೆ ಕಲಾಭೂಮಿ ರಾಜ್ಯೋತ್ಸವ ಪ್ರಶಸ್ತಿ

ಬೆಂಗಳೂರು/ಶಿವಮೊಗ್ಗ: ಕಲಾಭೂಮಿ ಪ್ರತಿಷ್ಠಾನ (ರಿ) ಸಂಧ್ಯಾ ಸೊರಬಗೆ ರಾಜ್ಯೋತ್ಸವ ಪ್ರಶಸ್ತಿ ನೀಡುತ್ತಿದ್ದು, ಪತ್ರಿಕೋದ್ಯಮ ಮತ್ತು ಹವ್ಯಾಸಿ ರಂಗಭೂಮಿಯಲ್ಲಿನ ಸೇವೆಯನ್ನು ಪರಿಗಣಿಸಿ

ರಾಜ್ಯೋತ್ಸವ ಪ್ರಶಸ್ತಿ" ನೀಡುತ್ತಿದೆ. ಪ್ರಶಸ್ತಿ ಪ್ರದಾನ ಸಮಾರಂಭವು ಇದೇ ನವೆಂಬರ್ 29ರಂದು ಬೆಂಗಳೂರಿನ ಕಲಾಗ್ರಾಮ ಸಾಂಸ್ಕೃತಿಕ ಸಮುಚ್ಚಯದಲ್ಲಿ ನಡೆಯಲಿದೆ ಎಂದು ಕಲಾಭೂಮಿ ಪ್ರತಿಷ್ಠಾನದ ಸಂಸ್ಥಾಪಕ ನಟ,ನಿರ್ದೇಶಕ ಆಸ್ಕರ್ ಕೃಷ್ಣಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಸಂಧ್ಯಾ ಸೊರಬ ಇವರು



ಸೊರಬದ ಹಿರಿಯ ಪತ್ರಕರ್ತ ಯು.ಎನ್.ಲಕ್ಷ್ಮೀಕಾಂತ್ ಇವರ ಹಿರಿಯ ಪುತ್ರಿಯಾಗಿದ್ದು, ಕಳೆದ 14 ವರ್ಷಗಳಿಂದ ಮುದ್ರಣ,ದೃಶ್ಯಮಾಧ್ಯಮ ಪತ್ರಿಕೋದ್ಯಮದಲ್ಲಿ ರಾಜಕೀಯ ವರದಿಗಾರಿಕೆ,ವಿಶ್ಲೇಷಣೆ ನಿರೂಪಣೆ ಸೇರಿದಂತೆ ವಿವಿಧ ವಿಭಾಗಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಇಲ್ಲಿಯವರೆಗೆ ಸಂಧ್ಯಾ ಸೊರಬ ಇವರಿಗೆ ತಾಲೂಕು ಆಡಳಿತ ವತಿಯಿಂದ ಗಣರಾಜ್ಯೋತ್ಸವ ಪ್ರಶಸ್ತಿ,ಉತ್ತರ ಕರ್ನಾಟಕ ಸಂಘದ ಬಹುಮುಖ ಪ್ರತಿಭೆ, ರಾಜ್ಯಮಟ್ಟದ ವಿಠ್ಠಲಶ್ರೀ ಹಾಗೂ ಟ್ವೆಲ್ ಮೀಡಿಯಾ ವತಿಯಿಂದ ಆಲ್ ಇಂಡಿಯಾ ವುಮೆನ್ ಅಚೀವರ್ಸ್ ಚೇಂಜ್ ಮೇಕರ್ ಪ್ರಶಸ್ತಿ ಲಭಿಸಿದೆ.

## ಜಾನುವಾರು ಮೇಲೆ ಹುಲಿ ದಾಳಿ: ಅರಣ್ಯಾಧಿಕಾರಿಗಳ ವಿರುದ್ಧ ರೊಚ್ಚಿಗೆದ್ದ ಗ್ರಾಮಸ್ಥರು

ಮೈಸೂರು: ಜಾನುವಾರು ಮೇಲೆ ಹುಲಿ ದಾಳಿ ಮಾಡಿರುವ ಘಟನೆ ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನ ನಾಗಣಾಪುರದಲ್ಲಿ ನಡೆದಿದೆ.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಹೆಡಿಯಾಲ ವಲಯ ವ್ಯಾಪ್ತಿಯಲ್ಲಿ ಹುಲಿ ಹಸುವಿನ ಮೇಲೆ ದಾಳಿ ನಡೆಸಿದ್ದು, ಹುಲಿ ಸೆರೆ ಹಿಡಿಯದ ಅರಣ್ಯಾಧಿಕಾರಿಗಳ ವಿರುದ್ದ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ರಾಮದಲ್ಲಿ ಪದೇ ಪದೇ ಹುಲಿ ಕಾಣಿಸಿಕೊಳ್ಳುತ್ತಿದ್ದು, ಕಳೆದ ವರ್ಷ ಇದೇ ಸ್ಥಳದಲ್ಲಿ ಹುಲಿ ಮಹಿಳೆಯನ್ನು ಕೊಂದಿತ್ತು.ಇದೀಗ ಮತ್ತೆ ಹುಲಿ ಕಾಣಿಸಿಕೊಂಡು ಆತಂಕ ಸೃಷ್ಟಿ ಮಾಡಿದ್ದು, ಹುಲಿ ಸೆರೆ ಹಿಡಿಯುವಂತೆ ಸ್ಥಳೀಯರು ಒತ್ತಾಯ ಮಾಡಿದ್ದಾರೆ.

ಈ ವೇಳೆ ಅರಣ್ಯಾಧಿಕಾರಿಯನ್ನ ಯುವಕರು ತರಾಟೆ ತೆಗೆದುಕೊಂಡಿದ್ದು, ನಿಮ್ಮಿಂದ ಹುಲಿಯನ್ನ ಕಾಡಿಗಟ್ಟಲು ಸಾಧ್ಯವಿಲ್ಲ ಅಂದ್ರೆ ನಾವೇ ಓಡಿಸುತ್ತೇವೆ ಎಂದು ಅಧಿಕಾರಿಗೆ ಹಿಗ್ಗಾಮುಗ್ಗಾ ಕ್ಲಾಸ್ ತೆಗೆದುಕೊಂಡಿದ್ದಾರೆ.ಹುಲಿ ದಾಳಿಯಿಂದ ಯಾರದರೂ ಸತ್ತ ಮೇಲೆ ಬಂದು ನೀವು ಮೌನಾಚರಣೆ ಮಾಡೋದು ಬೇಡ. ನಾಳೆ ನೀವು ಬಂದು ಪರಿಹಾರ ಕೊಡುವುದು ಬೇಡ. ನೀವು ಹುಲಿ ಬಗ್ಗೆ ಓದಿಕೊಂಡಿದ್ದೀರಾ ನಾವು ಅನುಭವಿಸುತ್ತಿದ್ದೇವೆ. ನಿಮ್ಮ ಕೈಯಲ್ಲಿ ಶಾಶ್ವತ ಪರಿಹಾರ ಕೊಡಲು ಸಾಧ್ಯವಿಲ್ಲ. ಕಳೆದ ವರ್ಷ ಹುಲಿ ದಾಳಿಯಾಗಿ ಮಹಿಳೆ ಸಾವನಪ್ಪಿದ್ದರು. ಈಗ ಮತ್ತೆ ಜಾನುವಾರು ಮೇಲೆ ದಾಳಿಯಾಗಿದೆ ಎಂದು ಗ್ರಾಮಸ್ಥರು ಕಿಡಿಕಾರಿದ್ದಾರೆ.ತಿ

## ತಿರುಪತಿ ತಿಮ್ಮಪ್ಪನ ದರ್ಶನ ಈಗ ಮತ್ತಷ್ಟು ಸುಲಭ!

**ಆಂಧ್ರಪ್ರದೇಶ:** ತಿರುಪತಿ ತಿಮ್ಮಪ್ಪನ ದರ್ಶನ ಪಡೆಯಲು ಹಲವು ರಾಜ್ಯ, ದೇಶ-ವಿದೇಶಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಭಕ್ತಾಧಿಗಳು ಆಗಮಿಸುತ್ತಾರೆ. ಇತ್ತೀಚೆಗಷ್ಟೇ ಉಂಟಾದ ಲಡ್ಡು ಪ್ರಸಾದ ವಿವಾದದ ನಡುವೆಯೂ ದೇವಾಲಯಕ್ಕೆ ಭಕ್ತರ ಸಂಖ್ಯೆಯ ಹರಿವು ಹೆಚ್ಚಾಯಿತೇ ವಿನಃ ಕಡಿಮೆ ಕಾಣಿಸಲಿಲ್ಲ.

ಇದು ದೇವಾಲಯದ ಟ್ರಸ್ಟ್ ಮೇಲಿದ್ದ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ. ಈ ನಿಟ್ಟಿನಲ್ಲಿ ದೇವಾಲಯದ ಹಿಂದಿನ ನಿಯಮಗಳನ್ನು ಪರಿಶೀಲಿಸಿದ ಟಿಟಿಡಿ, ಇಂದು ಸಭೆ ನಡೆಸಿ, ಹೊಸ ಬದಲಾವಣೆಗಳನ್ನು ಕಾರ್ಯರೂಪಕ್ಕೆ ತರಲು ನಿರ್ಧರಿಸಿದೆ.

**2ರಿಂದ 3 ಗಂಟೆಯೊಳಗೆ ದರ್ಶನ**

ಟಿಟಿಡಿ ಆಡಳಿತ ಮಂಡಳಿ ಹಲವು ನಿರ್ಧಾರಗಳನ್ನು ತೆಗೆದುಕೊಂಡಿದ್ದು, ಶ್ರೀವಾಣಿ ಟ್ರಸ್ಟ್ ಅನ್ನು ವಜಾಗೊಳಿಸಿದೆ. ಕೇವಲ 2ರಿಂದ 3 ಗಂಟೆಯೊಳಗೆ ಸಾಮಾನ್ಯ ಭಕ್ತರು ದೇವರ ದರ್ಶನ ಪಡೆಯುವಂತೆ ಬದಲಾವಣೆ ತರಲು ಎಐ ಮತ್ತು ಆಧುನಿಕ ತಂತ್ರಜ್ಞಾನ ಬಳಸಲು ಕ್ರಮಕೈಗೊಳ್ಳಲಾಗಿದೆ. ಕಂಪಾರ್ಟ್‌ಮೆಂಟ್‌ಗಳಲ್ಲಿ



ಭಕ್ತರಿಗೆ ತೊಂದರೆ, ಕಿರಿಕಿರಿ ಉಂಟಾಗದಂತೆ ದರ್ಶನ ಲಭ್ಯವಾಗಲು ಯೋಜನೆ ರೂಪಿಸಲಾಗಿದೆ. ಟಿಟಿಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅನ್ಯಧರ್ಮೀಯ ನೌಕರರನ್ನು ವಿಆರ್‌ಎಸ್ ಅಥವಾ ಸರ್ಕಾರಿ ಇಲಾಖೆಗಳಿಗೆ ವರ್ಗಾಯಿಸಲು ನಿರ್ಧರಿಸಲಾಗಿದೆ. ಈ ಕುರಿತು ಟಿಟಿಡಿ ಅಧ್ಯಕ್ಷ ಬಿಆರ್ ನಾಯ್ಡು ಸ್ಪಷ್ಟಪಡಿಸಿದ್ದಾರೆ.

**ಮಂಜೂರಾದ 20 ಎಕರೆ ಭೂಮಿ ಟಿಟಿಡಿಗೆ ಹಸ್ತಾಂತರ**

ತಿರುಮಲದ ಬಳಿಯಿರುವ ಕಸದ ತೊಟ್ಟಿಯನ್ನು ಮೂರು ತಿಂಗಳೊಳಗೆ ತೆರವುಗೊಳಿಸಲು ಟಿಟಿಡಿ ನಿರ್ಧರಿಸಿದೆ. ಶ್ರೀನಿವಾಸಸೇತು ಫ್ಲೈಓವರ್ ಅನ್ನು ಗರುಡ ವಾರದಿ ಎಂದು ಮರುನಾಮಕರಣ ಮಾಡಲಾಗಿದೆ. ಅಲಿಪಿರಿಯಲ್ಲಿ ದೇವಲೋಕಕ್ಕೆ ಮಂಜೂರಾದ 20 ಎಕರೆ ಭೂಮಿಯನ್ನು ಟಿಟಿಡಿಗೆ ಹಸ್ತಾಂತರಿಸಲು ಸರಕಾರಕ್ಕೆ ಪತ್ರ ಬರೆಯುವಂತೆ ಬಿ.ಆರ್. ನಾಯ್ಡು ತಿಳಿಸಿದ್ದಾರೆ. ಇದಲ್ಲದೆ, ತಿರುಮಲ ಸುತ್ತಮುತ್ತಲಿನ ಪ್ರದೇಶಗಳಲ್ಲಿ ರಾಜಕೀಯದ ಬಗ್ಗೆ ಮಾತನಾಡದಂತೆ ನಿರ್ಬಂಧ ಹೇರಲಾಗಿತ್ತು. ಈ ನಿಯಮಗಳನ್ನು ಉಲ್ಲಂಘಿಸಿದರೆ ಪ್ರಕರಣ ದಾಖಲಿಸಲಾಗುವುದು ಎಂಬ ಎಚ್ಚರಿಕೆ ರವಾನಿಸಲಾಗಿದೆ.

**ಟಿಟಿಡಿ ಖಾತೆಗೆ ಜಮಾ:**

ಪ್ರತಿ ತಿಂಗಳ ಮೊದಲ ಮಂಗಳವಾರದಂದು ಸ್ಥಳೀಯರಿಗೆ ದೇವರ ದರ್ಶನ ನೀಡಲು ಟಿಟಿಡಿ ನಿರ್ಧರಿಸಿದೆ. ಶ್ರೀವಾಣಿ ಟ್ರಸ್ಟ್ ರದ್ದುಪಡಿಸಿ, ಟಿಕೆಟ್ ಮಾರಾಟದಿಂದ ಬಂದ ಹಣವನ್ನು ಟಿಟಿಡಿ ಖಾತೆಗೆ ಜಮಾ ಮಾಡಲು ಯೋಜಿಸಲಾಗಿದೆ. ಖಾಸಗಿ ಬ್ಯಾಂಕ್ ಠೇವಣಿಗಳಿಂದ ಸ್ವಾಮಿಗೆ ಸೇರಿದ ಹಣವನ್ನು ಸರ್ಕಾರಿ ಬ್ಯಾಂಕ್‌ಗಳಿಗೆ ಜಮಾ ಮಾಡಲು ಟಿಟಿಡಿ ಆಡಳಿತ ಮಂಡಳಿ ಮಹತ್ವದ ನಿರ್ಣಯ ಕೈಗೊಂಡಿದೆ.

ಹೊಸ ಬಗೆಯ ಖಾದ್ಯ

ಪಸ್ತುತ ಹಂಚಿಕೆಯಾಗುತ್ತಿರುವ ತಿರುಪತಿ ಲಡ್ಡು ಪ್ರಸಾದದಲ್ಲಿ ತುಪ್ಪದ ಗುಣಮಟ್ಟವನ್ನು ಮತ್ತಷ್ಟು ಪರಿಶೀಲನೆ ನಡೆಸಲಿದ್ದು, ಭಕ್ತರಿಗೆ ಅನ್ನದಾನದಲ್ಲಿ ಮತ್ತೊಂದು ಹೊಸ ಬಗೆಯ ಖಾದ್ಯವನ್ನು ನೀಡಲು ಮಂಡಳಿ ನಿರ್ಧರಿಸಿದೆ. ನೌಕರರಿಗೆ ಬ್ರಹ್ಮೋತ್ಸವ ಉಡುಗೊರೆಯನ್ನು 14 ಸಾವಿರದಿಂದ 15,400 ರೂ. ಗೆ ಹೆಚ್ಚಿಸಿ ಎಂದು ಟಿಟಿಡಿ ಆದೇಶ ಹೊರಡಿಸಿದೆ. ಪ್ರವಾಸೋದ್ಯಮ ಇಲಾಖೆಗೆ ನೀಡಲಾಗಿದ್ದ 4 ಸಾವಿರ ಎಸ್‌ಇಡಿ ಟಿಕೆಟ್‌ಗಳನ್ನು ರದ್ದುಗೊಳಿಸುವ ಮೂಲಕ ಟಿಟಿಡಿ ಅಧ್ಯಕ್ಷ ಬಿ.ಆರ್.ನಾಯ್ಡು ಅವರು ಹಲವು ಮಹತ್ವದ ಬದಲಾವಣೆಗಳನ್ನು ಈ ಸಭೆಯಲ್ಲಿ ಕೈಗೊಂಡಿದ್ದಾರೆ,

## ಸುದ್ದಿ ಸಂಜೆ

### ಸಾಫ್ಟ್‌ವೇರ್ ಉದ್ಯೋಗಿಗೆ 40.18 ಲಕ್ಷ ವಂಚನೆ!

ಬೆಂಗಳೂರು: ವಿದೇಶಕ್ಕೆ ಮಾದಕದ್ರವ್ಯ ಸಾಗಾಟದ ಪ್ರಕರಣದಲ್ಲಿ ಸಿಲುಕಿರುವಂತೆ ನಂಬಿಸಿ, ಪೊಲೀಸರ ಸೋಗಿನಲ್ಲಿ ಸಹಾಯ ಮಾಡುವುದಾಗಿ ಸಾಫ್ಟ್‌ವೇರ್ ಉದ್ಯೋಗಿಯೊಬ್ಬರಿಗೆ ವಂಚಿಸಿರುವ ಘಟನೆ ನಗರದಲ್ಲಿ ನಡೆದಿದೆ. 30 ವರ್ಷ ವಯಸ್ಸಿನ ಯುವತಿಯೊಬ್ಬರು ನೀಡಿರುವ ದೂರಿನನ್ವಯ ಮುಂಬೈ ಏರ್ ಕಸ್ಟಮ್ಸ್ ಅಧಿಕಾರಿಗಳ ಹೆಸರಿನಲ್ಲಿ 40.18 ಲಕ್ಷ ರೂ. ವರ್ಗಾಯಿಸಿಕೊಂಡು ವಂಚಿಸಿರುವ ವಂಚಕರ ವಿರುದ್ಧ ಬೆಂಗಳೂರು ಪಶ್ಚಿಮ ವಿಭಾಗದ ಸಿಇಎನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಇಂದು ಸಚಿವರ ಜಿಲ್ಲಾ ಪ್ರವಾಸ

ಚಾಮರಾಜನಗರ: ಇಂಧನ ಸಚಿವರಾದ ಕೆ.ಜೆ ಜಾರ್ಜ್ ಅವರು ನವೆಂಬರ್ 19ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಇಂದು ಬೆಳಿಗ್ಗೆ 10.30 ಗಂಟೆಗೆ ಚಾಮರಾಜನಗರಕ್ಕೆ ಆಗಮಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಗೆ ಭೇಟಿ ನೀಡುವರು. ಬೆಳಿಗ್ಗೆ 11.30 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಕೆ.ಡಿ.ಪಿ ಸಭಾಂಗಣದಲ್ಲಿ ಜಿಲ್ಲೆಯ ಚುನಾಯಿತ ಜನಪ್ರತಿನಿಧಿಗಳೊಂದಿಗೆ ಇಂಧನ ಇಲಾಖೆಗೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು ಎಂದು ಪ್ರಕಟಣೆ ತಿಳಿಸಿದೆ.

### ನ. 22ರಂದು ಸಭೆ

ಚಾಮರಾಜನಗರ : ಚಾಮರಾಜನಗರ ಜಿಲ್ಲಾಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ ಪರಿಶೀಲನಾ ಸಭೆಯನ್ನು ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರ ಅಧ್ಯಕ್ಷತೆಯಲ್ಲಿ ನವೆಂಬರ್ 22ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಾಂಗ್ಲಾ ನುಸುಳುಕೋರರು ವಶಕ್ಕೆ

ಚಿತ್ರದುರ್ಗ: ನಗರದ ಹೊಳಲ್ಕೆರೆ ರಸ್ತೆ ಅರವಿಂದ್ ಗಾರ್ಮೆಂಟ್ಸ್ ಮತ್ತು ವೈಟ್ ವಾಷನ್ ಗಾರ್ಮೆಂಟ್ಸ್ ಬಳಿ ಗಸ್ತು ತಿರುಗುತ್ತಿದ್ದ ಪೊಲೀಸರು ಧವಳಗಿರಿ ಬಡಾವಣೆಯ 2 ನೇ ಹಂತದಲ್ಲಿ ಅನುಮಾನಾಸ್ಪದವಾಗಿ ಸಂಚರಿಸುತ್ತಿದ್ದ 6 ಮಂದಿಯನ್ನು ವಶಕ್ಕೆ ಪಡೆದಿದ್ದಾರೆ. ವಿಚಾರಣೆಗೊಳಪಡಿಸಿದಾಗ 6 ಜನ ಬಾಂಗ್ಲಾ ನುಸುಳುಕೋರರು ಎಂಬುದು ಪತ್ತೆಯಾಗಿದೆ ಎಂದು ಚಿತ್ರದುರ್ಗ ಪೊಲೀಸರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಬಾಂಗ್ಲಾ ಮೂಲದ ಶೇಕ್ ಸೈಪುರ್ ರೊಹೆಮಾನ್, ಮೊಹಮ್ಮದ್ ಸುಮನ್ ಹುಸೇನ್ ಅಲಿ, ಮಜಾರುಲ್, ಅಜಿಜುಲ್ ಶೈಕ್, ಮುಹಮ್ಮದ್ ಸಾಕೀಬ್ ಸಿಕ್ದಾರ್, ಸನೋವರ್ ಹೊಸ್ಸೈನ್ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದು, ವಿಚಾರಣೆ ಮುಂದುವರೆಸಿದ್ದಾರೆ.ವಿಚಾರಣೆ ವೇಳೆ ಅವರ ಬಳಿ ಇದ್ದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ, 6 ಮಂದಿ ಬಾಂಗ್ಲಾದೇಶಕ್ಕೆ ಸೇರಿದ ಪ್ರಜೆಗಳಾಗಿದ್ದು, ಭಾರತಕ್ಕೆ ಬಂದು ಇಲ್ಲಿಯೇ ನೆಲೆಸುವ ಉದ್ದೇಶದಿಂದ ಈಗಾಗಲೇ ಸುಮಾರು ವರ್ಷಗಳ ಹಿಂದೆಯೇ ಅಕ್ರಮವಾಗಿ ಭಾರತಕ್ಕೆ ಬಂದಿದ್ದಾರೆ. ಮೊದಲು ಪಶ್ಚಿಮ ಬಂಗಾಳ ರಾಜ್ಯಕ್ಕೆ ಬಂದು, ಕೋಲ್ಕತ್ತಾ ನಗರದಲ್ಲಿ ನಕಲಿ ಆಧಾರ್ ಕಾರ್ಡ್, ಹಾಗೂ ಇತರೆ ದಾಖಲೆಗಳನ್ನು ಮಾಡಿಸಿಕೊಂಡು ಭಾರತದ ವಿವಿಧ ರಾಜ್ಯಗಳಲ್ಲಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದರು. ಈಗ ಚಿತ್ರದುರ್ಗ ನಗರದಲ್ಲಿ ಕೆಲಸಕ್ಕಾಗಿ ಬಂದಿದ್ದರು ಎಂಬ ಮಾಹಿತಿ ಇದೆ.6 ಮಂದಿಯಿಂದ ನಕಲಿ ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಲೇಬರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಪಾನ್ ಕಾರ್ಡ್‌ಗಳು, ಹಾಗೂ ಒಂದು ಪಾಸ್‌ಪೋರ್ಟ್ ಅನ್ನು ವಶಪಡಿಸಿಕೊಳ್ಳಲಾಗಿದೆ. ಸೆನ್ ಠಾಣೆ ಸಿಪಿಐ ಎನ್. ವೆಂಕಟೇಶ, ವಿಶೇಷ ವಿಭಾಗದ ಸಿಪಿಐ ಎನ್. ಗುಡ್ಡಪ್ಪ ಅವರ ನೇತೃತ್ವದಲ್ಲಿ ಪೊಲೀಸ್ ತಂಡ ಕಾರ್ಯಾಚರಣೆ ಕೈಗೊಂಡಿದೆ.

### 12 ಪರೀಕ್ಷಾರ್ಥಿಗಳ ವಿರುದ್ಧ ಪ್ರಕರಣ

ರಾಯಚೂರು: ಹೈದರಾಬಾದ್ ಕರ್ನಾಟಕ (ಕಲ್ಯಾಣ ಕರ್ನಾಟಕ) ವೃಂದ-97 ರ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಒ) ಪರೀಕ್ಷೆ ವೇಳೆ ನಡೆದ ಪ್ರತಿಭಟನೆಗೆ ಸಂಬಂಧಿಸಿದಂತೆ 12 ಪರೀಕ್ಷಾರ್ಥಿಗಳ ವಿರುದ್ಧ ಸೋಮವಾರ ಪ್ರಕರಣ ದಾಖಲಿಸಲಾಗಿದೆ.

ಈ ಪರೀಕ್ಷಾರ್ಥಿಗಳು ಜಿಲ್ಲೆಯ ಸಿಂಧನೂರು ಪಟ್ಟಣದ ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿ ಪಿಡಿಒ ಹುದ್ದೆ ಪರೀಕ್ಷೆಯಲ್ಲಿ ಅಕ್ರಮ, ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂದು ಆರೋಪಿಸುವ ಮೂಲಕ ಪರೀಕ್ಷೆ ಬಹಿಷ್ಕರಿಸಿ, ಪ್ರತಿಭಟನೆ ನಡೆಸಿದ್ದರು.

ಪರೀಕ್ಷಾ ಮೇಲ್ವಿಚಾರಕ ಬಸವರಾಜ ತಡಕಲ್ ಸಿಂಧನೂರು ಅವರು ಈ ಬಗ್ಗೆ ನಗರ ಠಾಣೆಯಲ್ಲಿ ದೂರು ದಾಖಲಿಸಿದ್ದು, ಈ ದೂರಿನ ಮೇರೆಗೆ 12 ಜನರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಓರ್ವ ಪರೀಕ್ಷಾರ್ಥಿಯನ್ನು ವಶಕ್ಕೆ ಪಡೆದು ಸ್ಟೇಷನ್ ಬೇಲ್ ಮೇಲೆ ಬಿಡುಗಡೆ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಫೆ. 4ರಂದು ಕ್ರಾಂತಿವೀರ ಬ್ರಿಗೇಡ್ ಉದ್ಘಾಟನೆ

ವಿಜಯಪುರ: ರಾಜ್ಯದಲ್ಲಿ ಕ್ರಾಂತಿವೀರ ಬ್ರಿಗೇಡ್ ಅಸ್ತಿತ್ವಕ್ಕೆ ಬರುತ್ತಿದೆ. ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಸಮ್ಮುಖದಲ್ಲಿ ವಿಜಯಪುರದ ಮುಖಣಾಪುರ ಸೋಮೇಶ್ವರ ಸ್ವಾಮೀಜಿಯವರು ಕ್ರಾಂತಿವೀರ ಬ್ರಿಗೇಡ್ ಹೆಸರು ಘೋಷಣೆ ಮಾಡಿದ್ದಾರೆ. ಫೆಬ್ರುವರಿ 4ರಂದು ಬಸವನ ಬಾಗೇವಾಡಿಯಲ್ಲಿ ಕ್ರಾಂತಿವೀರ ಬ್ರಿಗೇಡ್ ಉದ್ಘಾಟನೆಯಾಗಲಿದೆ. ವಿಜಯಪುರದಲ್ಲಿ ಸಭೆ ನಡೆಸಿ ಬ್ರಿಗೇಡ್ ಹೆಸರು ಅಂತಿಮಗೊಳಿಸಲಾಗಿದೆ. ಸೋಮೇಶ್ವರ ಸ್ವಾಮೀಜಿಯವರು ಬ್ರಿಗೇಡ್‌ನ ಮುಖ್ಯಸ್ಥರಾಗಲಿದ್ದಾರೆ.

# ಮಳೆಯಿಂದ ನಷ್ಟವಾಗಿರುವ ಬೆಳೆ; ಪರಿಹಾರ ವಿತರಣೆಗೆ ಒತ್ತಾಯ



ಮುಳಬಾಗಿಲು: ಪೆಂಗಲ್ ಚಂಡುಮಾರುತ ಜಡಿ ಮಳೆಯಿಂದ ನಷ್ಟವಾಗಿರುವ ಬೆಳೆ ಸಮೀಕ್ಷೆ ಮಾಡಲು ವಿಶೇಷ ತಂಡ ರಚನೆ ಮಾಡಿ ನಷ್ಟವಾಗಿರುವ ಪ್ರತಿ ಎಕರೆ ರಾಗಿಬೆಳೆಗೆ 1 ಲಕ್ಷ ವಾಣಿಜ್ಯ ಬೆಳೆಗಳಿಗೆ 3 ಲಕ್ಷ ಪರಿಹಾರ ವಿತರಣೆ ಮಾಡಬೇಕೆಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಪತ್ರಿಕಾ ಹೇಳಿಕಾ ಮುಖಾಂತರ ಮುಖ್ಯ ಮಂತ್ರಿಗಳನ್ನು ಒತ್ತಾಯಿಸಿದರು.

ನಗರದ ತಾಲ್ಲೂಕು ಕಚೇರಿ ಆವರಣದಲ್ಲಿ ಪತ್ರಿಕಾ ಮಾಧ್ಯಮ ಮಿತ್ರರೊಂದಿಗೆ ಮಾತನಾಡಿದ ರವರು ಪೆಂಗಲ್ ಚಂಡುಮಾರುತದಿಂದ ಕಳೆದ ಮೂರು ದಿನಗಳಿಂದ ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಹೊಲದಲ್ಲಿ ರಾಗಿ ಬೆಳೆ ನೆಲಕಚ್ಚಿದ್ದು, ರೈತರು ಆತಂಕಗೊಂಡಿದ್ದಾರೆ. ಜಿಲ್ಲೆಯ ಪ್ರಮುಖ ಆಹಾರ ಬೆಳೆಯಾದ ರಾಗಿ ಮಳೆಯಿಂದಾಗಿ ಪೂರ್ಣ ನಾಶವಾಗುತ್ತಿರುವ ಸ್ಥಿತಿ ತಲುಪಿರುವ ಜತೆಗೆ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಬೆಳೆದಿರುವ ಟೆಮೇಟೋ ಕ್ಯಾಪ್ಸಿಕಂ ಹೂ, ಬೆಳೆಗಳಿಗೆ ತೇವಾಂಶ ಹೆಚ್ಚಾಗಿ ರೋಗಗಳಿಗೆ ತುರ್ತಾಗಿ ಸಂಪೂರ್ಣವಾಗಿ ನಾಶವಾಗಿರುವುದರಿಂದ ಹಾಕಿದ ಬಂಡವಾಳ ಕೈಗೆ ಸಿಗದೆ ಸಂಕಷ್ಟದಲ್ಲಿರುವ ರೈತರ ಸಮಸ್ಯೆಗಳಿಗೆ ಜಿಲ್ಲಾಡಳಿತ ಜನ ಪ್ರತಿನಿಧಿಗಳು ಸ್ಪಂಧಿಸಬೇಕೆಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಕಳೆದ ಬಾರಿ ಬಿತ್ತಿದ್ದ ರಾಗಿಯಲ್ಲಿ ಶೇಕಡ 30 ರಷ್ಟು ಪಸಲು ಸಿಗದೆ ಜಾನುವಾರುಗಳ ಮೇವಿಗೂ ಪರದಾಡುವಂತಾಗಿತ್ತು. ಈ ಬಾರಿ ಉತ್ತಮ ಮಳೆಯಿಂದ ಬರ್ಜರಿ ಪಸಲು ಬಂದಿದೆ.

ಈಗಾಗಲೇ ಕೊಯ್ಲು ಕಾರ್ಯ ಆರಂಭವಾಗಿದೆ. ಆದರೆ ಪೆಂಗಲ್ ಚಂಡುಮಾರುತದಿಂದ ಕೈಗೆ ಬಂದ ಬೆಳೆ ಸಂಪೂರ್ಣವಾಗಿ ಹೊಲದಲ್ಲಿಯೇ ನಾಶವಾಗಿ ರೈತರು ಕಣೀರು ಸುರಿಸಬೇಕಾದ ಪರಿಸ್ತಿತಿ ಇದ್ದು, ಜಿಲ್ಲಾಡಳಿತದ ಮುಖಾಂತರ ಸರ್ಕಾರದಿಂದ ಬರುವ ಪರಿಹಾರಕ್ಕಾಗಿ ಜಾತಕಪಕ್ಷಗಳಂತೆ ಕಾಯುವಂತಾಗಿದೆ ಎಂದರು.

ತಾಲ್ಲೂಕು ಅಧ್ಯಕ್ಷ ಯಲುವಳ್ಳಿ ಪ್ರಭಾಕರ್ ಮಾತನಾಡಿ ಜಿಲ್ಲಾದ್ಯಂತ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಬೆಳೆದಿರುವ ಟೆಮೋಟೋ ಮತ್ತಿತರ ಹೂ ಬೆಳೆಗಳಿಗೆ ಮಾರುಕಟ್ಟೆಯಲ್ಲಿ ಉತ್ತಮವಾದ ಬೆಲೆ ಇದ್ದರೂ ಚಂಡುಮಾರುತದ ಜಡಿ ಮಳೆ ರೈತರ ಬದುಕನ್ನು ಬೀದಿಗೆ ತಳ್ಳಿ, ಖಾಸಗಿ ಸಾಲಕ್ಕೆ ಸಿಲುಕುವಂತೆ ಮಾಡಿದೆ.

3 ದಿನಗಳಿಂದ ಸುರಿಯುತ್ತಿರುವ ಜಡಿ ಮಳೆಯಿಂದ ಟೆಮೋಟೋಗೆ ಬೆಂಕಿ ರೋಗ ಹೂ ಬೆಳೆಗಳಿಗೆ ಚುಕ್ಕಿ ರೋಗದಿಂದ ಹೊಲದಲ್ಲಿಯೇ ಕೊಳೆಯುತ್ತಿದೆ.

ಲಕ್ಷಾಂತರ ರೂಪಾಯಿ ಔಷಧಿಗಳನ್ನು ತಂದು ಸಿಂಪರಣೆ ಮಾಡಿದರೂ ರೋಗ ನಿಯಂತ್ರಣಕ್ಕೆ ಬರುತ್ತಿಲ್ಲ. ಇದರಿಂದ ಬೆಳೆಯು ಇಲ್ಲದೆ ಹಾಕಿದ ಬಂಡವಾಳ ಕೈಗೆ ಸಿಗದೆ ನಷ್ಟವಾಗಿರುವ ರಾಗಿ, ಮತ್ತಿತರ ಬೆಳೆಗಳನ್ನುಸಮೀಕ್ಷೆ ಮಾಡಲು ವಿಶೇಷ ತಂಡ ರಚನೆ ಮಾಡಿ ಸಂಪರ್ಕವಾದ ವರದಿಯೊಂದಿಗೆ ಸರ್ಕಾರಕ್ಕೆ ಸಲ್ಲಿಸಿ ನಷ್ಟವಾಗಿರುವ ರಾಗಿ ಬೆಳೆಗೆ 1ಲಕ್ಷ, ಟೆಮೋಟೋ ಮತ್ತಿತರ ಹೂ ಬೆಳೆಗಳಿಗೆ 3 ಲಕ್ಷ ಪರಿಹಾರ ವಿತರಣೆ ಮಾಡುವ ಮುಖಾಂತರ ಸಂಕಷ್ಟದಲ್ಲಿರುವ ರೈತರ ರಕ್ಷಣೆಗೆ ನಿಲ್ಲಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಪತ್ರಿಕಾ ಹೇಳಿಕೆ ನೀಡುವಾಗ ತಾ.ಪ್ರ.ಕಾರ್ಯದರ್ಶಿ ರಾಜೇಶ್, ಪಾರುಕ್‌ಪಾಷ, ಜಿಲ್ಲಾಧ್ಯಕ್ಷ ಈಕಂಬಳ್ಳಿ ಮಂಜುನಾಥ, ಬಂಗಾರಿ ಮಂಜು, ಭಾಸ್ಕರ್, ಸುನಿಲ್‌ಕುಮಾರ್, ಶ್ರೀನಿವಾಸ್, ಜುಬೇರ್‌ಪಾಷ, ಯಾರಂಘಟ್ಟ ಗಿರೀಶ್, ನಾಗೇಶ್, ಧರ್ಮ, ಹೆಬ್ಬಣಿ ಆನಂದರೆಡ್ಡಿ, ಅಂಬ್ಲಿಕಲ್ ಮಂಜುನಾಥ, ರಾಮಕೃಷ್ಣಪ್ಪ, ಗಣೇಶ್, ಮುಂತಾದವರು ಇದ್ದರು.

## ಸುದ್ದಿ ಸಂಜೆ

### ನೇರ ಸಂದರ್ಶನ

**ಚಾಮರಾಜನಗರ:** ಬಂಧನ್ ಬ್ಯಾಂಕ್ ಹಾಗೂ ಕ್ರೆಡಿಟ್ ಆಕ್ಸಿಸ್ ಗ್ರಾಮೀಣ ಪ್ರೈ.ಲಿ ಕಂಪನಿಗೆ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಡಿಸೆಂಬರ್ 6 ರಂದು ಬೆಳಗ್ಗೆ 10.30 ರಿಂದ ಮಧ್ಯಾಹ್ನ 3.30 ಗಂಟೆಯವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ನಡೆಸಲಾಗುತ್ತದೆ. ಬಂಧನ್ ಬ್ಯಾಂಕ್‌ನಲ್ಲಿ 60 ಹುದ್ದೆಗಳಿಗೆ ಪಿ.ಯು.ಸಿ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲಾಗುತ್ತದೆ. ಕ್ರೆಡಿಟ್ ಆಕ್ಸಿಸ್ ಗ್ರಾಮೀಣ ಪ್ರೈ.ಲಿ ಸಂಸ್ಥೆಯಲ್ಲಿ 20 ಹುದ್ದೆಗಳಿಗೆ ಪಿಯುಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿರುವ ಮತ್ತು ಯಾವುದೇ ಪದವಿ ಹೊಂದಿರುವ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲಾಗುತ್ತದೆ. ಅಭ್ಯರ್ಥಿಗಳು 18 ರಿಂದ 30ರ ವಯೋಮಿತಿಯೊಳಗಿರಬೇಕು. ಆಸಕ್ತರು ತಮ್ಮ ಸ್ವ-ವಿವರ (ಬಯೋಡೆಟಾ) ಮತ್ತು ಅಂಕಪಟ್ಟಿಗಳ ಮೂಲ ಹಾಗೂ ಜೆರಾಕ್ಸ್ ಪ್ರತಿಗಳೊಂದಿಗೆ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ಉದ್ಯೋಗಾಧಿಕಾರಿಗಳನ್ನು ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಸಂಪರ್ಕಿಸಬಹುದು. ಎಂದು ಜಿಲ್ಲಾ ಉದ್ಯೋಗಾಧಿಕಾರಿ ಎ. ಮಹಮ್ಮದ್ ಅಕ್ಬರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಂಚಾರದಲ್ಲಿ ವ್ಯತ್ಯಯ

**ಚಾಮರಾಜನಗರ:** ಹಾಸನದಲ್ಲಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಇಂದು ನಡೆಯಲಿರುವ ಸಮಾವೇಶಕ್ಕೆ ಚಾಮರಾಜನಗರ ವಿಭಾಗದಿಂದ 275 ವಾಹನಗಳನ್ನು ಸಾಂದರ್ಭಿಕ ಒಪ್ಪಂದದ ಮೇರೆಗೆ ನೀಡಿರುವುದರಿಂದ ಇಂದು ಚಾಮರಾಜನಗರ ಜಿಲ್ಲಾ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್‌ಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾಗಲಿದ್ದು ಸಾರ್ವಜನಿಕರುಸಹಕರಿಸುವಂತೆ ಕೆ.ಎಸ್.ಆರ್.ಟಿಸಿ ಯ ಚಾಮರಾಜನಗರ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

### ಅರ್ಜಿ ಆಹ್ವಾನ

ಚಾಮರಾಜನಗರ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2024-25ನೇ ಸಾಲಿಗೆ ಪರಿಶಿಷ್ಟಜಾತಿ ಉಪಯೋಜನೆಯಡಿ ಯುವಜನರಿಗೆ ನೀಡಲಾಗುವ ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಇಲಾಖೆಯ ಪ್ರಮುಖ ಕಾರ್ಯಕ್ರಮಗಳಾದ ಯುವಜನಮೇಳ ಹಾಗೂ ಯುವಜನೋತ್ಸವ ಕಾರ್ಯಕ್ರಮಗಳಲ್ಲಿ ಪರಿಶಿಷ್ಟಜಾತಿಯ ಯುವಜನರಿಗೆ ಉತ್ತೇಜಿಸುವ ಹಿತದೃಷ್ಟಿಯಿಂದ ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರ ಆಯೋಜಿಸಲಾಗುತ್ತಿದೆ. ಪರಿಶಿಷ್ಟ ಜಾತಿಗೆ ಸೇರಿದ 16 ರಿಂದ 40 ವರ್ಷದೊಳಗಿನ 10ನೇ ತರಗತಿ ಉತ್ತೀರ್ಣ ಅಥವಾ ಅನುತ್ತೀರ್ಣರಾದ ಯುವಜನರಿಗೆ ಡಿಸೆಂಬರ್ 10 ರಿಂದ ಡಿಸೆಂಬರ್ 17 ರವರೆಗೆ 8 ದಿನಗಳ ಕಾಲ ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರ ಆಯೋಜನೆ ಮಾಡಲಾಗಿದ್ದು 50 ಶಿಬಿರಾರ್ಥಿಗಳಿಗೆ ತರಬೇತಿ ನೀಡಲಾಗುತ್ತದೆ. ನಿಗದಿತ ಅರ್ಜಿಯನ್ನು ನಗರದ ಜಿಲ್ಲಾಡಳಿತ ಭವನದ ಮೊದಲನೇ ಮಹಡಿಯಲ್ಲಿರುವ ಕೊಠಡಿ ಸಂ. 118 ರಲ್ಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆದು ಭರ್ತಿ ಮಾಡಿ ಸಂಬಂಧಿಸಿದ ದಾಖಲೆಗಳೊಂದಿಗೆ ಡಿ. 8 ರೊಳಗೆ ಸಲ್ಲಿಸಬೇಕು.

# ಯಾವುದೇ ಕೆಲಸವನ್ನಾಗಲೀ ಪ್ರಾಮಾಣಿಕತೆಯಿಂದ ಮಾಡಿ



**ಶಿಡ್ಲಘಟ್ಟ :** ಯಾವುದೇ ಕೆಲಸವನ್ನಾಗಲೀ ಪ್ರಾಮಾಣಿಕತೆ, ಶ್ರದ್ಧೆಯಿಂದ ಮಾಡಿದಾಗ ವೃತ್ತಿಯಲ್ಲಿ ಪ್ರಗತಿ ಸಾಧಿಸಲು, ಉತ್ತಮ ಸ್ಥಾನಕ್ಕೇರಲು ಸಾಧ್ಯ ಇದಕ್ಕೆ ವಕೀಲಿಕೆ ವೃತ್ತಿಯೂ ಹೊರತಲ್ಲ ಎಂದು ಜೆಎಂಎಫ್‌ಸಿ ನ್ಯಾಯಾಲಯದ ಹಿರಿಯ ಸಿವಿಲ್ ನ್ಯಾಯಾಧೀಶ ಮಹಮ್ಮದ್ ರೋಷನ್ ಷಾ ತಿಳಿಸಿದರು.

ನಗರದ ಜೆಎಂಎಫ್‌ಸಿ ನ್ಯಾಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ವಕೀಲರ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಯಾವುದೇ ಪ್ರಕರಣವನ್ನು ಕೈಗೆತ್ತಿಕೊಂಡಾಗ ಅದರಲ್ಲಿ ಸೋಲು ಅಥವಾ ಗೆಲುವು ಮುಖ್ಯವಲ್ಲ ಪ್ರಕರಣದಲ್ಲಿನ ಸತ್ಯಾಸತ್ಯತೆ ತಿಳಿದು ವಾದ ಮಾಡುವುದು ಮುಖ್ಯ ವಾದದಲ್ಲಿ ಸೋತರೆ ಕಕ್ಷಿದಾರನಿಗೆ ಅರ್ಥ ಮಾಡಿಸುವ ಕೆಲಸ ಮಾಡಿ, ನಿಮ್ಮ ವಕೀಲಿಕೆ, ವಾದದ ಮೇಲೆ ನಂಬಿಕೆಯನ್ನು ಉಳಿಸಿಕೊಳ್ಳುವ ಕೆಲಸವಾಗಬೇಕು ಎಂದು ಹೇಳಿದರು.

ವಕೀಲರು ವೃತ್ತಿಯಲ್ಲಿ ಸಹನೆ, ತಾಳ್ಮೆ ಯಿಂದಿರಬೇಕು ಅದಕ್ಕೂ ಮಿಗಿಲಾಗಿ ಕಕ್ಷಿದಾರರಲ್ಲಿ ನಂಬಿಕೆ ಉಳಿಸಿಕೊಳ್ಳುವುದು ಅತಿಮುಖ್ಯ ಎಂದರು.

ಪ್ರಕರಣದಲ್ಲಿ ಸೋಲಾದರೂ ನಿಮ್ಮ ಕಕ್ಷಿದಾರ ನಿಮ್ಮನ್ನು ದೂಷಿಸಬಾರದು ಅಂತಹ ನಂಬಿಕೆ ಗಳಿಸಿಕೊಳ್ಳುವ ಕೆಲಸ ವಕೀಲರಿಂದ ಆಗಬೇಕಿದೆ ಎಂದು ಅಭಿಪ್ರಾಯಪಟ್ಟರು.

ವಕೀಲರ ದಿನಾಚರಣೆ ಆಚರಿಸುವ ಮೂಲಕ ಹಿರಿಯ ವಕೀಲರು ಕಿರಿಯ ವಕೀಲರಿಗೆ ವೃತ್ತಿ ಬದುಕಿನ ಅನುಭವವನ್ನು ಹಂಚಿಕೊಳ್ಳಬೇಕು,ಸಲಹೆ ಸೂಚನೆಗಳನ್ನು ತಿಳಿಸಿ ವೃತ್ತಿಯಲ್ಲಿ ನೈಪುಣ್ಯತೆ ಸಾಧಿಸಲು ನೆರವಾಗಬೇಕು ಎಂದು ಸಲಹೆ ನೀಡಿದರು.

ವಕೀಲರ ಸಂಘದ ಅಧ್ಯಕ್ಷ ಎ.ನಾರಾಯಣಸ್ವಾಮಿ ಮಾತನಾಡಿ,ವಕೀಲರ ವೃತ್ತಿಯನ್ನು ಆರಾಧಿಸಿದ ಡಾಕ್ಟರ್ ರಾಜೇಂದ್ರ ಪ್ರಸಾದ್ ಅವರು ಉನ್ನತ ಸ್ಥಾನವನ್ನು ಅಲಂಕರಿಸಿದ್ದರು ಹೀಗಾಗಿ ವಕೀಲರು ವೃತ್ತಿಯಲ್ಲಿ ನೈಪುಣ್ಯತೆಯನ್ನು ಹೆಚ್ಚಿಸಿಕೊಳ್ಳಬೇಕು

ಕಕ್ಷಿದಾರರ ವಿಶ್ವಾಸವನ್ನು ಉಳಿಸಿಕೊಂಡು ಧ್ವನಿ ಇಲ್ಲದವರಿಗೆ ಧ್ವನಿಯಾಗಿ ಕಾರ್ಯನಿರ್ವಹಿಸಬೇಕು ಹಾಗು ವೃತ್ತಿಯಲ್ಲಿ ಉನ್ನತಿ ಸಾಧಿಸಿ ಸಮಾಜದಲ್ಲಿ ಉತ್ತಮ ಹೆಸರುಗಳಿಸಬೇಕು ಎಂದರು.

ಜೆಎಂಎಫ್ ಸಿ ನ್ಯಾಯಾಲಯದ ಪ್ರಧಾನ ಸಿವಿಲ್ ನ್ಯಾಯಾಧೀಶೆ ಜೆ.ಪೂಜಾ ಮಾತನಾಡಿದರು. ಈ ಸಂದರ್ಭದಲ್ಲಿ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಜಿ.ಭಾಸ್ಕರ್, ವಕೀಲರು ಹಾಗು ನ್ಯಾಯಾಲಯದ ಸಿಬ್ಬಂದಿ ಹಾಜರಿದ್ದರು.

# ಸದಸ್ಯತ್ವ ಸ್ಥಾನಕ್ಕೆ ಸ್ಪರ್ಧೆ; ಅರ್ಜಿ ತಿರಸ್ಕಾರ



**ಮಾಲೂರು :** ಪಟ್ಟಣದ ಪುರಸಭೆಯ 27ನೇ ವಾರ್ಡಿನ ಸದಸ್ಯ 2019ರಲ್ಲಿ ಪುರಸಭಾ ಚುನಾವಣೆಯಲ್ಲಿ ಸದಸ್ಯತ್ವ ಸ್ಥಾನಕ್ಕೆ ಸ್ಪರ್ಧಿಸಲು ಕರ್ನಾಟಕ ಪುರಸಭಾ ಕಾಯ್ದೆ ಪ್ರಕಾರ 21 ವರ್ಷ ಪೂರ್ಣಗೊಳ್ಳದ ಕಾರಣ ಅವರ ಸದಸ್ಯತ್ವವನ್ನು ಪಟ್ಟಣದ ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶ ಹೆಚ್.ಜೆ.ಶಿಲ್ಪ ಅವರು ಅನುರ್ಜಿತಗೊಳಿಸಿ ಆದೇಶಿಸಿದ್ದಾರೆ.

ಪಟ್ಟಣದ ಪುರಸಭೆಯ 27 ಸದಸ್ಯತ್ವ ಸ್ಥಾನಗಳಿಗೆ 2019 ರಲ್ಲಿ ನಡೆದ ಚುನಾವಣೆಯಲ್ಲಿ 27ನೇ ವಾರ್ಡಿನ ಪಿ ಸುಮಿತ್ರ ಸ್ಪರ್ಧಿಸಿ ಗೆಲುವು ಸಾಧಿಸಿದ್ದರು ಅವರ ಪ್ರತಿ ಸ್ಪರ್ಧಿ ಗಾಯತ್ರಿ ಅವರು ಪುರಸಭೆಯಲ್ಲಿ ಸ್ಪರ್ಧಿಸಲು ಸುಮಿತ್ರ ರವರಿಗೆ ಕರ್ನಾಟಕ ಪುರಸಭೆ ಕಾಯ್ದೆ ಪ್ರಕಾರ ಚುನಾವಣೆಯಲ್ಲಿ ಸ್ಪರ್ಧಿಸಲು 21 ವರ್ಷಗಳು ಪೂರ್ಣಗೊಂಡಿಲ್ಲ ಅವರ ಸದಸ್ಯತ್ವವನ್ನು ಅನುರ್ಜಿತಗೊಳಿಸುವಂತೆ ಪಟ್ಟಣದ ಜೆಎಂಎಫ್ ಸಿ ನ್ಯಾಯಾಲಯದಲ್ಲಿ ದಾವೆ ಹೂಡಿದರು, ಐದು ವರ್ಷ ಆ ನಾಲ್ಕು ತಿಂಗಳು ದಾವೇ ನಡೆದು ಕೊನೆಗೆ ಪಟ್ಟಣದ ಜೆ.ಎಂ. ಎಫ್.ಸಿ ನ್ಯಾಯಾಲಯದ ನ್ಯಾಯಾಧೀಶರಾದ ಹೆಚ್.ಶಿಲ್ಪಾ ಅವರು ಅಂದಿನ ಪುರಸಭೆ ಸದಸ್ಯ ಸ್ಥಾನಕ್ಕೆ ಚುನಾವಣೆಯಲ್ಲಿ ಸ್ಪರ್ಧಿಸುವಾಗ 19 ವರ್ಷಗಳು ಮಾತ್ರ ಆಗಿದ್ದು ಕರ್ನಾಟಕ ಪುರಸಭೆ ಕಾಯ್ದೆ ಪ್ರಕಾರ ಚುನಾವಣೆಯಲ್ಲಿ ಸ್ಪರ್ಧಿಸಲು 21 ವರ್ಷಗಳು ಪೂರ್ಣಗೊಳ್ಳಬೇಕಾಗಿರುವುದರಿಂದ ಸುಮಿತ್ರ ಅವರ ಸದಸ್ಯತ್ವವನ್ನು ಅನುರ್ಜಿತಗೊಳಿಸಿ ಆದೇಶಿಸಿದ್ದಾರೆ. ಗಾಯಿತ್ರಿ ಪರವಾಗಿ ವಕೀಲ ವೈಎಸ್ ಹರೀಶ್ ವಾದ ಮಂಡಿಸಿದರೆ ಸುಮಿತ್ರ ಪರವಾಗಿ ವಕೀಲ

# 15 ಠಾಣೆಗಳಲ್ಲಿ ಪ್ರಕರಣ; ಆರೋಪಿ ಬಂಧನ

**ಕೊರಟಗೆರೆ:** ಸಿಎಂ, ಡಿಸಿಎಂ, ಗೃಹಸಚಿವ, ಸಣ್ಣನೀರಾವರಿ ಸಚಿವ, ವಸತಿ ಸಚಿವ, ಇಂಧನ ಸಚಿವ ಸೇರಿ 15ಕ್ಕೂ ಅಧಿಕ ಸಚಿವರ ವಿರುದ್ದ ಅವಾಚ್ಯ ಶಬ್ದದಿಂದ ನಿಂದನೆ ಮತ್ತು ವೈಯಕ್ತಿಕ ತೇಜೋವದೆಯ ವಿಡೀಯೊ ಮಾಡಿ ಪೇಸ್‌ಬುಕ್, ಇನ್ಸ್‌ಸ್ಟಾಗ್ರಾಂ ಮತ್ತು ಎಕ್ಸ್‌ನ ಖಾತೆಗಳಲ್ಲಿ ಹರಿಬಿಟ್ಟು ಉತ್ತರಕಾಂಡ ರಾಜ್ಯದ ಹಳ್ಳಿಯಲ್ಲಿ ತಲೆಮರೆಸಿಕೊಂಡಿದ್ದ ಭಜರಂಗ ದಳದ ಕಾರ್ಯಕರ್ತನನ್ನು ಕೊರಟಗೆರೆ ಪಿಎಸ್ಐ ಚೇತನಗೌಡ ನೇತೃತ್ವದ ತಂಡ ಇತ್ತೀಚಿಗೆ ಬಂಧಿಸಿರುವ ಘಟನೆ ನಡೆದಿದೆ.

ಕರ್ನಾಟಕ ಸಿಎಂ ಸಿದ್ದರಾಮಯ್ಯ, ಡಿಸಿಎಂ ಶಿವಕುಮಾರ್, ಗೃಹಸಚಿವ ಡಾ.ಜಿ.ಪರಮೇಶ್ವರ, ವಸತಿ ಸಚಿವ ಜಮೀರ್‌ಅಹಮ್ಮದ್, ಇಂಧನ ಸಚಿವ ಕೆ.ಜೆ.ಜಾರ್ಜ್ ಸೇರಿ ಹಲವರ ವಿರುದ್ದ ಬಿಜೆಪಿ ಕಾರ್ಯಕರ್ತ 1ರಿಂದ 2ನಿಮಿಷದ ವಿಡೀಯೊ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿದುಬಿಟ್ಟು ಸರಕಾರದ ಘನತೆಗೆ ದಕ್ಕೆ ತಂದಿರುವ ಬಗ್ಗೆ ಬ್ಲಾಕ್‌ಕಾಂಗ್ರೆಸ್ ಅಧ್ಯಕ್ಷ ದೂರಿನ ಅನ್ವಯ ಕೊರಟಗೆರೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ತುಮಕೂರು ಜಿಲ್ಲೆಯ ವಿಶ್ವಹಿಂದುಪರಿಷತ್ ಮತ್ತು ಭಜರಂಗದಳದ ಕಾರ್ಯಕರ್ತನಾಗಿ ಕೆಲಸ ಮಾಡಿರುವ ಮೋಹಿತ್ ನರಸಿಂಹಮೂರ್ತಿ ಪ್ರಸ್ತುತ ಉತ್ತರಕಾಂಡದ ಉಕ್ಕಿಮಠದಲ್ಲಿ ಬಿಜೆಪಿ ಸಂಘಟಕನಾಗಿ ಕೆಲಸ ಮಾಡುತ್ತ ಜೀವನಕ್ಕಾಗಿ ಟೀಅಂಗಡಿ ಇಟ್ಟುಕೊಂಡಿದ್ದ ಎನ್ನಲಾಗಿದೆ.ರಾಜ್ಯಸರಕಾರ ಮತ್ತು ಸಚಿವರ ವಿರುದ್ದ ಮನಸ್ಸಿಗೆ ಬಂದಂತೆ ಮಾತನಾಡಿದ್ದ ಪರಿಣಾಮ ಕಾಂಗ್ರೆಸ್ ಕಾರ್ಯಕರ್ತರಿಂದ ರಾಜ್ಯದ ಹಲವು ಜಿಲ್ಲೆಗಳಲ್ಲಿ ಮೋಹಿತ್ ನರಸಿಂಹಮೂರ್ತಿ ವಿರುದ್ದ ಪ್ರಕರಣ ದಾಖಲಿಸಿದ್ದಾರೆ.

ಚಿಕ್ಕಬಳ್ಳಾಪುರ ಲೋಕಾಸಭೆಗೆ ಸ್ಪರ್ಧೆ.. ದಾಬಸ್‌ಪೇಟೆ ತಾಲೂಕು ನಲ್ಲೂರಿನ ಲೇ.ನರಸಿಂಹಮೂರ್ತಿಯ ಮಗನಾದ ಆರೋಪಿ ಮೋಹಿತ್ ನರಸಿಂಹಮೂರ್ತಿ 2024-25ನೇ ಸಾಲಿನಲ್ಲಿ ನಡೆದ ಲೋಕಸಭೆ ಚುನಾವಣೆಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದಿಂದ ಕೊಳಲು ಚಿಹ್ನೆಯಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಠೇವಣಿ ಕಳೆದುಕೊಂಡಿದ್ದಾನೆ. ಪ್ರಸ್ತುತವು ಸಹ ಉತ್ತರಕಾಂಡದಲ್ಲಿ ಖಾಸಗಿ ಪಕ್ಷವೊಂದರ ಸಂಘಟಕನಾಗಿ ಗುರ್ತಿಸಿಕೊಂಡು ಪ್ರಚಾರದಲ್ಲಿನಿರತನಾಗಿದ್ದ ಎಂದು ತಿಳಿದುಬಂದಿದೆ.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಕೊರಟಗೆರೆ, ಮೈಸೂರು, ಕಲಬುರ್ಗಿ, ಶಿವಮೊಗ್ಗ, ಬೆಳಗಾವಿ, ಕೊಪ್ಪಳ, ರಾಯಚೂರು ಜಿಲ್ಲೆಗಳಲ್ಲಿ ಆರೋಪಿ ಮೋಹಿತ್ ನರಸಿಂಹಮೂರ್ತಿ ಮೇಲೆ ಭಾರತೀಯ ನಾಗರೀಕ ಸುರಕ್ಷಾ ಕಾಯ್ದೆಯಡಿ ಒಟ್ಟು 10 ಜಿಲ್ಲೆಗಳಲ್ಲಿ 15ಪ್ರಕರಣ ದಾಖಲು..

**ಸಿಎಂ, ಡಿಸಿಎಂ, ಗೃಹಸಚಿವರು ಸೇರಿ 15ಕ್ಕೂ ಅಧಿಕ ಸಚಿವರ ಬಗ್ಗೆ ಮೋಹೀತ್ ನರಸಿಂಹಮುರ್ತಿ ಎಂಬಾತ ವೈಯಕ್ತಿಕ ತೇಜೋವದೆಯ ವಿಡೀಯೊ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟು ಉತ್ತರಕಾಂಡಕ್ಕೆ ಪರಾರಿ ಆಗಿದ್ದಾನೆ. ಸರಕಾರದ ಘನತೆಗೆ ದಕ್ಕೆ ಮತ್ತು ಅವಾಚ್ಯ ಶಬ್ದ ಬಳಕೆ ಮಾಡಿದ್ದ ತಪ್ಪು. ನಾನು ದೂರು ನೀಡಿದ ತಕ್ಷಣವೇ ಕೊರಟಗೆರೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ಬಂಧಿಸಿದ್ದಾರೆ.**

**-ಅರಕೆರೆಶಂಕರ್.**
**ಬ್ಲಾಕ್‌ಕಾಂಗ್ರೇಸ್ ಅಧ್ಯಕ್ಷ. ಕೊರಟಗೆರೆ**

# ಹೊಳವನಹಳ್ಳಿ ಗ್ರಾಪಂ ನೂತನ ಅಧ್ಯಕ್ಷೆಯಾಗಿ ಸುಮಿತ್ರಾ ಆಯ್ಕೆ



ಕೊರಟಗೆರೆ; ತಾಲೂಕಿನ ಹೊಳವನಹಳ್ಳಿ ಗ್ರಾಪಂಯ ಅಧ್ಯಕ್ಷರ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಆಭ್ಯರ್ಥಿ ಸುಮಿತ್ರಾ ಉಮೇಶ್‌ಅವರು ನೂತನ ಅಧ್ಯಕ್ಷೆಯಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ, ತಹಸೀಲ್ದಾರ್ ಮಂಜುನಾಥ ಘೋಷಣೆ ಮಾಡಿದರು.

ಹೊಳವನಹಳ್ಳಿ ಗ್ರಾಪಂಯಲ್ಲಿಒಟ್ಟು 19 ಜನರ ಸದಸ್ಯರ ಸಂಖ್ಯಾಬಲ ಹೊಂದಿದ್ದು, ಈ ಹಿಂದೆಅಧ್ಯಕ್ಷರಾಗಿದ್ದಗುಲ್ಜಾರ್ ಬಾನು ಅವರರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆದಿದ್ದು, ಮರುಡಪ್ಪ ಹಾಗೂ ಸುಮಿತ್ರಾಅವರುಆಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದು, ಮರುಡಪ್ಪ 6 ಮತಗಳನ್ನು ಪಡೆದರೆ, 13 ಮತಗಳನ್ನು ಸುಮಿತ್ರಾಉಮೇಶ್ ಪಡೆದುಅಧ್ಯಕ್ಷರಚುನಾವಣೆಯಲ್ಲಿ ಜಯಗಳಿಸಿದ್ದಾರೆ.

ನೂತನಅಧ್ಯಕ್ಷೆ ಸುಮಿತ್ರಾಉಮೇಶ್ ಮಾತನಾಡಿ ನಮ್ಮಗ್ರಾಪಂ ವ್ಯಾಪ್ತಿಗೆ ಬರುವಎಲ್ಲಾ ಗ್ರಾಮಗಳ ಅಭಿವೃದ್ಧಿಗಾಗಿ ಸರ್ವ ಸದಸ್ಯರಜೊತೆಗೂಡಿ ಶ್ರಮಿಸುತ್ತೇವೆ.

ಡಾ ಜಿ ಪರಮೇಶ್ವರ್‌ಆಶೀರ್ವಾದ ಹಾಗೂ ಸರ್ವ ಸದಸ್ಯರ ಸಹಕಾರದಿಂದಗ್ರಾಪಂಅಧ್ಯಕ್ಷೆಯಾಗಿಆಯ್ಕೆ ಮಾಡಲಾಗಿದ್ದು, ಇದೆರೀತಿಎಲ್ಲರ ಸಹಕಾರ ಪಡೆದುಗ್ರಾಮದಅಭಿವೃದ್ಧಿಯತ್ತ ಗಮನ ಹರಿಸುತ್ತೇನೆಎಂದರು.

ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆಶ್ವಥ್ ನಾರಾಯಣ ಮಾತನಾಡಿಗೃಹ ಸಚಿವ ಹಾಗೂ ಜಿಲ್ಲಾಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್‌ಅವರ ಮಾರ್ಗದರ್ಶನದಂತೆ ಹೊಳವನಹಳ್ಳಿ ಗ್ರಾಪಂಅಧ್ಯಕ್ಷರಚುನಾವಣೆಯಲ್ಲಿ ನಮ್ಮ ಪಕ್ಷದಕಾರ್ಯಕರ್ತರಾದ ಉಮೇಶ್‌ಅವರ ಪತ್ನಿ ಸುಮಿತ್ರಾಅವರುಜಯಗಳಿಸಿದ್ದು, ಗ್ರಾಪಂಎಲ್ಲಾ ಸದಸ್ಯರ ಸಹಕಾರದಿಂದಆಯ್ಕೆಯಾಗಿದ್ದಾರೆ. ಹೊಳವನಹಳ್ಳಿ ಹೋಬಳಿ ಕಾಂಗ್ರೆಸ್ ಭದ್ರಕೋಟೆಯಾಗಿದೆ, ಅದರಿಂದಅತಿಹೆಚ್ಚು ಗ್ರಾಪಂಗಳಲ್ಲಿ ಕಾಂಗ್ರೆಸ್ ಪಕ್ಷದಕಾರ್ಯಕರ್ತರುಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ.ಗ್ರಾಪಂಯಅಭಿವೃದ್ಧಿಗಾಗಿಗೃಹಸಚಿವರ ಸಹಕಾರ ಪಡೆದುಗ್ರಾಮವನ್ನಅಭಿವೃದ್ಧಿ ಪಡಿಸಲಾಗುವುದುಎಂದು ತಿಳಿಸಿದರು.

ಮಾಜಿಅಧ್ಯಕ್ಷೆಕವಿತಾನರಸಪ್ಪ ಮಾತನಾಡಿಹೊಳವನಹಳ್ಳಿ ಗ್ರಾಪಂ ಸುಮಾರು ವರ್ಷಗಳಿಂದ ಕಾಂಗ್ರೆಸ್ ಪಕ್ಷದ ಭದ್ರಕೋಟೆಯಾಗಿದ್ದು, ಪ್ರತಿ ಬಾರಿಯೂಕಾಂಗ್ರೆಸ್ ಪಕ್ಷದಕಾರ್ಯಕರ್ತರು ಹೆಚ್ಚು ಜನ ಸದಸ್ಯರಾಗಿಆಯ್ಕೆಯಾಗಿಅಧ್ಯಕ್ಷರಾಗಿದ್ದಾರೆ.ಗೃಹಸಚಿವ ಡಾ.ಜಿ.ಪರಮೇಶ್ವರ್‌ಅವರ ಆಶಿರ್ವಾದದಿಂದ ಸುಮಿತ್ರಾಉಮೇಶ್‌ಅವರುಅಧ್ಯಕ್ಷರಾಗಿ ಹೆಚ್ಚು ಮತ ಪಡೆದುಅಧ್ಯಕ್ಷೆಯಾಗಿದ್ದಾರೆಎಂದು ಹೇಳಿದರು.

ಇದೆ ಸಂದರ್ಭದಲ್ಲಿಗ್ರಾಪಂಪಿಡಿಓ ವಸಂತಕುಮಾರ್, ಉಪಾಧ್ಯಕ್ಷರಾಮು ಸದಸ್ಯರಾದಗುಲ್ಜಾರ್ ಬಾನು, ಮರುಡಪ್ಪ, ಶಹೇದಾ ಬಾನು, ಕುಂಬಿನರಸಿಂಹಯ್ಯ, ಭಾಗ್ಯಮ್ಮ, ರವಿಕುಮಾರ್, ಭಾಗ್ಯಲಕ್ಷ್ಮಿ, ಅಬ್ದುಲ್ ಸುಬಾನ್, ನಾಗರತ್ನಮ್ಮ, ಭಾಗ್ಯಮ್ಮ, ದೇವರಾಜು, ಮಾಲಾಶ್ರೀ, ಶಬ್ನಮ್‌ಜಹೇರಾ, ಆಲಿ ಅಹಮದ್, ಅಬ್ದುಲ್‌ಪಾಷ, ಮುಖಂಡರಾದಈಶ್ವರಪ್ಪ, ಎಲ್.ರಾಜಣ್ಣ, ನರಸಿಂಹಮೂರ್ತಿ, ಜಯರಾಮ್, ಕವಿತಮ್ಮ, ನಾಸೀರ್, ರಂಗನಾಥ್, ಷರೀಪ್,ಜಯರಾಜ್, ರಾಮಕೃಷ್ಣಯ್ಯ, ರಂಗಶಾಮಯ್ಯ, ಅಭಿಲಾಷ್, ಕುಮಾರ್, ರಾಮಾಂಜಿನಯ್ಯ ಸೇರಿದಂತೆಇತರರುಇದ್ದರು.

# ಏಡ್ಸ್ ವಿರುದ್ಧ ಹೆಚ್ಚು ಅರಿವು ಅಗತ್ಯ: ನ್ಯಾ. ಬಿ.ಎಸ್.ಭಾರತಿ




**ಚಾಮರಾಜನಗರ:** ಅರಿವಿನ ಕೊರತೆಯಿಂದ ಏಡ್ಸ್ ಸೋಂಕು ಹೆಚ್ಚಾಗುತ್ತಿದೆ. ಸೋಂಕಿತರನ್ನು ಸಮಾಜದಲ್ಲಿ ತಾರತಮ್ಯದಿಂದ ನೋಡಲಾಗುತ್ತಿದ್ದು ಅವರನ್ನು ಇತರರಂತೆ ಸಹಜವಾಗಿ ಕಾಣಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್ ಭಾರತಿ ಅವರು ತಿಳಿಸಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚೈತನ್ಯ ನೆಟ್‌ವರ್ಕ್ ಇನ್ನಿತರ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಏಡ್ಸ್ ದಿನದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರ ಮಾತನಾಡಿದರು.

ಜ್ಞಾನದ ಕೊರತೆಯಿಂದ ಏಡ್ಸ್ ಸೋಂಕು ಹೆಚ್ಚಾಗುತ್ತಿದೆ. ಇದೊಂದು ಮಾರಕ ಕಾಯಿಲೆಯಾಗಿದ್ದು ಲೈಂಗಿಕ ಆಕರ್ಷಣೆಗೆ ಒಳಗಾಗದೆ ಉತ್ತಮ ಜೀವನ ರೂಪಿಸಿಕೊಳ್ಳಬೇಕು. ಕೆಲ ಸಂದರ್ಭದಲ್ಲಿ ಅರಿವಿಲ್ಲದೆ ಸೋಂಕು ಹರಡುತ್ತದೆ. ಇದರಿಂದ ಬಹಳ ಜಾಗರೂಕರಾಗಿರಬೇಕು. ಹೆಚ್.ಐ.ವಿ ಬಗ್ಗೆ ಯುವ ಸಮೂಹದಲ್ಲಿ ಜಾಗೃತಿ ಮೂಡಿಸುವುದು ಬಹಳ ಮುಖ್ಯ. ಈ ರೀತಿಯ ಅರಿವು ಕಾರ್ಯಕ್ರಮಗಳು ಇನ್ನಷ್ಟು ಆಗಬೇಕಿದೆ ಎಂದು ಜಿಲ್ಲಾ ನ್ಯಾಯಾಧೀಶರಾದ ಬಿ.ಎಸ್ ಭಾರತಿ ಅವರು ತಿಳಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಪಿ.ಎಸ್ ಗುರುಪ್ರಸಾದ್ ಅವರು ಮಾತನಾಡಿ ಹೆಚ್.ಐ.ವಿ ಸೋಂಕು ಬಗ್ಗೆ ಮುಕ್ತವಾಗಿ ಮಾತನಾಡಲು ಹಿಂಜರಿಕೆ ಇದೆ. ಇದರಿಂದ ಅರಿವು ಮೂಡಿಸಲು ಸಾಧ್ಯವಾಗುತ್ತಿಲ್ಲ. ಏಡ್ಸ್ ಬಗ್ಗೆ ಮಾತನಾಡುವುದಕ್ಕೆ ನಾಚಿಕೆ ಪಡದೆ ತಿಳಿವಳಿಕೆ ನೀಡಬೇಕು. ನಾಟಕ ಇನ್ನಿತರ ಕಾರ್ಯಕ್ರಮಗಳ ಮೂಲಕ ಸೋಂಕು ಹರಡುವುದರಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ಸಮತಾ ಸೊಸೈಟಿಯ ದೀಪ ಬುದ್ದೆ ಅವರು ಮಾತನಾಡಿ ನಮ್ಮ ಸಂಸ್ಥೆಯಿಂದ ಹೆಚ್.ಐ.ವಿ ವಿರುದ್ದ ನಿರಂತರವಾಗಿ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ. ಒಬ್ಬರಿಂದ ಮತ್ತೊಬ್ಬರಿಗೆ ರಕ್ತ ನೀಡುವಾಗ ಸೂಜಿ, ಸಿರಂಜುಗಳನ್ನು ಬಳಸುವಾಗ ಜಾಗರೂಕರಾಗಿರಬೇಕು. ಜಾಗೃತಿಯಿಂದಲೇ ಹೆಚ್.ಐ.ವಿ ತಡೆಗಟ್ಟಬಹುದು. ಈ ನಿಟ್ಟಿನಲ್ಲಿ ಎಲ್ಲರ ಜವಾಬ್ದಾರಿ ಇದೆ ಎಂದು ತಿಳಿಸಿದರು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಹಾಗೂ ಜಿಲ್ಲಾ ಕ್ಷಯ ರೋಗ ನಿರ್ಮೂಲನಾಧಿಕಾರಿ ಡಾ.ಎಂ.ಎಸ್ ರವಿಕುಮಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ದೊರೆಸ್ವಾಮಿ ನಾಯಕ್, ಪ್ರೊ. ಶಿವಸ್ವಾಮಿ, ಚೈತನ್ಯ ನೆಟ್‌ವರ್ಕ್ ಸಂಸ್ಥೆಯ ಭಾಗ್ಯಮ್ಮ, ಸ್ನೇಹ ಜ್ಯೋತಿ ಸಂಸ್ಥೆಯ ಚಂದ್ರಶೇಖರ ಪಾಟೀಲ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಜಿಲ್ಲಾಡಳಿತ ಭವನದ ಮುಂಭಾಗ ಏಡ್ಸ್ ಜಾಗೃತಿ ಜಾಥಾಗೆ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳಾದ ಈಶ್ವರ, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹೀರೆಲಾಲ್, ಇನ್ನಿತರ ಗಣ್ಯರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳಾದ ಈಶ್ವರ ಅವರು ಮಾತನಾಡಿ ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಏಡ್ಸ್ ಹರಡುತ್ತದೆ. ಈ ರೋಗದ ಬಗ್ಗೆ ಹೆಚ್ಚು ಎಚ್ಚರಿಕೆ ವಹಿಸಬೇಕು. ಆರೋಗ್ಯಕರ ಜೀವನಕ್ಕಾಗಿ ಪ್ರತಿಯೊಬ್ಬರು ವಿಶೇಷವಾಗಿ ಜಾಗೃತರಾಗಬೇಕು ಎಂದು ಸಲಹೆ ಮಾಡಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳಾದ ಶ್ರೀಪತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಹಾಗೂ ಜಿಲ್ಲಾ ಕ್ಷಯ ರೋಗ ನಿರ್ಮೂಲನಾಧಿಕಾರಿ ಡಾ.ಎಂ.ಎಸ್ ರವಿಕುಮಾರ್, ಇನ್ನಿತರ ಅದಿಕಾರಿಗಳು ಇದ್ದರು.

ಜಾಥಾ ಬಳಿಕ ಜಿಲ್ಲಾಡಳಿತ ಭವನದ ಮುಖ್ಯದ್ವಾರದ ಬಳಿ ಕಲಾವಿದರಾದ ಶಾಂತರಾಜು ನೇತೃತ್ವದ ರಂಗದೇಗುಲ ಕಲಾ ತಂಡದವರಿಂದ ಏಡ್ಸ್ ವಿರುದ್ದ ಜಾಗೃತಿ ಬೀದಿನಾಟಕ ಪ್ರದರ್ಶನ ನಡೆಯಿತು.

# ಅಧ್ಯಕ್ಷ ಸ್ಥಾನಕ್ಕಾಗಿ ಮರುಮತದಾನ; 400 ಮತ ಚಲಾವಣೆ

ಚಿಕ್ಕಬಳ್ಳಾಪುರ: ನವಂಬರ್ 28 ರಂದು ಜಿಲ್ಲಾ ಕೇಂದ್ರದ ವಕೀಲರ ಸಂಘದ 2024-2006ನೇ ಸಾಲಿನ ನೂತನ ಆಡಳಿತ ಮಂಡಳಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನದ ಫಲಿತಾಂಶ ಘೋಷಣೆ ಹೊರತುಪಡಿಸಿ ಉಳಿದೆಲ್ಲಾ ಪದಾಧಿಕಾರಿಗಳ ಫಲಿತಾಂಶ ಘೋಷಣೆ ಮಾಡಲಾಗಿತ್ತು. ಗೊಂದಲಕ್ಕೆ ಕಾರಣವಾಗಿದ್ದಅಧ್ಯಕ್ಷ ಸ್ಥಾನಕ್ಕೆ ಮಾತ್ರ ಡಿ.3ಕ್ಕೆ ಮರು ಮತದಾನ ನಡೆಸುವುದಾಗಿ ಚುನಾವಣಾಧಿಕಾರಿ ಪಿ.ಸುಬ್ರಹ್ಮಣ್ಯ ಘೋಷಿಸಿದ್ದರು.

ಅದರಂತೆ ನಗರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ವಕೀಲರ ಸಂಘದಲ್ಲಿ ನಡೆದ ಅಧ್ಯಕ್ಷ ಸ್ಥಾನದ ಮರುಮತದಾನ ಮಂಗಳವಾರ ಬೆಳಿಗ್ಗೆ 10-30ರಿಂದ2-30ರವರೆಗೆ ಶಾಂತಿಯುತವಾಗಿ ನಡೆಯಿತು.

ನಂತರ ಅಭ್ಯರ್ಥಿಗಳ ಸಮ್ಮುಖದಲ್ಲಿ ಮತ ಎಣಿಕೆ ನಡೆದರೂ ಫಲಿತಾಂಶ ಘೋಷಣೆ ಮಾತ್ರ ಮಾಡದೆ ಎಲ್ಲವನ್ನೂ ಸೀಲ್ ಮಾಡಿ ಹೈಕೋರ್ಟೆ ರವಾನಿಸಲಾಗಿದೆ.ಜಿಲ್ಲಾ ಕೇಂದ್ರದಲ್ಲಿ ಅರ್ಹಮತದಾರರು 420 ಮಂದಿ ಇದ್ದರೂ 400 ಮಂದಿ ಮಾತ್ರಮತಚಲಾಯಿಸಿದ್ದಾರೆ ಎಂದು ಚುನಾವಣಾಧಿಕಾರಿ ಪಿ.ಸುಬ್ರಹ್ಮಣ್ಯ ತಿಳಿಸಿದ್ದಾರೆ.

ಈ ಬಗ್ಗೆ ಮಾಧ್ಯಮದೊಂದಿಗೆ ಮಾತನಾಡಿದ ಚುನಾವಣಾಧಿಕಾರಿ ಪಿ.ಸುಬ್ರಹ್ಮಣ್ಯ ಅವರು ನ.28ರಂದುನಡೆದಿದ್ದ ವಕೀಲರ ಸಂಘದಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನದ ಫಲಿತಾಂಶ ಘೋಷಣೆಯಲ್ಲಿ 2 ಮತಪತ್ರಗಳ ನಾಪತ್ತೆ ಪ್ರಕರಣ ಭಾರಿ ಗೊಂದಲ ಉಂಟು ಮಾಡಿತ್ತು. ಇದೇ ಕಾರಣಕ್ಕೆ ಮರುಚುನಾವಣೆ ಮಾಡಲು ಕ್ರಮವಹಿಸಲಾಗಿತ್ತು. ಈ ನಡುವೆ ಅಧ್ಯಕ್ಷ ಸ್ಥಾನದ ಅಭ್ಯರ್ಥಿಗಳು ಹೈಕೋರ್ಟಿಗೆ

ಹೋಗಿರುವ ಕಾರಣ ಅದರ ನಿರ್ದೇಶನದಂತೆ ಕೆಮೆರಾ ಕಣ್ಣಾವಲಿನಲ್ಲಿ ಗುಪ್ತವಾಗಿ ಮತಗಳಎಣಿಕೆ ಮಾಡಿ,ಎಲ್ಲಾ ಮತಪತ್ರಗಳನ್ನು

ಮುಚ್ಚಿದ ಲಕೋಟೆಯಲ್ಲಿಟ್ಟು ಸೀಲ್ ಮಾಡಿ ಹೈಕೋರ್ಟಿಗೆ ರವಾನಿಸಲಾಗಿದೆ.ಚುನಾವಣೆಯ ಎಲ್ಲಾ ಪ್ರಕ್ರಿಯೆ ಮುಗಿದಿದ್ದರೂ ಫಲಿತಾಂಶ ಘೋಷಣೆ ಮಾತ್ರಹೈಕೋರ್ಟ್‌ನಲ್ಲಿ ಆಗುತ್ತದೆ. ನನ್ನ ಜತೆ ಈ ಚುನಾವಣೆ ಪ್ರಕ್ರಿಯೆಯಲ್ಲಿ ತಾಲೂಕು ಕಚೇರಿಯ ಇಬ್ಬರುಸಿಬ್ಬಂದಿ ಭಾಗಿಯಾಗಿ ಎಲ್ಲವನ್ನೂ ಪಾರದರ್ಶಕವಾಗಿ ನಡೆಯುವಂತೆ ನೋಡಿಕೊಳ್ಳಲಾಗಿದೆ ಎಂದರು.



ಈ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿರುವ ಅಧ್ಯಕ್ಷ ಸ್ಥಾನದ ಅಭ್ಯರ್ಥಿ ಅಭಿಲಾಷ್ ಮಾತನಾಡಿ,ಮರುಮತದಾನ ನಡೆಯಲು ಮತಪತ್ರಗಳ ನಾಪತ್ತೆಯೇ ಮೂಲ ಕಾರಣವಾಗಿತ್ತು.

ಈ ಸಂಬಂಧ ಮಂಗಳವಾರ ನಡೆದ ಮರುಚುನಾವಣೆ ಪಾರದರ್ಶಕವಾಗಿ ನಡೆದಿದೆ. ನಮ್ಮ ಸಮ್ಮುಖದಲ್ಲಿಯೇ ಎಲ್ಲವನ್ನೂ ಸೀಲ್ ಮಾಡಿಹೈಕೋರ್ಟಿಗೆ ರವಾನಿಸಲಾಗಿದೆ.ಡಿ.5ರಂದು ಹೈಕೋರ್ಟ್‌ನಲ್ಲಿ ಘೋಷಣೆ ಮಾಡುವ ತೀರ್ಪು ನನ್ನ

ಪರವಾಗಿ ಬರುವ ವಿಶ್ವಾಸವಿದೆ. ನನ್ನ ಪರವಾಗಿ ನಿಂತ ಎಲ್ಲಾ ಹಿರಿಯ ಕಿರಿಯ ವಕೀಲರಿಗೆ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಇಲ್ಲಿ ಫಲಿತಾಂಶ ಏನೇ ಬಂದರೂಅದನ್ನು ವಿನಮ್ರವಾಗಿ ಸ್ವೀಕರಿಸಿ ವಕೀಲರ ಸಂಘದ ಅಭಿವೃದ್ಧಿಗೆ ಸದಾ ಶ್ರಮಿಸುವೆ ಎಂದರು.

ಒಟ್ಟಾರೆ ತೀವ್ರ ಕುತೂಹಲಕ್ಕೆ ಕಾರಣವಾಗಿದ್ದ ವಕೀಲರ ಸಂಘದ ಅಧ್ಯಕ್ಷ ಸ್ಥಾನದ ಮರು ಚುನಾವಣೆ ಯಾವುದೇ ಗೊಂದಲಗಳಿಗೆ ಆಸ್ಪದ ನೀಡದಂತೆ ಶಾಂತಿಯುತವಾಗಿ ನಡೆದಿದ್ದು ಅಧಿಕೃತ ಫಲಿತಾಂಶ ಘೋಷಣೆ ಮಾತ್ರ ಬಾಕಿಯಿದ್ದು ಕಾಯಲೇ ಬೇಕಿದೆ.

## ಸುದ್ದಿ ಸಂಜೆ

### ಘಾಜಿಪುರ ಗಡಿಯಲ್ಲಿ ರಾಹುಲ್ ನಿಯೋಗಕ್ಕೆ ತಡೆ

**ಘಾಜಿಯಾಬಾದ್:** ಹಿಂಸಾಚಾರದಿಂದ ಉದ್ವಿಗ್ವ ಪರಿಸ್ಥಿತಿ ತಲೆದೋರಿರುವ ಉತ್ತರ ಪ್ರದೇಶದ ಸಂಬಲ್‌ಗೆ ತೆರಳಲು ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್‌ಗಾಂಧಿ ಮತ್ತು ಸಂಸದೆ ಪ್ರಿಯಾಂಕಗಂಧಿವಾದ್ರಾ ಅವರಿಗೆ ಅನುಮತಿ ನಿರಾಕರಿಸಿದ್ದಾರೆ. ರಾಹುಲ್ ಮತ್ತು ಪ್ರಿಯಾಂಕ ಸೇರಿದಂತೆ ಇತರ ಕಾಂಗ್ರೆಸ್ ನಾಯಕರೊಂದಿಗೆ ಇಂದು ಬೆಳಿಗ್ಗೆ ಘಾಜಿಪುರ ಗಡಿಗೆ ತಲುಪಿದರು. ಆದರೆ, ಪೊಲೀಸ್ ಭದ್ರತೆ ನಿಯೋಜಿಸಲಾಗಿದೆ. ಹೀಗಾಗಿ ರಾಹುಲ್ ನೇತೃತ್ವದ ನಿಯೋಗಕ್ಕೆ ಸಂಬಲ್ ಪ್ರದೇಶಕ್ಕೆ ಪ್ರವೇಶಿಸದಂತೆ ಬ್ಯಾರಿಕೇಡ್‌ಗಳನ್ನ ಹಾಕಲಾಗಿತ್ತು.ಮುನ್ನೆಚ್ಚರಿಕೆ ಕ್ರಮವಾಗಿ ಡಿ. 31ರ ವರೆಗೆ ನಿಷೇಧಾಜ್ಞೆ ವಿಸ್ತರಿಸಲಾಗಿದೆ.

ನಿಷೇಧಾಜ್ಞೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ರಾಹುಲ್ ನೇತೃತ್ವದ ನಿಯೋಗಕ್ಕೆ ಸಂಬಲ್ ಪ್ರವೇಶಕ್ಕೆ ಅನುಮತಿ ನಿರಾಕರಿಸಲಾಗಿದೆ. ಘಾಜಿಪುರ ಗಡಿಯಲ್ಲಿ ಅವರನ್ನು ತಡೆ ಹಿಡಿಯಲಾಗಿದೆ ಎಂದು ಘಾಸಿಯಾಬಾದ್ ಪೊಲೀಸ್ ಆಯುಕ್ತ ಅಜಯ್‌ಕುಮಾರ್ ಮಿಶ್ರಾ ಸ್ಪಷ್ಟಪಡಿಸಿದರು. ಹರಿಹರ ದೇಗುಲದ ಮೇಲೆ ಮೊಘಲ್ ದೊರೆಗಳು ಮಸೀದಿ ನಿರ್ಮಿಸಿದ್ದಾರೆ ಎಂಬ ಅರ್ಜಿ ಕುರಿತಂತೆ ಸಮೀಕ್ಷೆಗೆ ಆದೇಶಿಸಿದ ನ್ಯಾಯಾಲಯದ ಕ್ರಮ ವಿರೋಧಿಸಿ ನ.19 ರಂದು ಸಂಬಲ್‌ನಲ್ಲಿ ಪ್ರತಿಭಟನೆ ನಡೆದಿತ್ತು. ನ. 24 ರಂದು ಶಾಹಿಜಾಮಾ ಮಸೀದಿಯಲ್ಲಿ 2ನೇ ಸಮೀಕ್ಷೆ ನಡೆಸುವ ವೇಳೆ ನಡೆದ ಪ್ರತಿಭಟನೆ ಹಿಂಸಾರೂಪಕ್ಕೆ ತಿರುಗಿತ್ತು. ಪ್ರತಿಭಟನಾಕಾರರು ಮತ್ತು ಭದ್ರತಾ ಸಿಬ್ಬಂದಿ ನಡುವೆ ಘರ್ಷಣೆ ನಡೆದು ನಾಲ್ವರು ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದರು.

### ಬಿವೈವಿ ವಿರುದ್ಧ ದೂರು ನೀಡುತ್ತೇನೆ: ಯತ್ನಾಳ್

ನವದೆಹಲಿ: ಕೇಂದ್ರ ಶಿಸ್ತು ಸಮಿತಿ ನೀಡಿರುವ ಶೋಕಾಸ್ ನೋಟಿಸ್ ಗೆ ಸಮಗ್ರವಾಗಿ ಉತ್ತರ ಬರೆದಿದ್ದೇನೆ. 6 ಪುಟಗಳ ಉತ್ತರ ಸಿದ್ದಪಡಿಸಿದ್ದೇನೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಇಂದು ಮಾತನಾಡಿದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಯಡಿಯೂರಪ್ಪ ಕುಟುಂಬ ಟೀಮ್ ಮಾಡಿಕೊಂಡಿದ್ದಾರೆ. ಕುಟುಂಬ ರಾಜಕಾರಣದ ವಿರುದ್ಧದ ಹೋರಾಟದಲ್ಲಿ ರಾಜಿ ಇಲ್ಲ. ಬಿಎಸ್ ವೈ ಕುಟುಂಬದ ವಿರುದ್ಧ ಹಲವರಿಗೆ ಬೇಸರವಿದೆ ಎಂದರು. ಪಕ್ಷವನ್ನು ತಾಯಿಯಂತೆ ಭಾವಿಸುವ ನಾಯಕರು ಬೇಕು . ವಿಜಯೇಂದ್ರ ವಿರುದ್ಧ ವರಿಷ್ಠರಿಗೆ ದೂರು ಕೊಡುತ್ತೇನೆ. ನಾನು ಬಿಜೆಪಿ ವಿರುದ್ಧ ಎಂದೂ ಮಾತನಾಡಿಲ್ಲ. ಭ್ರಷ್ಟಾಚಾರ ರಹಿತ ಕುಟುಂಬವಾದ ರಹಿತ ಪಕ್ಷ ಇರಬೇಕು ಎಂದರು.

# ಕಕ್ಷಿದಾರರಿಗೆ ನ್ಯಾಯ ಒದಗಿಸುವ ಕೆಲಸ ಮಾಡಿ

ಮಾಲೂರು : ಸಮಾಜದಲ್ಲಿ ಸಾವಿರಾರು ವೃತ್ತಿಗಳಲ್ಲಿ ಪವಿತ್ರ ಹಾಗೂ ಪರಮೋಚ್ಚವಾದ ವೃತ್ತಿ ವಕೀಲ ವೃತ್ತಿ ಆದ್ದರಿಂದ ಪ್ರತಿಯೊಬ್ಬ ವಕೀಲರು ತಮ್ಮ ವೃತ್ತಿಯನ್ನು ಗೌರವಿಸುವುದರ ಮೂಲಕ ತಮ್ಮ ಕಕ್ಷಿದಾರರಿಗೆ ನ್ಯಾಯ ಒದಗಿಸುವ ಕೆಲಸ ಮಾಡುವಂತೆ ಪಟ್ಟಣದ ಸಿಜೆ ಹಾಗೂ ಜೆ.ಎಂ.ಎಫ್‌ಸಿ ನ್ಯಾಯಾಲಯದ 1ನೇ ಅಪರ ಸಿವಿಲ್ ನ್ಯಾಯಾದೀಶರಾದ ಹೆಚ್.ಜೆ.ಶಿಲ್ಪ ಹೇಳಿದರು.




ಪಟ್ಟಣದ ಜೆ.ಎಂ.ಎಫ್.ಸಿ ನ್ಯಾಯಾಲಯದ ಆವರಣದಲ್ಲಿರುವ ವಕೀಲರ ಸಂಘದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ವಕೀಲರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಸಮಾಜದಲ್ಲಿ ವಕೀಲ ವೃತ್ತಿ ನೋಬೆಲ್ ವೃತ್ತಿಯಾಗಿದ್ದು, ಎಲ್ಲಾ ವೃತ್ತಿಗಳಿಗಿಂತ ಪವಿತ್ರವಾದ ವೃತ್ತಿಯಾಗಿದೆ ನ್ಯಾಯಕ್ಕಾಗಿ ವಕೀಲರ ಬಳಿ ಕಕ್ಷಿದಾರರು ಬಂದಾಗ ಅವರಿಗೆ ಉತ್ತಮ ರೀತಿಯ ಸೇವೆಯನ್ನು ನೀಡಬೇಕು. ಹಾಗೂ ಅವರಿಗೆ ತೊಂದರೆಯಾಗದಂತೆ ನ್ಯಾಯ ಒದಗಿಸುವ ಕೆಲಸ ಮಾಡಬೇಕು ಎಂದರು.

ಪ್ರತಿ ವರ್ಷ ವಕೀಲರ ದಿನವನ್ನು ಡಿಸೆಂಬರ್ 03, ರಂದು ಸ್ವತಂತ್ರ ಭಾರತದ ಮೊದಲ ರಾಷ್ಟ್ರಪತಿ ಮತ್ತು ಅತ್ಯಂತ ಗೌರವಾನ್ವಿತ ವಕೀಲರಾದ ಡಾ. ರಾಜೇಂದ್ರ ಪ್ರಸಾದ್ ಅವರ ಆಚರಣೆಯಲ್ಲಿ ಆಚರಿಸಲಾಗುತ್ತದೆ. ವಕೀಲರ ದಿನವು ನ್ಯಾಯದ ಆಡಳಿತದಲ್ಲಿ ಕಾನೂನು ವೃತ್ತಿಪರರು ವಹಿಸುವ ಪ್ರಮುಖ ಪಾತ್ರವನ್ನು ನೆನಪಿಸುತ್ತದೆ ಮತ್ತು ಕಾನೂನಿನ ನಿಯಮವನ್ನು ಕಾಪಾಡುವಲ್ಲಿ ಅವರ ಸಮರ್ಪಣೆಯಾಗಿದೆ. ಪ್ರತಿಯೊಬ್ಬರಿಗೂ ನ್ಯಾಯ ವ್ಯವಸ್ಥೆಗೆ ಪ್ರವೇಶವಿದೆ ಎಂದು ಖಾತರಿಪಡಿಸಲು ವೃತ್ತಿಪರತೆ, ಕಾನೂನು ನೀತಿಗಳು ಮತ್ತು ವಕೀಲರ ಬಾಧ್ಯತೆಗಳ ಮೌಲ್ಯವನ್ನು ಒತ್ತಿಹೇಳಲು ಇದು ಒಂದು ಅವಕಾಶವಾಗಿದೆ. ವಕೀಲರ ದಿನವು ಮಹತ್ವದ್ದಾಗಿದೆ ಎಂದರು.

ವಕೀಲರ ಸಂಘದ ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ಮಾತನಾಡಿ ಡಾ. ರಾಜೇಂದ್ರ ಪ್ರಸಾದ್ ಅವರ ಜನ್ಮದಿನವನ್ನು ನಾವು ವಕೀಲರ ದಿನವನ್ನಾಗಿ ದೇಶಾದ್ಯಂತ ಆಚರಣೆ ಮಾಡುತ್ತಿದ್ದು ಅವರ ತತ್ವ ಆದರ್ಶಗಳು ನ್ಯಾಯವಾದಿಗಳಿಗೆ ಇಂದಿಗೂ ಪ್ರೇರಣೆ, ಪ್ರೋತ್ಸಾಹ ಮತ್ತು ಕ್ರೀಯಾಶಿಲತೆ ನೀಡುವುದರಲ್ಲಿ ಎರಡು ಮಾತಿಲ್ಲ, ನಾವು ನ್ಯಾಯವಾದಿಗಳು ನಮ್ಮೆಲರ ವೃತ್ತಿಯ ಹುಟ್ಟು ಹಬ್ಬವಾಗಿ ಸಂಭ್ರಮದಿಂದ ಆಚರಿಸಿಕೊಳ್ಳವುದರೊಂದಿಗೆ ವೃತ್ತಿಯ ಗೌರವ ಘನತೆಯನ್ನು ಎತ್ತಿ ಹಿಡಿಯುವ ಬಾಬು ರಾಜೇಂದ್ರ ಪ್ರಸಾದ್ ಜನ್ಮ ದಿನಾಚರಣೆಯನ್ನಾಗಿ ಆಚರಣೆ ಮಾಡುತ್ತಿದ್ದೇವೆ. ಕಾನೂನು ಸಮುದಾಯಕ್ಕೆ ಆತ್ಮಾವಲೋಕನ, ಅಂಗೀಕಾರ ಮತ್ತು ಆಚರಣೆಗಾಗಿ ಅವಧಿಯನ್ನು ನೀಡುತ್ತದೆ. ಮೂಲಭೂತವಾಗಿ, ಆಧುನಿಕ ಕಾಲದಲ್ಲಿ ವಕೀಲರ ದಿನವನ್ನು ಆಚರಿಸುವುದು ವಕೀಲ ವೃತ್ತಿಯನ್ನು ಗೌರವಿಸಲು, ಕಾನೂನು ಅರಿವನ್ನು ಉತ್ತೇಜಿಸಲು ಮತ್ತು ಬದಲಾಗುತ್ತಿರುವ ಸಮಾಜದಲ್ಲಿ ವಕೀಲರ ವಿಕಾಸದ ಪಾತ್ರವನ್ನು ಪ್ರತಿಬಿಂಬಿಸಲು ಒಂದು ಮಾರ್ಗವಾಗಿದೆ. ನ್ಯಾಯ, ನೀತಿ ಮತ್ತು ಕಾನೂನಿನ ನಿಯಮಕ್ಕೆ ಬದ್ಧತೆಯನ್ನು ಪುನರುಚ್ಚರಿಸಲು ಇದು ಒಂದು ಸಂದರ್ಭವಾಗಿದೆ ಎಂಧರು. 2ನೇ ಅಪರ ಸಿವಿಲ್ ನ್ಯಾಯಾದೀಶರಾದ ರಹೆಲಾ ಸಬಾ, ಹಿರಿಯ ಶ್ರೇಣ ನ್ಯಾಯಾದೀಶ ದಯಾನಂದ್, ವಕೀರ ಸಂಘದ ಕಾರ್ಯದರ್ಶಿ ಹರೀಶ್ ಕುಮಾರ್, ಉಪಾಧ್ಯಕ್ಷ ಅಮರನಾರಾಯಣ, ವಕೀಲರಾದ ಡಿ.ನಾರಾಯಣಸ್ವಾಮಿ, ಸೋಮಶೇಖರ್, ಆನಂದ್, ಜಗದೀಶ್, ಎಂ.ಜಗನ್ನಾಥ್, ಚಂದ್ರಪ್ಪ, ನಾರಾಯಣಸ್ವಾಮಿ, ವೈ.ನಾರಾಯಣಸ್ವಾಮಿ, ಸಿ.ಮುನಿಯಪ್ಪ, ವಿನಯ್ ಕುಮಾರ್, ವೆಂಕಟರಾಮಯ್ಯ, ರಾಜೇಶ್, ಇನ್ನಿತರರು ಹಾಜರಿದ್ದರು.

# ಕರಾಟೆ ಸ್ಪರ್ಧೆಯಲ್ಲಿ ತಾಲ್ಲೂಕಿನ ನೂರ್ ಸಲ್ಮಾ ಪ್ರಥಮ ಸ್ಥಾನ

**ಶಿಡ್ಲಘಟ್ಟ :** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿಜಯಪುರದಲ್ಲಿ ನಡೆದ ರಾಜ್ಯಮಟ್ಟದ ಬಾಲಕಿಯರ ಕರಾಟೆ ಸ್ಪರ್ಧೆಯಲ್ಲಿ ಶಿಡ್ಲಘಟ್ಟ ತಾಲ್ಲೂಕಿನ ನೂರ್ ಸಲ್ಮಾ ಪ್ರಥಮ ಸ್ಥಾನ ಗೆದ್ದಿದ್ದಾರೆ.



ಈ ಅಭೂತಪೂರ್ವ ಸಾಧನೆಯೊಂದಿಗೆ ಅವರು ಪಂಜಾಬಿನಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಲು ಆಯ್ಕೆಯಾಗಿದ್ದಾರೆ.

ರಾಜ್ಯಮಟ್ಟದ ಕರಾಟೆ ಸ್ಪರ್ಧೆಯನ್ನು 2024-25 ನೇ ಶೈಕ್ಷಣಿಕ ಸಾಲಿಗೆ ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಇಲಾಖೆ ಆಶ್ರಯದಲ್ಲಿ ವಿಜಯಪುರದಲ್ಲಿ ಆಯೋಜಿಸಲಾಗಿತ್ತು.

14 ವರ್ಷ ವಯೋಮಿತಿಯ 30 ಕೆ.ಜಿಯ ವಿಭಾಗದಲ್ಲಿ ನೂರ್ ಸಲ್ಮಾ ತಮ್ಮ ಶ್ರೇಷ್ಠ ಕೌಶಲ್ಯ ಪ್ರದರ್ಶಿಸಿ ಸುವರ್ಣ ಪದಕ ಗೆದ್ದಿದ್ದಾರೆ.

ನೂರ್ ಸಲ್ಮಾ ಅವರ ಈ ಸಾಧನೆಗೆ ಕರಾಟೆ ತರಬೇತುದಾರ ಮೆಚ್ಚುಗೆ ವ್ಯಕ್ತಪಡಿಸಿದ್ದು, ಅವರು ತಮ್ಮ ಪ್ರಯತ್ನದ ಮೂಲಕ ಶಿಡ್ಲಘಟ್ಟ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗೆ ಹೆಮ್ಮೆ ತಂದಿದ್ದಾರೆ ಎಂದಿದ್ದಾರೆ.

ಪಂಜಾಬಿನಲ್ಲಿ ನಡೆಯಲಿರುವ ರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ನೂರ್ ಸಲ್ಮಾ ರಾಜ್ಯವನ್ನು ಪ್ರತಿನಿಧಿಸಲಿದ್ದಾರೆ ,ಈ ಸಾಧನೆ ಅವರ ಪರಿಶ್ರಮ, ಸಮರ್ಪಣೆಗೆ ಸಾಕ್ಷಿಯಾಗಿದ್ದು, ಎಲ್ಲಾರ ಹರ್ಷಕ್ಕೆ ಕಾರಣವಾಗಿದೆ.

# ಕನ್ನಡ ಸಾಹಿತ್ಯ ಸಮ್ಮೇಳನ ರಥ ಜಿಲ್ಲೆಗೆ ಆಗಮನ: ಹನೂರಿನಲ್ಲಿ ಚಾಲನೆ

ಚಾಮರಾಜನಗರ: 87ನೇ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಕನ್ನಡ ಜ್ಯೋತಿ ಹೊತ್ತ ರಥಯಾತ್ರೆ ಇಂದು ಚಾಮರಾಜನಗರ ಜಿಲ್ಲೆಯನ್ನು ಪ್ರವೇಶಿಸಿತು.

ಸಾಹಿತ್ಯ ಸಮ್ಮೇಳನ ರಥಯಾತ್ರೆಗೆ ಹನೂರು ಪಟ್ಟಣದಲ್ಲಿ ತಹಶೀಲ್ದಾರ್‌ಗುರುಪ್ರಸಾದ್ ಚಾಲನೆ ನೀಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಗುರುಲಿಂಗಯ್ಯ, ತಾಲೂಕು ಮಟ್ಟದ ಅಧಿಕಾರಿಗಳು, ಕನ್ನಡಪರ ಸಂಘಟನೆಗಳ ಅಧ್ಯಕ್ಷರು, ಪದಾಧಿಕಾರಿಗಳು ಇನ್ನಿತರ ಗಣ್ಯರು ಈ ಸಂದರ್ಭದಲ್ಲಿಹಾಜರಿದ್ದರು. ಶಾಲಾ ವಿದ್ಯಾರ್ಥಿಗಳು ಕಲಾ ತಂಡಗಳು ಪಾಲ್ಗೊಂಡು ಮೆರಗು ಹೆಚ್ಚಿಸಿದರು.



# ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದಿಂದ ಏರ್‌ಬೆಡ್ ವಿತರಣೆ

**ಚಾಮರಾಜನಗರ:** ಜಿಲ್ಲಾ ವಿಕಲಚೇತನ ಪುನರ್ವಸತಿ ಕೇಂದ್ರದಿಂದ ನಗರದ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ನಡೆದ ವಿಶ್ವ ವಿಕಲಚೇತನರ ದಿನಾರಣೆ ಕಾರ್ಯಕ್ರಮದಲ್ಲಿ ತೀವ್ರತರರಾದ ವಿಶೇಷ ಚೇತನರ ಫಲನುಭವಿಗಳಿಗೆ ದಾನಿಗಳಿಂದ ಏರ್‌ಬೆಡ್ ವಿತರಿಸಲಾಯಿತು.

ಚಾಮರಾಜನಗರ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ಅನುಷ್ಠಾನ ಹಾಗೂ ಗ್ರೀನ್ ಗ್ರಾಮೀಣಾಭಿವೃದ್ಧಿ ಮತ್ತು ತರಬೇತಿ ಸಂಸ್ಥೆಯು ಜಿಲ್ಲಾ ವ್ಯಾಪ್ತಿಯಲ್ಲಿ ವಿಶೇಷ ಚೇತನರಿಗೆ ಪುನರ್ವಸತಿ ಕಲ್ಪಿಸುವ ನಿಟ್ಟಿನಲ್ಲಿ ಫಿಶೇಷ ಚೇತನರಿಗೆ ಇದುವರೆಗೆ ಫಿಜಿಯೋ ಥೆರಪಿ, ಸ್ಪೀಚ್ ಥೆರಪಿ, ಮಾನಸಿಕ ಅಸ್ವಸ್ಥತೆಯ ವೀಭಾಗದ ಪೋಷಕರ ಸಮಲೋಚನೆ ಅಲ್ಲದೇ ತಾಲ್ಲೂಕು ಮಟ್ಟದಲ್ಲಿ ಯು.ಡಿ.ಐ.ಡಿ ಶಿಬಿರದ ಮುಖಾಂತರ ವಿಕಲಚೇತನರಿಗೆ ದೊರಕಿಸಿಕೊಟ್ಟಿದ.

ವಿಕಲಚೇತರಿಗೆ ಸರ್ಕಾರದ ವತಿಯಿಂದ ಯೋಜನ ಕಾರ್ಯಕ್ರಮಗಳನ್ನು ಸ್ಥಳಿಯ ಹಂತದವರೆಗೂ ತಲುಪಿಸುವ ನಿಟ್ಟಿನಲ್ಲಿ ಕ್ಷೇತ್ರ ಕಾರ್ಯ ಕೈಗೊಳ್ಳುವ ಮೂಲಕ ತೀವ್ರ ತರನಾದ ವಿಕಲ ಚೇತನರ ಗೃಹ ಭೇಟಿ ಮೂಲಕ ಬಹುತೇಕವಾಗಿ ಮೆದುಳು ಪಾರ್ಶ್ವವಾಯು ನ್ಯೂನತೆಗೊಳಗಾದ ವಿಶೇಷ



ಚೇತನರು ಜೀವನ ಶೈಲಿ ತುಂಬ ಕಷ್ಟಕರವಾಗಿದ್ದು ಹಾಗೆಯೇ ಯವುದೇ ಶಿಬಿರಗಳಲ್ಲಿ ಏರ್‌ಬೆಡ್ ನೀಡದ ಕಾರಣ ಡಿ.ಡಿ.ಆರ್.ಸಿ ಕೇಂದ್ರ ಹಾಗೂ ನಗರದ ಉದ್ಯಮಿ ಜಿ.ಎಂ. ಹೆಗ್ಗಡೆ ರವರ ವತಿಯಿಂದ ವಿತರಸಲಾಗಿದೆ ಎಂದು ಕೇಂದ್ರದ ಕಾರ್ಯದರ್ಶಿ ಮಹದೇವಸ್ವಾಮಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಚಾಮರಾಜನಗರದ ಜಿಲ್ಲಾಧಿಕಾರಿ ಶಿಲ್ಪನಾಗ್ ವಿಕಲಚೇತನರಿಗೆ ಏರ್‌ಬೆಡ್ ವಿತರಿಸಿದರು. ಈ ಸಂದರ್ಭದಲ್ಲಿ ನಗರಸಭೆ ಉಪಾಧ್ಯಕ್ಷ ಮಮತಾ, ಜಿಲ್ಲಾ ವಿಕಲಚೇತನ ಕಲ್ಯಾಣ ಅಧಿಕಾರಿ ಮೀನಾಕ್ಷಿ, ಡಿ.ಡಿ.ಆರ್.ಸಿ ಕೇಂದ್ರ ನೂಡಲ್ ಅಧಿಕಾರಿ ವೆಂಕಟೇಶ್ ಹಾಜರಿದ್ದರು.

# ಅಂತರಾಜ್ಯ ಕಳ್ಳನ ಬಂಧನ

**ಚಿಕ್ಕಬಳ್ಳಾಪುರ:** ನಗರದ ಕಾರ್ ಪಾರ್ಕಿಂಗ್ ನಲ್ಲಿ ನಿಲ್ಲಿಸಿದ್ದ ಟಿಟಿ ಕಳ್ಳತನ ಮಾಡಿ ಆರು ತಿಂಗಳಿಗೆ ಕಳ್ಳ ಸಿಕ್ಕಿಬಿದ್ದಿದ್ದಾನೆ. ಟಿಟಿ ಕಳುವು ಮಾಡಲು ಬಳಸಿದ್ದ ಇನ್ನೋವಾ ಕಾರ್ ಬಂದು ಹೋಗಿದ್ದನ್ನ ಸಿಸಿ ಟಿವಿಯಲ್ಲಿ ರೆಕಾರ್ಡ ಆಗಿದ್ದ ವೀಡೀಯೋ ಜಾಡ್ ಹಿಡಿದ ಪೊಲೀಸರು ಕಳ್ಳನ ಹೆಡೆಮುರಿ ಕಟ್ಟಿ ಬಂದಿಸಿದ್ದಾರೆ. ಬಂದಿತ ಅಂತರರಾಷ್ಟ್ರೀಯ ದರೋಡೆಕೋರನ ಕತರ್ನಾಕ್ ಕೆಲಸ ತಿಳಿದು ಪೊಲೀಸರೆ ದಂಗಾಗಿ ಹೋಗಿದ್ದಾರೆ.



ದಿನಾಂಕ 31/05/2024 ರಂದು ಚಿಕ್ಕಬಳ್ಳಾಪುರ ನಗರದ ತಾಲ್ಲೂಕು ಪಂಚಾಯಿತಿ ಸಾಮರ್ಥ್ಯ ಸೌದ ಕಾರ್ ಸ್ಟಾಂಡ್ ನಲ್ಲಿ ನಿಲ್ಲಿಸಿದ್ದ ಚಿಕ್ಕಬಳ್ಳಾಪುರದ ಬಂಗಾರಿ ಎನ್ನುವವರಿಗೆ ಸೇರಿದ ಕೆಎ 04 ಎಎ 4638 ಟೆಂಪೋ ಟ್ರಾವೆಲ್ಸ್ ಗಾಡಿಯನ್ನ ಅಂದು ರಾತ್ರಿ ಇನ್ನೋವಾ ಕಾರಿನಲ್ಲಿ ಬಂದು ಹೋಗಿರುವ ಸಿಸಿ ವೀಡಿಯೋ ಸಿಕ್ಕಿತ್ತು ಪ್ರಕರಣ ದಾಖಲಿಸಿಕೊಂಡ ಪೊಲೀಸರು ಅವತ್ತಿನಿಂದ ಹುಡುಕಾಟದಲ್ಲಿ ತೊಡಗಿದ್ದ ಪೊಲೀಸರು ಕೊನೆಗೂ ಕಳ್ಳನನ್ನ ಪತ್ತೆ ಹಚ್ಚುಯುವಲ್ಲಿ ಯಾಶ್ವಿಯಾಗಿದ್ದಾರೆ. ಸಿಕ್ಕಿಬಿದ್ದಿರುವ ಕಳ್ಳನ ಹೆಸರು ಫಕ್ರುದ್ದೀನ್, ಇವನೊಬ್ಬ ಅಂತರರಾಜ್ಯ ಕಳ್ಳನಾಗಿದ್ದಾನೆ ಇವನ ಅಸಲಿ ಕಸಬು ರಕ್ತ ಚಂದನ ಕದ್ದು ಅಕ್ರಮವಾಗಿ ಮಾರಾಟ ಮಾಡೋದು,ಇವನ ಮೇಲೆ ಬರೋಬ್ಬರಿ 72 ಕೇಸುಗಳಿವೆ ಎಂದು ತಿಳಿದು ಬಂದಿದೆ. 72 ಕೇಸುಗಳಲ್ಲಿ 70 ಕೇಸುಗಳು ರಕ್ತಚಂದನ ಕದ್ದು ಮಾರಾಟ ಮಾಡಿದ್ದೆ ಎನ್ನುವುದಾಗಿದ್ದು ಕೊಟ್ಯಾಂತರ ರುಪಾಯಿ ವಹಿವಾಟು ಇವನ ಕಳ್ಳತನದಲ್ಲಿ ಪತ್ತೆಯಾಗಿದೆ. ಫಕ್ರುದ್ದೀನ್ ಎನ್ನುವವನು ಆಂದ್ರ ಪ್ರದೇಶದ ಕಡಪ ಜಿಲ್ಲೆ ಚಾಪಡ್ ಮಂಡಲ್ ಕಾದರ್ ಪಲ್ಲಿ ಎಂದು ಗೊತ್ತಾಗಿದೆ. ಇವನೆ ಕಿಂಗ್ ಪಿನ್ ಆಗಿದ್ದು ಇವನ ಜೊತೆಗೆ ಬಂದಿದ್ದ ಮತ್ತೊಬ್ಬ ತಲೆಮರಿಸಿಕೊಂಡಿದ್ದಾನೆ. ತಿರುಪತಿಯಲ್ಲಿ ಸಿಕ್ಕಿಬಿದ್ದ ಖದೀಮ ಫಕ್ರುದ್ದೀನ್ ಗೆ ಹಿಡಿದ ಪೊಲೀಸರು ಇಂದು ಚಿಕ್ಕಬಳ್ಳಾಪುರ ಕ್ಕೆ ಕರೆತಂದು ಸ್ಥಳ ಮಹಜರು ಮಾಡಿದರು. ಅಂದು ಕಳ್ಳತನವಾಗಿದ್ದ ಟಿಟಿಯಿಂದ ಇಡೀ ಬಸ್ ನಿಲ್ದಾಣದ ಕಾರು ಚಾಲಕರು ಬೆಸ್ತು ಬಿದ್ದಿದ್ದರು. ಚಿಕ್ಕಬಳ್ಳಾಪುರ ಪೊಲೀಸರ ಕಾರ್ಯಾಚರಣೆಗೆ ಇಂದು ಮೆಚ್ಚುಗೆ ವ್ಯಕ್ತಪಡಿಸಿದ್ದು ಕಳ್ಳನ ವಿಚಾರಣೆ ಮುಂದುವರೆದಿದೆ ತನಿಖೆ ಪೂರ್ತಿಯಾಗುವ ವೇಳೆಗೆ ಇವನಿಂದ ಇನ್ಯಾರಾರು ಮೋಸ ಹೋಗಿದ್ದಾರೆ ಎಲ್ಲೆಲ್ಲಿ ಕಳವು ಮಾಡಿದ್ದಾರೆ ಯಾರ್ಯಾರು ಈ ಪ್ರಕರಣದಲ್ಲಿ ಬಾಗಿಯಾಗಿದ್ದಾರೆ ಅನ್ನೋ ಫುಲ್ ಡೀಟೈಲ್ಸ್ ಹೊರಬೀಳಲಿದೆ. ಈ ಖತರ್ನಾಕ್ ಬಂದನದಿಂದ ಪೊಲೀಸರ ಮೇಲೆ ಜನರಿಗೆ ಮತ್ತಷ್ಟು ನಂಬಿಕೆ ಮೂಡಿದಂತಾಗಿದೆ .

# ಬಂಡೀಪುರದಲ್ಲಿ ದೇಶದಲ್ಲೇ ಮೊದಲ ಅರಣ್ಯ ಅಪರಾಧ ಪತ್ತೆ ಹಚ್ಚು ಶ್ವಾನಗಳ ತರಭೇತಿ ಕೇಂದ್ರ ಆರಂಭ



**ಅರಣ್ಯ ಅಪರಾಧ ಪತ್ತೆ ಹಚ್ಚುವ ಶ್ವಾನದಳದ ತರಭೇತಿ ಕೇಂದ್ರವು ಬಂಡೀಪುರ ಬಳಿ ಮೇಲುಕಾಮನಹಳ್ಳಿ ಆಡಳಿತ ವಿಭಾಗದಲ್ಲಿದ್ದು, 20 ಸಿಬ್ಬಂದಿ 10 ತಿಂಗಳ ಕಾಲ ತರಬೇತಿ ಪಡೆಯಲಿದ್ದಾರೆ. ತರಬೇತಿ ಬಳಿಕ ಸಿಬ್ಬಂದಿ ಯನ್ನು ಬಂಡೀಪುರ, ನಾಗರಹೊಳೆ, ಬಿಆರ್ಟಿ, ಭದ್ರಾ, ಕಾಳಿ ಪ್ರದೇಶದಲ್ಲಿ ಬೇಟೆ ಪ್ರಕರಣ, ಅಕ್ರಮಮರ ಕಡಿಯುವ ಪ್ರಕರಣ ಗಳಂತಹ ಅರಣ್ಯ ಮತ್ತು ವನ್ಯಜೀವಿ ನಿಷೇಧಿತ ವಸ್ತುಗಳನ್ನು ವಶಪಡಿಸಿಕೊಳ್ಳಲು ನಿಯೋಜಿಸಲಾಗುವುದು. ಅರಣ್ಯ ಇಲಾಖೆಯು ಈ ವಿನೂತನ ಪ್ರಯತ್ನ ಮಾಡಿದೆ. ಬಂಡೀಪುರದಲ್ಲಿ ಆರಂಭವಾದ ಶ್ವಾನ ದಳ ತರಬೇತಿ ಕೇಂದ್ರ ದೇಶದಲ್ಲಿ ಪ್ರಥಮ ವಾಗಿದೆ. ಸದ್ಯಕ್ಕೀಗ 8 ಶ್ವಾನಗಳು ಬಂದಿವೆ. ತರಬೇತಿ ಕೇಂದ್ರ ಬಂಡೀಪುರದಲ್ಲಿ ಆರಂಭಗೊಂಡಿದ್ದು ನಿಜಕ್ಕೂ ಹೆಮ್ಮೆಯ ಸಂಗತಿ.**

**- ಎಸ್.ಪ್ರಭಾಕರನ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಯೋಜನಾ ನಿರ್ದೇಶಕರು ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ**

*** ನಾ.ಅಶ್ವಥ್ ಕುಮಾರ್**

**ಚಾಮರಾಜನಗರ :** ರಾಜ್ಯದಲ್ಲೇ ಅತೀ ಹೆಚ್ಚು ಹುಲಿಗಳ ತಾಣವಾಗಿರುವ ಚಾಮರಾಜನಗರ ಜಿಲ್ಲೆಯ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ ಇದೀಗ ದೇಶದ ಗಮನ ಸೆಳೆಯಲು ಮುಂದಾಗಿದ್ದು, ದೇಶದಲ್ಲೇ ಮೊದಲ ಅರಣ್ಯ ಅಪರಾಧಗಳನ್ನು ಪತ್ತೆ ಹಚ್ಚುವ ಶ್ವಾನಗಳ ತರಭೇತಿ ಕೇಂದ್ರವನ್ನು ಆರಂಭಿಸಿ ಹಿರಿಮೆಗೆ ಮುಂದಾಗಿದೆ.

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಆರಂಭವಾದ ಅರಣ್ಯ ಶ್ವಾನದಳಕ್ಕೆ ಹೊಸದಾಗಿ ನಿರ್ಮಾಣ ಮಾಡಿದ್ದ ಕನೆಲ್ಗಳನ್ನು ಮೈಸೂರು ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ಮಾಲತಿ ಪ್ರಿಯ ಹಾಗೂ ಹುಲಿ ಯೋಜನೆ ನಿರ್ದೇಶಕ ಡಾ.ಪಿ.ರಮೇಶ್ ಕುಮಾರ್ ಚಾಲನೆ ನೀಡಿದರು.

ರಾಜ್ಯದಲ್ಲಿ ಬಂಡೀಪುರ, ನಾಗರಹೊಳೆ, ಬಿಳಿಗಿರಿರಂಗನಬೆಟ್ಟದ ಹುಲಿಧಾಮ, ಭದ್ರಾ, ದಾಂಡೇಲಿಯ ಕಾಳಿ ಸೇರಿ ಐದು ಹುಲಿ ಸಂರಕ್ಷಿತ ಪ್ರದೇಶಗಳಿವೆ.

ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಅರಣ್ಯ, ವನ್ಯಜೀವಿ ಸಂಬಂಧಿತ ಅಪರಾಧ ಪ್ರಕರಣಗಳನ್ನು ಪತ್ತೆ ಹಚ್ಚಲು ಸಿಬ್ಬಂದಿ ಶ್ರಮಿಸುತ್ತಿದ್ದರೂ ಶ್ವಾನಗಳ ಬಳಕೆ ಆರಂಭಿಸಲಾಗಿತ್ತು. ಈಗ ಎಲ್ಲಾ ಹುಲಿ ಸಂರಕ್ಷಿತ ಪ್ರದೇಶಗಳಿಗೆ ಶ್ವಾನದಳ ಆರಂಭವಾಗಿದೆ.

ತರಬೇತಿ ಕೇಂದ್ರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅಪರ ಪ್ರಧಾನ ಮುಖ್ಯ ಸಂರಕ್ಷಣಾಧಿಕಾರಿ ಮಾರ್ಗದರ್ಶದಲ್ಲಿ ಹುಲಿ ಯೋಜನೆ ನಿರ್ದೇಶಕ ಡಾ.ಪಿ.ರಮೇಶ್ ಕುಮಾರ್ ಶಾನದಳ ಬಲಪಡಿಸಲು ಯೋಜನೆ ರೂಪಿಸಿ ಅನುಮತಿ ಪಡೆದಿದ್ದು, ಈಗಾಗಲೇ ಶ್ವಾನದಳ ಹೊಂದಿದ್ದ ಬಂಡೀಪುರ ದಲ್ಲಿಯೇ ತರಬೇತಿ ಕೇಂದ್ರವನ್ನು ಆರಂಭಿಸುವ ಯೋಜನೆ ರೂಪಿಸಿ ಜಾರಿಗೆ ತಂದಿದ್ದು, ಈಗ ಸುಸಜ್ಜಿತ ಘಟಕವೀಗ ಬಂಡೀಪುರದಲ್ಲಿ ಉದ್ಘಾಟನೆಯಾಗಿದೆ.

ಈ ಹಿಂದೆ ಬಂಡೀಪುರದಲ್ಲಿ ರಾಣ ಹೆಸರಿನ ಶ್ವಾನ ಇತ್ತು. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ವನ್ಯಜೀವಿ ಸಂಬಂಧಿತ ಅಪರಾಧ ಪತ್ತೆ ಹಚ್ಚುವಲ್ಲಿ ಮತ್ತು ಮುನ್ನೆಚ್ಚರಿಕೆ ವಹಿಸುವಲ್ಲಿ ಸತತ 8 ವರ್ಷಗಳ ಸೇವೆ ಸಲ್ಲಿಸಿದ್ದ ರಾಣ ಎಂಬ ಶ್ವಾನ ಕಳೆದ ವರ್ಷ ಅಸುನೀಗಿತ್ತು.

ಬಂಡೀಪುರದಲ್ಲಿ ಶ್ವಾನದ ಮೂಲಕ ಅಪರಾಧ ಪತ್ತೆಗಾರಿಕೆ , ವನ್ಯಜೀವಿ ಬೇಟೆಗಾರರನ್ನು ಹಿಡಿಯುವ ಕಾರ್ಯ ಒಂದು ದಶಕದಿಂದ ಇದ್ದರೂ ಪ್ರತ್ಯೇಕ ಘಟಕ ಇರಲಿಲ್ಲ.

ಆದರೀಗ ಶ್ವಾನಗಳಿಗೆ ತಾಲೀಮು ನಡೆಸುವ ಜತೆಗೆ ಇದಕ್ಕಾಗಿ ಪ್ರತ್ಯೇಕ ಸಿಬ್ಬಂದಿಗೂ ತರಬೇತಿ ಶುರುವಾಗಿದೆ. ಕರ್ನಾಟಕ ಅರಣ್ಯ ಇಲಾಖೆಯ ಹಿರಿಮೆಗೆ ಮತ್ತೊಂದು ವಿಶೇಷ ಸೇರ್ಪಡೆಯಾಗಿದೆ. ಕರ್ನಾಟಕ ಅರಣ್ಯ ಇಲಾಖೆಯ ಶ್ವಾನದಳಕ್ಕೆ ತನಿಖೆ ಹಾಗೂ ವಿಚಕ್ಷಣೆಯ ತರಬೇತಿ ನೀಡಲು ಹೊಸ ತಂಡ ರಚನೆಯಾಗಿದೆ.





# ಆಕ್ಷನ್ ಕಿಂಗ್ ಮಾತ್ರವಲ್ಲ... ಡಾ.ಅರ್ಜುನ್ ಸರ್ಜಾ!



ಬಹುಭಾಷಾ ನಟ ಆಕ್ಷನ್ ಕಿಂಗ್ ಅರ್ಜುನ್ ಸರ್ಜಾ ಅವರು ಬರೀ ನಟರಾಗಿ ಮಾತ್ರವಲ್ಲದೇ ನಿರ್ದೇಶಕರಾಗಿ, ನಿರ್ಮಾಪಕರಾಗಿ, ಸ್ಕ್ರೀನ್ ರೈಟರ್, ಡಿಸ್ಟ್ರಿಬ್ಯೂಟರ್, ವಿಲನ್ ಆಗಿ ಹಾಗೂ ಪೋಷಕ ನಟರಾಗಿ ಸಿನಿರಂಗದಲ್ಲಿ ಗುರುತಿಸಿಕೊಂಡಿದ್ದಾರೆ. ಇದೀಗ ಅವರ ಅಪಾರ ಸಾಧನೆಗೆ ಹಿರಿಮೆಯ ಗರಿಯೊಂದು ಸೇರ್ಪಡೆಯಾಗಿದೆ.

ಬಹುಭಾಷಾ ನಟ ಆಕ್ಷನ್ ಕಿಂಗ್ ಅರ್ಜುನ್ ಸರ್ಜಾ ಅವರು ಬರೀ ನಟರಾಗಿ ಮಾತ್ರವಲ್ಲದೇ ನಿರ್ದೇಶಕರಾಗಿ, ನಿರ್ಮಾಪಕರಾಗಿ, ಸ್ಕ್ರೀನ್ ರೈಟರ್, ಡಿಸ್ಟ್ರಿಬ್ಯೂಟರ್, ವಿಲನ್ ಆಗಿ ಹಾಗೂ ಪೋಷಕ ನಟರಾಗಿ ಸಿನಿರಂಗದಲ್ಲಿ ಗುರುತಿಸಿಕೊಂಡಿದ್ದಾರೆ. ಇದೀಗ ಅವರ ಅಪಾರ ಸಾಧನೆಗೆ ಹಿರಿಮೆಯ ಗರಿಯೊಂದು ಸೇರ್ಪಡೆಯಾಗಿದೆ. ಹೌದು! ಸಿನಿ ಕ್ಷೇತ್ರದಲ್ಲಿ ಅಪಾರವಾದ ಸಾಧನೆ, ಶ್ರಮವನ್ನು ಪರಿಗಣಿಸಿ ನಟ ಅರ್ಜುನ್ ಸರ್ಜಾ ಅವರಿಗೆ ಗೌರವ ಡಾಕ್ಟರೇಟ್ ನೀಡಲಾಗಿದೆ. ಆಕ್ಷನ್ ಕಿಂಗ್ ಅರ್ಜುನ್ ಸರ್ಜಾ ಅವರಿಗೆ ಡಾ.ಎಂ.ಜಿ.ಆರ್ ಎಜುಕೇಶನಲ್ ಅಂಡ್ ರಿಸರ್ಚ್ ಇನ್‌ಸ್ಟಿಟ್ಯೂಟ್ ಸರ್ವೀಸ್ ಕಡೆಯಿಂದ ಡಾಕ್ಟರೇಟ್ ಪ್ರದಾನ ಮಾಡಲಾಗಿದೆ.

ಸಿನಿರಂಗದಲ್ಲಿ ತಮ್ಮದೇಯಾದ ಪ್ರತಿಭೆ ಮೂಲಕ ಗುರುತಿಸಿಕೊಂಡು 50 ವರ್ಷಗಳ ಕಾಲ ಬಣ್ಣದ ಲೋಕದಲ್ಲಿ ಅರ್ಜುನ್ ಸರ್ಜಾ ಮಿಂಚಿ ಸೈ ಎನಿಸಿಕೊಂಡಿದ್ದಾರೆ. ಜೊತೆಗೆ ಹಲವಾರು ನಟರೊಂದಿಗೂ ಇವರು ತೆರೆ ಹಂಚಿಕೊಂಡಿದ್ದಾರೆ. ವಿಶೇಷವಾಗಿ ಅರ್ಜುನ್‌ಗೆ ಕನ್ನಕ್ಕಿಂತ ಹೆಚ್ಚಾಗಿ ತಮಿಳು ಸಿನಿಮಾಗಳ ಆಫರ್ ಬಂದಿದ್ದರಿಂದ ಅವರು ಕಾಲಿವುಡ್‌ನಲ್ಲೇ ಹೆಚ್ಚು ಸಿನಿಮಾ ಮಾಡಿದ್ದಾರೆ. ಅರ್ಜುನ್ ಸರ್ಜಾ ಅವರ ತಂದೆ ಹಿರಿಯ ನಟ ಶಕ್ತಿ ಪ್ರಸಾದ್, ತಾಯಿ ಲಕ್ಷ್ಮೀ, 1962ರ ಆಗಸ್ಟ್ 15ರಂದು ಕಲ್ಪತರ ನಾಡು ತುಮಕೂರಿನ ಮಧುಗಿರಿಯಲ್ಲಿ ಅರ್ಜುನ್ ಸರ್ಜಾ ಜನಿಸಿದರು. ಇವರ ಅಣ್ಣ ಕಿಶೋರ್ ಸರ್ಜಾ ಹೆಸರಾಂತ ನಿರ್ಮಾಪಕರು ಆಗಿದ್ದರು.

ಅರ್ಜುನ್ ಅವರು ಸ್ಯಾಂಡಲ್‌ವುಡ್‌ನಲ್ಲಿ ಬಾಲ ನಟರಾಗಿ ಮೊದಲು ಎಂಟ್ರಿಕೊಟ್ಟರು. 1981 ರಲ್ಲಿ ತೆರೆಕಂಡ ರಾಜೇಂದ್ರ ಸಿಂಗ್ ಬಾಬು ನಿರ್ದೇಶನದ ಸಿಂಹದ ಮರಿ ಸೈನ್ಯ ಮೂವಿಯ ಮೂಲಕ ಕನ್ನಡ ಸಿನಿ ರಂಗಕ್ಕೆ ಪಾದಾರ್ಪಣೆ ಮಾಡಿದರು. ಆದರೆ ತಮಿಳು ಚಿತ್ರರಂಗದಲ್ಲಿ ಹೆಚ್ಚಿನ ಅವಕಾಶ ದೊರೆತ ಕಾರಣ, ಅಲ್ಲಿಯೇ ಅವರು ಹೆಚ್ಚಿನ ಜನಪ್ರಿಯತೆಯನ್ನು ಗಳಿಸಿದರು. ಆಶಾ, ಪ್ರೇಮ ಯುದ್ಧ, ಪ್ರೇಮಾಗ್ನಿ ಸೇರಿದಂತೆ ಮುಂತಾದ ಹಲವಾರು ಕನ್ನಡ ಚಿತ್ರಗಳಲ್ಲಿ ನಟಿಸಿದ ಅರ್ಜುನ್ ಸರ್ಜಾ, ತಮಿಳಿನಲ್ಲಿ 'ನಂದ್ರಿ' ಚಿತ್ರದ ಮೂಲಕ ಪಾದಾರ್ಪಣೆ ಮಾಡಿದರು.

1984 ರಲ್ಲಿ ರಾಮನಾರಾಯಣನ್ ನಿರ್ದೇಶನದ ಈ ಚಿತ್ರದಲ್ಲಿ ಕಾರ್ತಿಕ್, ನಳಿನಿ, ಮಹಾಲಕ್ಷ್ಮಿ ಮುಖ್ಯ ಪಾತ್ರಗಳಲ್ಲಿ ನಟಿಸಿದ್ದರು. ಈ ಚಿತ್ರದ ಯಶಸ್ಸಿನ ನಂತರ ಕಡಮ್ಯೆ, ಇಳಮ್ಯೆ, ವೇಷಂ, ಎಂಗಲ್ ಕುರಲ್ ಮುಂತಾದ ಹಲವಾರು ಚಿತ್ರಗಳಲ್ಲಿ ನಾಯಕನಾಗಿ ನಟಿಸಿದರು. ಚಿಕ್ಕ ವಯಸ್ಸಿನಲ್ಲೇ ನಟನೆಗೆ ಎಂಟ್ರಿ ಕೊಟ್ಟು ದೊಡ್ಡ ಹೆಸರು ಗಳಿಸಿ ಉನ್ನತ ಮಟ್ಟಕ್ಕೇರಿದ ಅರ್ಜುನ್ ತಮ್ಮ 62ನೇ ವಯಸ್ಸಿನಲ್ಲೂ ಯುವ ನಟರಿಗೆ ಪೈಪೋಟಿ ನೀಡುವಂತೆ ನಟಿಸುತ್ತಿದ್ದಾರೆ. ಸದ್ಯ ಅರ್ಜುನ್ ಸರ್ಜಾ ಕನ್ನಡ, ಮಲಯಾಳಂ, ತೆಲುಗು, ತಮಿಳು, ಹಿಂದಿ ಹೀಗೆ ಭಾರತದ ಹಲವಾರು ಭಾಷೆಗಳ ಸಿನಿಮಾಗಳಲ್ಲಿ ಅಭಿನಯ ಮಾಡಿದ್ದಾರೆ.

ಇನ್ನು ದಳಪತಿ ವಿಜಯ್ ನಟಿಸಿದ ಲಿಯೋ ಸಿನಿಮಾ ಅರ್ಜುನ್ ಅವರ ಕೊನೆಯ ಸಿನಿಮಾ. ಇನ್ನು ಅರ್ಜುನ್ ಪುತ್ರಿ ಐಶ್ವರ್ಯ ಮತ್ತು ಉಮಾಪತಿ ಅವರ ಮದುವೆ ಈ ವರ್ಷ ನಡೆದಿದ್ದು, ಅರ್ಜುನ್ ಶೀಘ್ರದಲ್ಲೇ ತಮ್ಮ ಅಳಿಯ ಉಮಾಪತಿ ಅವರನ್ನು ನಾಯಕರನ್ನಾಗಿ ಮಾಡಿ 'ಎಳುಮಲೈ' ಚಿತ್ರದ ಎರಡನೇ ಭಾಗವನ್ನು ನಿರ್ದೇಶಿಸಲಿದ್ದಾರೆ ಎನ್ನಲಾಗಿದೆ. ಈ ಚಿತ್ರದಲ್ಲಿ ಅರ್ಜುನ್ ಸರ್ಜಾ ಕೂಡ ಮುಖ್ಯ ಪಾತ್ರದಲ್ಲಿ ನಟಿಸಲಿದ್ದಾರಂತೆ. ಶೀಘ್ರದಲ್ಲೇ ಈ ಚಿತ್ರದ ಬಗ್ಗೆ ಮಾಹಿತಿ ಹೊರಬೀಳುವ ಸಾಧ್ಯತೆ ಇರುವುದರಿಂದ ಅಭಿಮಾನಿಗಳು ಕೂಡಾ ಕಾತರದಿಂದ ಕಾಯುತ್ತಿದ್ದಾರೆ.

# ಆಕ್ಟಿಂಗ್ ಬರಲ್ಲ ಅಂತ ರಿಜೆಕ್ಟ್ ಮಾಡಿಬಿಟ್ರು, ನಾನ್ ಬಿಡ್ತೀನಾ?

ಗಾಡ್‌ಫಾದರ್ ಇಲ್ಲದೇ ಬಣ್ಣದ ಲೋಕಕ್ಕೆ ಎಂಟ್ರಿ ಕೊಟ್ಟು, ಇಲ್ಲಿ ಖ್ಯಾತಿ ಪಡೆಯುವುದು ಅಷ್ಟು ಸುಲಭದ ಮಾತೇ ಅಲ್ಲ ಬಿಡಿ. ಇದಾಗಲೇ ಸೀರಿಯಲ್ ಅಥವಾ ಸಿನಿಮಾಗಳಲ್ಲಿ ಖ್ಯಾತಿ ಪಡೆದಿರುವ ನಟ–ನಟಿಯರನ್ನು ಮಾತನಾಡಿದರೆ, ಅವರು ಪಟ್ಟಿರುವ ನೋವಿನ ದಿನಗಳು ತೆರೆದುಕೊಳ್ಳುತ್ತವೆ. ಅದೇ ರೀತಿಯಲ್ಲಿಯೇ ರಿಜೆಕ್ಟ್ ಆಗುವ ಮೂಲಕ ಸಿನಿ ಇಂಡಸ್ಟ್ರಿಗೆ ಕಾಲಿಟ್ಟವರು ಅಮೃತಧಾರೆ ಭೂಮಿಕಾ. ಭೂಮಿಕಾ ಅಂದರೆ ಸುಲಭದಲ್ಲಿ ಎಲ್ಲರಿಗೂ ತಿಳಿಯತ್ತೆ ಬಿಡಿ, ಏಕೆಂದ್ರೆ ಈ ಸೀರಿಯಲ್ ಮೂಲಕ ಅದ್ಭುತ ನಟನೆಯಿಂದ ಎಲ್ಲರ ಮನಸ್ಸನ್ನು ಗೆದ್ದಿದ್ದಾರೆ ನಟಿ. ಅಂದಹಾಗೆ ಇವರ ರಿಯಲ್ ಹೆಸರು ಛಾಯಾ ಸಿಂಗ್.

ಭೈರತಿ ರಣಗಲ್ ಚಿತ್ರದಲ್ಲಿಯೂ ನಟಿಸಿರುವ ಛಾಯಾ ಅವರು, ಇದೀಗ ಕಲಾ ಮಾಧ್ಯಮ ಯೂಟ್ಯೂಬ್ ಚಾನೆಲ್‌ನಲ್ಲಿ ತಾವು ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಟ್ಟಿರೋ ಆ ದಿನಗಳನ್ನು ನೆನಪಿಸಿಕೊಂಡಿದ್ದಾರೆ. ಆರಂಭದಲ್ಲಿ ಕಾಲೇಜಿಗೆ ಹೋಗುವ ದಿನದಲ್ಲಿ ಟ್ಯೂಷನ್ ಮಾಡೋಣ ಎಂದುಕೊಂಡು ಆ ದಿನಗಳಲ್ಲಿ ಬರುತ್ತಿದ್ದ ಯೆಲ್ಲೋ ಪೇಜಸ್ ತಡಕಾಡುತ್ತಿದ್ದರಂತೆ. ಆಗ ಶ್ಯಾಂಪೂ ಒಂದರ ಜಾಹೀರಾತಿಗೆ ಹುಡುಗಿಯರು ಬೇಕಾಗಿದ್ದಾರೆ ಎನ್ನೋದನ್ನು ನೋಡಿ ಇವರೂ ಅರ್ಜಿ ಹಾಕಿದ್ದಾರೆ. ಇವರಿಗೆ ಕರೆಯೂ ಬಂದು ಬಿಟ್ಟಿದೆ. ಫೋಟೋಶೂಟ್ ಅಂದ್ರೆ ಏನು ಎಂದೇ ಗೊತ್ತಿಲ್ಲದ ಛಾಯಾಗೆ ಫೋಟೋಶೂಟ್ ಮಾಡಿಸಿಯಾಯ್ತು. ಅದರಲ್ಲಿ ಸೆಲೆಕ್ಟ್ ಆಗಿ ಬಿಟ್ಟರು. ಕೊನೆಗೆ ಅವರಿಗೆ ದೂರದರ್ಶನ ಚಂದನದಲ್ಲಿ ಬರುತ್ತಿದ್ದ ಸಮಾಗಮ ಸೀರಿಯಲ್‌ಗೆ ಆಫರ್ ಬಂದಿತ್ತು.



ನಿರ್ದೇಶಕ ಪಿ.ಎಚ್.ವಿಶ್ವನಾಥ್ ಅವರು ಛಾಯಾ ಅವರಿಗೆ ಆಫರ್ ಕೊಟ್ಟಿದ್ದರು. ಆಗಿನ್ನೂ ಚಿಕ್ಕವರಾಗಿದ್ದ ಛಾಯಾರಿಗೆ ನಟನೆ ಗೊತ್ತೇ ಇರಲಿಲ್ಲ. ಹಲವಾರು ಬಾರಿ ಆಡಿಷನ್ ಮಾಡಿದ್ರೂ ಸರಿಯಾಗಿ ನಟಿಸಲೇ ಇಲ್ವಂತೆ! ಇವಳ್ಯಾಕೋ ತಮಗೆ ಸರಿ ಹೊಂದಲ್ಲ ಎಂದು ರಿಜೆಕ್ಟ್ ಮಾಡಿ ಮನೆಗೆ ಕಳಿಸಿದ್ರಂತೆ. ಆ ದಿನಗಳನ್ನು ನೆನಪಿಸಿಕೊಂಡಿರೋ ಛಾಯಾ, ಆಗ ನನಗೆ ತುಂಬಾ ಬೇಜಾರು ಆಗೋಯ್ತು. ನನಗೆ ಆಕ್ಟಿಂಗ್ ಬರಲ್ಲಾ ಅಂತ ಕಳಿಸ್ತೀರಾ, ನೋಡ್ತೇನೆ ಎಂದು ನನಗೆ ನಾನೇ ಚಾಲೆಂಜ್ ಹಾಕಿಕೊಂಡು ಬಿಟ್ಟೆ. ಯಾಕೆ ಬರಲ್ಲ, ಆಕ್ಟಿಂಗ್ ಮಾಡಿ ತೋರಿಸ್ತೇನೆ ಎಂದು ಮನಸ್ಸಿನಲ್ಲಿಯೇ ಅಂದುಕೊಂಡೆ. ಅಲ್ಲಿಂದ ಶುರುವಾದ ನನ್ನ ಜರ್ನಿ ಇಲ್ಲಿಯುವರೆಗೆ ಬಂದು ನಿಂತಿದೆ. ಒಂದು ವೇಳೆ ಅಂದು ಪಿ.ಎಚ್ .ವಿಶ್ವನಾಥ್ ಅವರು ನಿನಗೆ ಆಕ್ಟಿಂಗ್ ಬರಲ್ಲ ಎಂದು ಹೇಳದಿದ್ದರೆ, ನಿಜಕ್ಕೂ ನಾನು ನಿಂತ ನೀರಾಗಿ ಬಿಡ್ತಿದ್ನೋ ಏನೋ. ಅವರ ಮಾತೇ ನನಗೆ ಸ್ಫೂರ್ತಿ ಆಗಿ ಆ ಕ್ಟಿಂಗ್ ಕಲಿತೆ ಎಂದಿದ್ದಾರೆ.

ಹೀಗೆ ಹಲವು ಅವಕಾಶಗಳು ಬಂದವು. ಅನಂತ್‌ನಾಗ್ ಜೊತೆ ನಟಿಸುವ ಸಮಯದಲ್ಲಿ ಫಸ್ಟ್ ನೈಟ್ ಸೀನ್‌ನಲ್ಲಿ ನಟ ನಿನ್ನನ್ನು ಮುಟ್ಟಿದಾಗ ಭಯಪಟ್ಟು ನಡುಗಿ ಎದ್ದು ನಿಲ್ಲಬೇಕಿತ್ತು. ಆ ಆಕ್ಟಿಂಗ್ ನಾನು ಮಾಡಿದ್ದನ್ನು ನೋಡಿ ಖುದ್ದು ವಿಶ್ವನಾಥ್ ಅವರೇ ಗಾಬರಿ ಬಿದ್ದು ಹೋದರು. ನಾನು ರಿಜೆಕ್ಟ್ ಮಾಡಿದ ಹುಡುಗಿ ನಿಜಕ್ಕೂ ನೀನೇನಾ ಎಂದು ಕೇಳಿದರು. ಅವತ್ತಿನಿಂದಲೂ ಎಲ್ಲರಿಗೂ ನನ್ನದೇ ಉದಾಹರಣೆ ಕೊಟ್ಟು ಛಾಯಾಳನ್ನು ನೋಡಿ ಕಲಿಯಿರಿ ಎನ್ನುತ್ತಿದ್ದರು. ಅದು ನನಗೆ ಇನ್ನಷ್ಟು ಸ್ಫೂರ್ತಿ ತುಂಬಿತು. ನನಗೆ ಕೊನೆಗೆ ಅವರ ಚಿತ್ರಗಳಲ್ಲಿಯೂ ಹಲವು ಆಫರ್‌ಗಳು ಸಿಕ್ಕವು ಎಂದಿದ್ದಾರೆ ಛಾಯಾ. ಅಂದಹಾಗೆ ಛಾಯಾ ಅವರು, ಕನ್ನಡ ಮಾತ್ರವಲ್ಲದೇ ಮಲಯಾಳು, ತಮಿಳು ಚಿತ್ರಗಳಲ್ಲಿಯೂ ನಟಿಸಿದ್ದಾರೆ, ಈಗಲೂ ನಟಿಸುತ್ತಿದ್ದಾರೆ. ಅವರಿಗೆ ಈಗ 43 ವರ್ಷ ವಯಸ್ಸು. ಆದರೂ ಫಿಟ್‌ನೆಸ್ ಮತ್ತು ಸೌಂದರ್ಯ ಕಾಪಾಡಿಕೊಂಡಿರುವ ನಟಿ ಇನ್ನೂ ಯಂಗ್ ಆಗಿಯೇ ಕಾಣಿಸುತ್ತಾರೆ. ತಮಿಳಿನ 'ತುಂಟಾಟ' ಚಿತ್ರ, ಧನುಷ್ ಜೊತೆ 'ತಿರುಡಾ ತಿರುಡಿ' ಸಿನಿಮಾ ಅವರಿಗೆ ದೊಡ್ಡ ಯಶಸ್ಸು ತಂದುಕೊಟ್ಟಿತು. ಮಫ್ತಿ ಸಿನಿಮಾದಲ್ಲಿ ಶಿವರಾಜ್‌ಕುಮಾರ್ ತಂಗಿಯಾಗಿ ನಟಿಸಿದ್ದಾರೆ. ಕನ್ನಡದ 'ಖಾಕಿ' ಸಿನಿಮಾದಲ್ಲಿಯೂ ನಟಿಸಿದ್ದಾರೆ. ಬಂಗಾಳಿ ಭಾಷೆಯಲ್ಲಿ ಕಿ ಕೋರ್ ಬೋಝುಭೋ ತೊಮಾಕೆ ಸಿನಿಮಾಗೆ ನಿರ್ದೇಶನ ಮಾಡಿದ್ದಾರೆ ಕೂಡ. 2012ರಲ್ಲಿ ಛಾಯಾ ತಮಿಳು ನಟ ಕೃಷ್ಣ ಅವರ ಜೊತೆ ಮದುವೆಯಾಗಿದ್ದಾರೆ.



# ಅಪ್ಪಾಜಿಯನ್ನು ನಾನು ಎಂದಿಗೂ ಅನುಕರಿಸಲ್ಲ...

ನಟ ಶಿವರಾಜ್‌ಕುಮಾರ್ ಅವರ ನಟನೆಯ 'ಭೈರತಿ ರಣಗಲ್' ನಿನ್ನೆ ಬಿಡುಗಡೆಯಾಗಿದ್ದು, ಚೆನ್ನಾಗಿ ಓಡುತ್ತಿದೆ. ಮಫ್ತಿ ಚಿತ್ರದ ನಂತರದ ಭೈರತಿ ರಣಗಲ್ ಚಿತ್ರದ ಮೇಲೆ ಬಹು ನಿರೀಕ್ಷೆ ಹೊಂದಿರುವ ಅವರು, ಈ ಚಿತ್ರದ ಮೂಲಕ ತಮ್ಮ 127 ಚಿತ್ರಗಳ ಮೈಲಿಗಲ್ಲನ್ನು ತಲುಪಿದ್ದಾರೆ.

ಭೈರತಿ ರಣಗಲ್ ಚಿತ್ರವನ್ನ ನರ್ತನ್ ನಿರ್ದೇಶಿಸಿದ್ದಾರೆ. ಇದು ಶಿವರಾಜ್ ಅವರ ಮಫ್ತಿ ಚಿತ್ರದ ಪ್ರೀಕ್ವೆಲ್ ಚಿತ್ರ ಎನ್ನಲಾಗಿದೆ.


ಭೈರತಿ ರಣಗಲ್ ಚಿತ್ರದಲ್ಲಿ ರುಕ್ಮಿಣಿ ವಸಂತ್ ಇದ್ದಾರೆ. ಅಮೃತಧಾರೆ ಖ್ಯಾತಿಯ ಭೂಮಿಕಾ ಅಂದರೆ ಛಾಯಾ ಸಿಂಗ್ ಕೂಡ ನಟಿಸಿದ್ದಾರೆ. ಇದರ ನಡುವೆಯೇ, ಶಿವರಾಜ್ ಕುಮಾರ್ ಅವರು ಜಾಹೀರಾತು, ರಿಯಾಲಿಟಿ ಷೋಗಳಲ್ಲಿಯೂ ಬ್ಯುಜಿ ಆಗಿದ್ದಾರೆ. ಇದಾಗಲೇ ಕೆಲವು ಜಾಹೀರಾತುಗಳಿಗೆ ಶಿವಣ್ಣ ರಾಯಭಾರಿಯಾಗಿದ್ದರೆ, ಡಾನ್ಸ್ ರಿಯಾಲಿಟಿ ಷೋನಲ್ಲಿ ತೀರ್ಪುಗಾರರಾಗಿದ್ದಾರೆ.

ಸದ್ಯ ಶಿವರಾಜ್‌ಕುಮಾರ್ ಅವರು ಸದ್ಯ ಅನಾರೋಗ್ಯದಿಂದ ಬಳಲುತ್ತಿದ್ದು ಚಿಕಿತ್ಸೆ ಪಡೆಯುತ್ತಿದ್ದಾರೆ. ಈಗಾಗಲೇ ಚಿಕಿತ್ಸೆ ಪಡೆದುಕೊಳ್ಳುತ್ತಿರುವುದಾಗಿ ಕನ್‌ಫರ್ಮ್ ಮಾಡಿರುವ ಶಿವರಾಜ್ ಕುಮಾರ್ ಅವರು, ನನಗೆ ಅನಾರೋಗ್ಯ ಸಮಸ್ಯೆ ಇರುವಂಥದ್ದು ಮುಚ್ಚಿಡುವ ವಿಷಯ ಏನೂ ಅಲ್ಲ. ಚಿಕಿತ್ಸೆ ಪಡೆದುಕೊಳ್ಳುತ್ತಿದ್ದೇನೆ. ಹಲವು ಹಂತಗಳಲ್ಲಿ ಚಿಕಿತ್ಸೆ ನಡೆಯಲಿದೆ.

ಯಾರೂ ಆತಂಕ ಪಡುವ ಅವಶ್ಯಕತೆ ಇಲ್ಲ ಎಂದು ಅಭಿಮಾನಿಗಳಿಗೆ ಧೈರ್ಯ ತುಂಬಿದ್ದಾರೆ. ಇದೀಗ ಅವರು ಶಂಕರ್ ರ್‍ಯಾಪಿಡ್ ರಶ್ಮಿ ಯೂಟ್ಯೂಬ್ ಚಾನೆಲ್‌ಗೆ ನೀಡಿರುವ ಸಂದರ್ಶನದಲ್ಲಿ ತಮ್ಮ ಜೀವನದ ಹಲವಾರು ವಿಷಯಗಳ ಬಗ್ಗೆ ಮಾತನಾಡಿದ್ದಾರೆ. ಅದರಲ್ಲಿ ಅವರು ತಮ್ಮ ಕುಟುಂಬ, ಮಕ್ಕಳು, ಪುನೀತ್ ರಾಜ್ ಸೇರಿದಂತೆ ಹಲವರ ಬಗ್ಗೆ ಹೇಳಿದ್ದಾರೆ.

ತಂದೆ ಡಾ.ರಾಜ್‌ಕುಮಾರ್ ಅವರ ಆದರ್ಶ, ಅವರ ಜೀವನ ಶೈಲಿ ಇತ್ಯಾದಿಗಳ ಕುರಿತು ಹೇಳಿದ ಪ್ರಶ್ನೆಗಳಿಗೂ ಉತ್ತರಿಸಿದ್ದಾರೆ. ಆಗ ಶಿವರಾಜ್ ಕುಮಾರ್ ಅವರು, ಅನುಕರಣೆಯ ವಿಷಯ ಬಂದಾಗ, ನಾನು ನನ್ನ ತಂದೆಯನ್ನು ಅನುಕರಿಸಲು ಸಾಧ್ಯವೇ ಇಲ್ಲ. ಅವರ ಜೀವನ ಕ್ರಮವನ್ನು ಅನುಸರಿಸಬಹುದು ಅಷ್ಟೇ. ಮಾತ್ರವಲ್ಲದೇ ಅವರಿಂದ ಜೀವನ ಮೌಲ್ಯಗಳನ್ನು ಕಲಿಯುತ್ತೇನೆ. ಆದರೆ ಅವರ ಉಡುವ ಪಂಚೆ... ಇತ್ಯಾದಿಗಳನ್ನು ನಾನು ಅನುಕರಿಸಲು ಸಾಧ್ಯವಿಲ್ಲ. ಏಕೆಂದರೆ ಅದು ರಾಜ್‌ಕುಮಾರ್ ಅವರಿಗೆ ಮಾತ್ರ ಸೀಮಿತ. ನನ್ನನ್ನು ನೀವು ರಾಜ್‌ಕುಮಾರ್ ಮಾಡಬೇಡಿ. ಆದರೆ ಅವರ ಹೆಸರು ನನ್ನ ಜೊತೆ ಇದೆ. ಅದೇ ನನಗೆ ಸಾಕು ಎಂದು ಹೇಳಿದ್ದಾರೆ.

ನಾನು ಇದೇ ವೇಳೆ ಅಮಿತಾಭ್ ಬಚ್ಚನ್ ಮತ್ತು ಕಮಲ ಹಾಸನ್ ಅವರ ಫ್ಯಾನ್ ಕೂಡ. ಅವರ ನಟನೆ, ಸ್ಟೈಲ್‌ಗೆ ನಾನು ಫಿದಾ ಆಗಿದ್ದೇನೆ. ಹಾಗಂತ ಅವರನ್ನೂ ನಾನು ಅನುಕರಣೆ ಮಾಡಲು ಆಗುವುದಿಲ್ಲ. ಏಕೆಂದ್ರೆ ಅವ್ರು ನನ್ನ ಬಾಸ್ ಅಷ್ಟೇ. ಅದಕ್ಕಾಗಿ ನನ್ನ ಸ್ಟೈಲೇ ಬೇರೆ. ನನ್ನ ಅಟಿಟ್ಯೂಡ್ ಬೇರೆಯದ್ದೇ ಆಗಿರುತ್ತದೆ. ಆದ್ದರಿಂದ ಯಾರನ್ನೂ ನಾನು ಅನುಕರಿಸಲು ಆಗುವುದಿಲ್ಲ ಎಂದು ಹೇಳಿದ್ದಾರೆ.



**ನನಗೆ ಅನಾರೋಗ್ಯ ಸಮಸ್ಯೆ ಇರುವಂಥದ್ದು ಮುಚ್ಚಿಡುವ ವಿಷಯ ಏನೂ ಅಲ್ಲ. ಚಿಕಿತ್ಸೆ ಪಡೆದುಕೊಳ್ಳುತ್ತಿದ್ದೇನೆ. ಹಲವು ಹಂತಗಳಲ್ಲಿ ಚಿಕಿತ್ಸೆ ನಡೆಯಲಿದೆ. ಯಾರೂ ಆತಂಕ ಪಡುವ ಅವಶ್ಯಕತೆ ಇಲ್ಲ ಎಂದು ಅಭಿಮಾನಿಗಳಿಗೆ ಧೈರ್ಯ ತುಂಬಿದಾರೆ.**


# ಎಮರ್ಜೆನ್ಸಿಗೆ ಕೊನೆಗೂ ಬಿಡುಗಡೆಯ ಭಾಗ್ಯ

ಕಂಗನಾ ರಣಾವತ್ ಅವರು ಮಾಜಿ ಪ್ರಧಾನಿ ಇಂದಿರಾ ಗಾಂಧಿಯಾಗಿ ನಟಿಸಿರುವ ಎಮರ್ಜೆನ್ಸಿ ಚಿತ್ರಕ್ಕೆ ಈಗ ಇನ್ನೊಂದು ಡೇಟ್ ಫಿಕ್ಸ್ ಆಗಿದೆ. ಇದಾಗಲೇ ನಾಲ್ಕೈದು ಬಾರಿ ಡೇಟ್ ಫಿಕ್ಸ್ ಆಗಿ ಮುಂದಕ್ಕೆ ಸಾಗುತ್ತಲೇ ಇರುವ ಈ ಚಿತ್ರಕ್ಕೆ ಈಗ ಹೊಸ ಮುಹೂರ್ತ ಫಿಕ್ಸ್ ಮಾಡಲಾಗಿದೆ. ಝೀ ಸ್ಟುಡಿಯೋಸ್ ಮತ್ತು ಮಣಿಕರ್ಣಿಕಾ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ಬರುತ್ತಿರುವ 'ಎಮರ್ಜೆನ್ಸಿ' ಚಿತ್ರವು ಮೊದಲ ಮಹಿಳಾ ಪ್ರಧಾನಿ ಇಂದಿರಾಗಾಂಧಿಯನ್ನು ಆಧರಿಸಿದ ಮೆಗಾ–ಬಜೆಟ್ ಚಲನಚಿತ್ರವಾಗಿದೆ. ಇದಾಗಲೇ ಹಲವು ಬಾರಿ ಮುಂದೂಡಲ್ಪಟ್ಟಿದ್ದ ಈ ಚಿತ್ರಕ್ಕೆ ಬರುವ ಜನವರಿ 17ರ ಡೇಟ್ ಫಿಕ್ಸ್ ಆಗಿದ್ದು, ಈ ಬಗ್ಗೆ ಕಂಗನಾ ತಮ್ಮ ಸೋಷಿಯಲ್ ಮೀಡಿಯಾ ಖಾತೆಯಲ್ಲಿ ಮಾಹಿತಿ ಶೇರ್ ಮಾಡಿಕೊಂಡಿದ್ದಾರೆ.

ಈ ಚಿತ್ರದಲ್ಲಿ ಇರುವ ಕೆಲವು ಅಂಶಗಳ ವಿರುದ್ಧ ಕೋರ್ಟ್‌ಗೆ ಹೋಗಿದ್ದ ಹಿನ್ನೆಲೆಯಲ್ಲಿ, ಕೇಂದ್ರ ಚಲನಚಿತ್ರ ಪ್ರಮಾಣೀಕರಣ ಮಂಡಳಿಗೆ (ಅಃಈಅ) ಬಿಡುಗಡೆಗೆ ಅನುಮತಿ ನೀಡಿದ ಬಳಿಕವೂ ಚಿತ್ರ ಬಿಡುಗಡೆಯನ್ನು ಸ್ಥಗಿತಗೊಳಿಸಲಾಗಿತ್ತು. ಈ ಕುರಿತು ಈ ಹಿಂದೆ ತಿಳಿಸಿದ್ದ ನಟಿ, ಮಂಡಳಿಗೆ ಬೆದರಿಕೆ ಕರೆಗಳು ಬರುತ್ತಿವೆ. ಈ ಸಿನಿಮಾದಲ್ಲಿ ಎಮರ್ಜೆನ್ಸಿ ಸಮಯದಲ್ಲಿ ಉಂಟಾದ ಪಂಜಾಬ್ ಗಲಭೆ ತೋರಿಸಲಾಗಿದೆ. ಅದನ್ನು ತೋರಿಸದಂತೆ, ಇಂದಿರಾಗಾಂಧಿಯುವರ ಹತ್ಯೆಯುನ್ನು ತೋರಿಸದಂತೆ ಹೇಳಲಾಗುತ್ತಿದೆ. ಸತ್ಯವನ್ನು ಮರೆಮಾಚುವಂತೆ ತಿಳಿಸುತ್ತಿರುವುದನ್ನು ನೋಡಿದರೆ ವಿಚಿತ್ರವಾಗಿ ತೋರುತ್ತದೆ ಎಂದಿದ್ದರು. ಇದೀಗ ಕೋರ್ಟ್ ಆದೇಶದ ಪ್ರಕಾರ ಹಲವು ದೃಶ್ಯಗಳಿಗೆ ಕತ್ತರಿ ಹಾಕಲಾಗಿದೆ. ಈಗ ಚಿತ್ರದಲ್ಲಿ ಉಳಿದುಕೊಂಡಿರುವುದು ಏನು ಎಂದು ನೋಡುವ ಕುತೂಹಲದಲ್ಲಿ ಪ್ರೇಕ್ಷಕರಿದ್ದಾರೆ.

ಜೂನ್ 25, 1975ರಲ್ಲಿ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರು ಹೇರಿದ್ದ ರಾಷ್ಟ್ರೀಯ ತುರ್ತು ಪರಿಸ್ಥಿತಿ ( ಓಚಿಣುಂಟಿಚಿಟ ಇಟಜಡಿಂಜಟಿಛಿಥಿ) ಕರಾಳ ಮುಖವನ್ನು ಈ ಚಿತ್ರದಲ್ಲಿ ತೋರಿಸಲಾಗಿದೆ ಎಂದು ನಟಿ ಹೇಳಿದ್ದಾರೆ. 21 ತಿಂಗಳು ಕಾಲ ತುರ್ತು ಪರಿಸ್ಥಿತಿ ಅಸ್ತಿತ್ವದಲ್ಲಿ ಇತ್ತು. 1975, ಜೂನ್ 25ರಂದು ಭಾರತದ ಇತಿಹಾಸದಲ್ಲಿ ಕರಾಳ ದಿನವಾಗಿತ್ತು. ಸಂವಿಧಾನವನ್ನು ತಿರಸ್ಕರಿಸಿ ತುರ್ತು ಪರಿಸ್ಥಿತಿ ಹೇರಲಾಯ್ತು. ಭಾರತದ ಯುವ ಪೀಳಿಗೆ ಇದನ್ನ ಎಂದು ಮರೆಯೋದಿಲ್ಲ ಎಂದಿರುವ ನಟಿ, ತಮ್ಮ ಈ ಚಿತ್ರವನ್ನು ವೀಕ್ಷಿಸಿ, ನಮ್ಮ ಇತಿಹಾಸವನ್ನು ತಿಳಿದುಕೊಳ್ಳಿ ಎಂದಿದ್ದಾರೆ.

ಈ ಕುರಿತು ಈ ಹಿಂದೆ ಹೇಳಿಕೆ ನೀಡಿದ್ದ ಅವರು, ಭಾರತೀಯ ಪ್ರಜಾಪ್ರಭುತ್ವದ ಇತಿಹಾಸದ ಕರಾಳ ಘಟ್ಟವನ್ನು ನೋಡಿ ಮತ್ತು ಅಧಿಕಾರದ ಲಾಲಸೆಯನ್ನು ನೋಡಿ ಎಂದಿದ್ದಾರೆ. ಚಿತ್ರದಲ್ಲಿ ಅನುಪಮ್ ಖೇರ್, ಮಿಲಿಂದ್ ಸೋಮನ್, ಶ್ರೇಯಸ್ ತಲ್ಪಾಡೆ ಮತ್ತು ದಿವಂಗತ ಸತೀಶ್ ಕೌಶಿಕ್ ಅವರ ಸಂಗೀತವನ್ನು




ಸಂಚಿತ್ ಬಲ್ಹಾರಾ ಅವರು ಸಂಯೋಜಿಸಿದ್ದಾರೆ. ಕಥೆ ಮತ್ತು ಸಂಭಾಷಣೆಗಳನ್ನು ರಿತೇಶ್ ಷಾ ಬರೆದಿದ್ದಾರೆ. ಚಿತ್ರದ ಬಿಡುಗಡೆ ಪದೇ ಪದೇ ಮುಂದೂಡುತ್ತಲೇ ಹೋಗುತ್ತಿತ್ತು. ನವೆಂಬರ್ 24, 2023 ರಂದು ಬಿಡುಗಡೆಯಾಗಬೇಕಿತ್ತು. ನಂತರ ಜೂನ್ 14ರಂದು ಚಿತ್ರ ರಿಲೀಸ್ ಆಗಲಿದೆ ಎನ್ನಲಾಗಿತ್ತು. ಕಂಗನಾ ಥೇಟ್ ಇಂದಿರಾ ಗಾಂಧಿಯವರಂತೆ ಮೇಕಪ್ ಮಾಡಿಕೊಂಡು, ಅವರಂತೆಯೇ ಟ್ರೇಲರ್ ಕಳೆದ ವರ್ಷವೇ ಬಿಡುಗಡೆಯಾಗಿತ್ತು. ಕಂಗನಾ ಅವರ ಈ ನಟನೆಗೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಆದರೆ ಯಾಕೋ ಈ ಚಿತ್ರಕ್ಕೆ ಇನ್ನೂ ಮುಹೂರ್ತ ಕೂಡಿ ಬರುತ್ತಲೇ ಇರಲಿಲ್ಲ. ಇದೀಗ ಬಿಜೆಪಿಯ ಸಂಸದೆ ಆದ ಮೇಲೆ ನಟಿಯ ಚಿತ್ರದ ಬಗ್ಗೆ ಇನ್ನಷ್ಟು ಕುತೂಹಲ ಮನೆ ಮಾಡಿದೆ. ಈ ಚಿತ್ರವನ್ನು ಸುಮಾರು 25 ಕೋಟಿ ರೂಪಾಯಿಗಳ ಬಜೆಟ್‌ನಲ್ಲಿ ರೆಡಿ ಮಾಡಲಾಗಿದೆ ಎನ್ನಲಾಗುತ್ತಿದೆ.

ಈ ಚಿತ್ರಕ್ಕೆ ಇದಾಗಲೇ ಬಿಡುಗಡೆಗೆ ಅನುಮತಿ ಸಿಕ್ಕಿತ್ತು. ಈ ನಡುವೆಯೇ, ದೆಹಲಿಯ ಶಿರೋಮಣಿ ಅಕಾಲಿದಳ(ಎಸ್‌ಎಡಿ) 'ಎಮರ್ಜೆನ್ಸಿ' ಚಿತ್ರದ ಬಿಡುಗಡೆಯನ್ನು ತಡೆಯುವಂತೆ ಕೋರಿ ಸಿಬಿಎಫ್‌ಸಿಗೆ ನೊಟೀಸ್ ನೀಡಿತ್ತು. ಈ ಚಿತ್ರ 'ಕೋಮು ಉದ್ವಿಗ್ನತೆಯನ್ನು ಪ್ರಚೋದಿಸುತ್ತದೆ' ಮತ್ತು 'ತಪ್ಪು ಮಾಹಿತಿ ಹರಡಬಹುದು' ಎಂದು ಅದರಲ್ಲಿ ಉಲ್ಲೇಖಿಸಲಾಗಿದೆ. ಚಿತ್ರದ ಟ್ರೇಲರ್ ನೋಡಿದರೆ, ಸಿಖ್ ಸಮುದಾಯವನ್ನು ತಪ್ಪಾಗಿ ಪ್ರತಿನಿಧಿಸುವುದು ಮಾತ್ರವಲ್ಲದೆ ದ್ವೇಷ ಮತ್ತು ಸಾಮಾಜಿಕ ಅಪಶ್ರುತಿಯನ್ನು ಉತ್ತೇಜಿಸುವ ತಪ್ಪಾದ ಐತಿಹಾಸಿಕ ಸಂಗತಿಗಳನ್ನು ಚಿತ್ರಿಸಲಾಗಿದೆ ಎನ್ನುವುದು ಅವರ ವಾದವಾಗಿತ್ತು. ಒಟ್ಟಿನಲ್ಲಿ ಚಿತ್ರ ಇನ್ನಷ್ಟು ಕುತೂಹಲ ಕೆರಳಿಸಿದೆ

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-16 Email-mussanje2010@gmail.com, Phone: **9448074878**